23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 341 | ನವದೆಹಲಿ | ಬೆಲೆ ₹10 | ಜೂನ್ 15 2026, ಸೋಮವಾರ

## ಒಳಪುಟಗಳಲ್ಲಿ



ಕಚ್ಚಾತೈಲ ಆಮದು ತಡೆಯಲು ಶೇ.100 ರಷ್ಟು ಎಥೆನಾಲ್ ಇಂಧನ ಬಳಕೆ: ಕೇಂದ್ರ ಸಚಿವ ಗಡ್ಕರಿ ಅನುಮೋದನೆ - ಪು.4

ನಿರ್ಮಲಾ ಸೀತಾರಾಮನ್ ಅತ್ಯಂತ ಯಶಸ್ವಿ ಹಣಕಾಸು ಮಂತ್ರಿಗಳಲ್ಲಿ ಒಬ್ಬರು: ತೇಜಸ್ವಿ ಸೂರ್ಯ - ಪು.5

ಕನ್ನೇರಿ ಶ್ರೀಗಳಿಗೆ ಪ್ರವೇಶ ನಿಷೇಧಿಸದಿದ್ದರೆ ಬಸವಕಲ್ಯಾಣ ಬಂದ್ ಎಂದು ಎಚ್ಚರಿಕೆ - ಪು.6

ಸ್ವಕ್ಷೇತ್ರ ಕೊರಟಗೆರೆಗೆ ಭೇಟಿ ನೀಡಿದ ಡಿಸಿಎಂ ಪರಂಗೆ ಅದ್ದೂರಿ ಸ್ವಾಗತ - ಪು.7

# ಫ್ರಾನ್ಸ್‌ನಲ್ಲಿ ಮೋದಿ ಭಾರತ್ ಇನ್ನೋವೇಟ್ಸ್ ಉದ್ಘಾಟನೆ

## ಭಾರತದೊಂದಿಗೆ ಪಾಲುದಾರಿಕೆಗೆ ಜಾಗತಿಕ ಹೂಡಿಕೆದಾರರಿಗೆ ಪ್ರಧಾನಿ ಆಹ್ವಾನ

**ನೈಸ್, ಜೂ.14: ಫ್ರಾನ್ಸ್‌ನ ನೈಸ್ ನಗರದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಭಾನುವಾರ ಜಂಟಿಯಾಗಿ "ಭಾರತ್ ಇನ್ನೋವೇಟ್ಸ್ 2026" ಉದ್ಘಾಟಿಸಿದರು,**



ಫ್ರಾನ್ಸ್‌ನಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಭಾನುವಾರ ಪ್ರಧಾನಮಂತ್ರಿ ನರೇಂದ್ರ ಮೋದಿ ದ್ವಿಪಕ್ಷೀಯ ಸಭೆ ನಡೆಸಿದರು.

ಇದು ಭಾರತದ ವೇಗವಾಗಿ ಬೆಳೆಯುತ್ತಿರುವ ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಯುರೋಪಿಯನ್ ಹೂಡಿಕೆದಾರರು, ಸಂಶೋಧನಾ ಸಂಸ್ಥೆಗಳು, ವಿಶ್ವವಿದ್ಯಾಲಯಗಳು ಮತ್ತು ತಂತ್ರಜ್ಞಾನ ನಾಯಕರೊಂದಿಗೆ ಸಂಪರ್ಕಿಸುವ ಗುರಿಯನ್ನು ಹೊಂದಿರುವ ಮಹತ್ವಾಕಾಂಕ್ಷೆಯ ವೇದಿಕೆಯನ್ನು ಅನಾವರಣಗೊಳಿಸಿತು. ಉದ್ಯಮಿಗಳು, ಸಾಹಸೋದ್ಯಮ ಬಂಡವಾಳಶಾಹಿಗಳು, ಸಂಶೋಧಕರು ಮತ್ತು ಕೈಗಾರಿಕಾ ನಾಯಕರ ಪ್ರೇಕ್ಷಕರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಈ ಉಪಕ್ರಮವನ್ನು ಭಾರತ–ಫ್ರಾನ್ಸ್‌ನ ಆಳವಾದ ಪಾಲುದಾರಿಕೆಯ ಪ್ರತಿಬಿಂಬ ಎಂದು ಬಣ್ಣಿಸಿದರು, ಎರಡೂ ದೇಶಗಳ ನಡುವಿನ ಸಂಬಂಧವು ಹಂಚಿಕೆಯ ಹಿತಾಸಕ್ತಿಗಳಲ್ಲಿ ಮಾತ್ರವಲ್ಲದೆ ಭವಿಷ್ಯದ ಸಾಮಾನ್ಯ ದೃಷ್ಟಿಕೋನದಲ್ಲಿಯೂ ಆಧಾರವಾಗಿದೆ ಎಂದು ಹೇಳಿದರು. ವಿಭಿನ್ನ ದೇಶಗಳು ವ್ಯಾಪಾರದಲ್ಲಿ ತೊಡಗುತ್ತವೆ ಮತ್ತು ಕಾರ್ಯತಂತ್ರದ ಪಾಲುದಾರಿಕೆಗಳನ್ನು ನಿರ್ಮಿಸುತ್ತವೆ, ಆದರೆ ಕೆಲವು ಸಂಬಂಧಗಳು ಹಂಚಿಕೆಯ ಆಸಕ್ತಿಗಳು ಮತ್ತು ಹಂಚಿಕೆಯ ದೃಷ್ಟಿಕೋನದಿಂದ ನಡೆಸಲ್ಪಡುತ್ತವೆ. ಭಾರತ ಮತ್ತು ಫ್ರಾನ್ಸ್ ನಡುವಿನ ಸಂಬಂಧವು ಅಂತಹ ಒಂದು ಪಾಲುದಾರಿಕೆಯಾಗಿದೆ" ಎಂದು ಮೋದಿ ಹೇಳಿದರು. "ಈ ವರ್ಷದ ಆರಂಭದಲ್ಲಿ ಪ್ರಾರಂಭಿಸಲಾದ ಭಾರತ–ಫ್ರಾನ್ಸ್ ನಾವೀನ್ಯತೆಯ ವರ್ಷದ ಭಾಗವಾಗಿ ನಡೆದ ಈ ಕಾರ್ಯಕ್ರಮವು, ಎರಡೂ ರಾಷ್ಟ್ರಗಳ ನವೋದ್ಯಮಗಳು, ಹೂಡಿಕೆದಾರರು, ಶೈಕ್ಷಣಿಕ ಸಂಸ್ಥೆಗಳು ಮತ್ತು ತಂತ್ರಜ್ಞಾನ ತಜ್ಞರ ನಡುವಿನ ಸಹಯೋಗವನ್ನು ಬೆಳೆಸಲು ಮತ್ತು ಯುರೋಪಿಯನ್ ಮಾರುಕಟ್ಟೆಗಳಲ್ಲಿ ಭಾರತೀಯ ನಾವೀನ್ಯಕಾರರಿಗೆ ಅವಕಾಶಗಳನ್ನು ವಿಸ್ತರಿಸಲು ವಿನ್ಯಾಸಗೊಳಿಸಲಾಗಿದೆ. ಬಲವಾದ ಅಂತರರಾಷ್ಟ್ರೀಯ ಸಹಕಾರಕ್ಕಾಗಿ ಕರೆ ನೀಡಿದ ಮೋದಿ, ಜಂಟಿ ಸಂಶೋಧನೆ, ಸಹ–ಅಭಿವೃದ್ಧಿ, ಹಂಚಿಕೆಯ ಉತ್ಪಾದನೆ ಮತ್ತು ದೀರ್ಘಾವಧಿಯ ಪಾಲುದಾರಿಕೆಗಳ ಮೂಲಕ ಭಾರತದೊಂದಿಗೆ ಬಾಂಧವ್ಯವನ್ನು ಗಾಢವಾಗಿಸಲು ಪ್ರಪಂಚದಾದ್ಯಂತದ ಹೂಡಿಕೆದಾರರು, ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು ಮತ್ತು ಉದ್ಯಮಿಗಳನ್ನು ಆಹ್ವಾನಿಸಿದರು. "ಭಾರತ್ ಇನ್ನೋವೇಟ್ಸ್ ಭಾರತದೊಂದಿಗೆ ಜಾಗತಿಕ ನಾವೀನ್ಯತೆಯ ಮುಂದಿನ ಅಧ್ಯಾಯವನ್ನು ಸಹ–ರಚಿಸಲು ಜಗತ್ತಿಗೆ ಆಹ್ವಾನವಾಗಿದೆ" ಎಂದು ಅವರು ಹೇಳಿದರು. "ಭಾರತಕ್ಕೆ ಬನ್ನಿ. ನಮ್ಮೊಂದಿಗೆ ಕೆಲಸ ಮಾಡಿ. ಭಾರತದಲ್ಲಿ ವಿನ್ಯಾಸ ಮಾಡಿ. ಭಾರತದಲ್ಲಿ ಅಭಿವೃದ್ಧಿಪಡಿಸಿ. "ಭಾರತ್ ಇನ್ನೋವೇಟ್ಸ್‌ನ ಉಡಾವಣೆಯು ಭಾರತ–ಫ್ರಾನ್ಸ್ ನಾವೀನ್ಯತೆಯ ವರ್ಷದ ಪ್ರಮುಖ ಅಂಶವಾಗುವ ನಿರೀಕ್ಷೆಯಿದೆ ಮತ್ತು ರಕ್ಷಣೆ, ಶುದ್ಧ ಇಂಧನ, ಹವಾಮಾನ ಕ್ರಿಯೆ, ಕೃತಕ ಬುದ್ಧಿಮತ್ತೆ, ಡಿಜಿಟಲ್ ತಂತ್ರಜ್ಞಾನಗಳು, ಬಾಹ್ಯಾಕಾಶ ಸಹಕಾರ ಮತ್ತು ಜಾಗತಿಕ ಆಡಳಿತ ಸೇರಿದಂತೆ ಕ್ಷೇತ್ರಗಳಲ್ಲಿ ನವದೆಹಲಿ ಮತ್ತು ಪ್ಯಾರಿಸ್ ನಡುವೆ ವಿಸ್ತರಿಸುತ್ತಿರುವ ಕಾರ್ಯತಂತ್ರದ ಒಮ್ಮುಖವನ್ನು ಪ್ರತಿಬಿಂಬಿಸುತ್ತದೆ. ಈ ಉಪಕ್ರಮವು ಭಾರತೀಯ ನವೋದ್ಯಮಗಳು ಮತ್ತು ನಾವೀನ್ಯಕಾರರಿಗೆ ಯುರೋಪಿಯನ್ ಹೂಡಿಕೆ, ಸಂಶೋಧನಾ ಜಾಲಗಳು ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಗಳಿಗೆ ಹೆಚ್ಚಿನ ಪ್ರವೇಶವನ್ನು ಒದಗಿಸುತ್ತದೆ ಮತ್ತು ಭಾರತ–ಫ್ರಾನ್ಸ್ ಪಾಲುದಾರಿಕೆಯ ಕೇಂದ್ರ ಆಧಾರಸ್ತಂಭವಾಗಿ ನಾವೀನ್ಯತೆಯನ್ನು ಬಲಪಡಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

# ಗೃಹಲಕ್ಷ್ಮಿ – ಗೃಹಜ್ಯೋತಿ ಯೋಜನೆ ನಿಲ್ಲದು: ಜನತೆಗೆ ಆತಂಕ ಬೇಡ– ಡಿಕೆಶಿ



**ಬೆಂಗಳೂರು, ಜೂ.14:** ಕಾಂಗ್ರೆಸ್ ಸರ್ಕಾರದ ಹೆಮ್ಮೆಯ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಈ ಬಗ್ಗೆ ವಿಪಕ್ಷಗಳು ಹಬ್ಬಿಸುತ್ತಿರುವ ಸುಳ್ಳು ಸುದ್ದಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕೆಲವರು ಸತ್ತವರ ಹೆಸರಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ, ಖಾತೆ ತೆರೆದು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಹೀಗಾಗಿ ಗ್ಯಾರಂಟಿ ಯೋಜನೆ ಫಲಾನುಭವಿಗಳ ದೃಢೀಕರಣಕ್ಕಾಗಿ, ಅವರ ಹೆಸರು, ವಿಳಾಸ, ಅಕೌಂಟ್ ನಂಬರ್ ಖಚಿತಪಡಿಸಿಕೊಳ್ಳಲು ಮತ್ತೆ ಅರ್ಜಿ ಸಲ್ಲಿಸಲು ಹೇಳಲಾಗಿದೆಯೇ, ಹೊರತು ಯೋಜನೆಗಳನ್ನು ನಿಲ್ಲಿಸಲು ಅಲ್ಲ. ಎಲ್ಲ ಗ್ಯಾರಂಟಿ ಯೋಜನೆಗಳು ಶೇಕಡಾ ನೂರಕ್ಕೆ ನೂರರಷ್ಟು ಮುಂದು ವರೆಯುತ್ತವೆ. ಯಾರೂ ಆತಂಕಪಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳು, ಸಿಇಒಗಳು, ಪೊಲೀಸ್ ವರಿಷ್ಠಾಧಿಕಾರಿಗಳ ಜತೆ ವಿಧಾನಸೌಧದಲ್ಲಿ ಶನಿವಾರ ಸಭೆ ನಡೆಸಿ ಬಳಿಕ ಮಾಧ್ಯಮಗೋಷ್ಠಿ ನಡೆಸಿದ ಸಿಎಂ, ಅನರ್ಹರನ್ನು ಕೈಬಿಟ್ಟು ಕೇವಲ ನೈಜ ಅರ್ಹ ಫಲಾನುಭವಿಗಳಿಗೆ ಮಾತ್ರ ಯೋಜನೆ ತಲುಪಿಸಲು ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಎರಡೂ ಗ್ಯಾರಂಟಿಗಳಿಗೆ ಸಾರ್ವಜನಿಕರು ಮತ್ತೊಮ್ಮೆ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗುತ್ತದೆ. ಆ ಮೂಲಕ ಮಾಹಿತಿಗಳನ್ನು ಪಡೆದು, ಅನರ್ಹರನ್ನು ಕೈ ಬಿಡಲಾಗುವುದು ಎಂದು ತಿಳಿಸಿದ್ದರು. ಗೃಹಲಕ್ಷ್ಮಿ ಯೋಜನೆಯಲ್ಲಿ ಅನರ್ಹರು 100 ಕೋಟಿ ರೂ. ಹಣ ತೆಗೆದುಕೊಂಡಿದ್ದಾರೆ. ಅದರ ತನಿಖೆ ಮಾಡಿದ್ದೇವೆ. ಕರೆ ಮಾಡಿದರೆ ಯಾರದ್ದೋ ಮನೆಗೆ ದೂರವಾಣಿ ಕರೆ ಹೋಗುತ್ತಿದೆ. ಯಾವ ಬ್ಯಾಂಕ್‌ಗೆ ಹಣ ಜಮೆ ಆಗುತ್ತಿದೆ..? ಅರ್ಹ ಫಲಾನುಭವಿಗಳಿಗೇ ಹಣ ಹೋಗುತ್ತಿದೆಯೇ..? ಇತರೆ ಯಾವುದಾದರೂ ಯೋಜನೆಗಳಿಗೆ, ಸಾಲಕ್ಕೆ ಆ ಹಣ ಹೋಗುತ್ತಿದೆಯಾ ಎಂಬುದನ್ನು ತಿಳಿಯಬೇಕಾಗಿದೆ. ಹೀಗಾಗಿ ಮತ್ತೆ ಅರ್ಜಿ ಕೊಡಬೇಕು. ಗ್ಯಾರಂಟಿ ಹಣ ನಿಲ್ಲಿಸಲ್ಲ. ಮನೆಯ ಅರ್ಹ ಯಜಮಾನಿಗೇ ಹಣ ಹೋಗಬೇಕು. ಹಣ ದುರುಪಯೋಗ ಆಗುವುದಕ್ಕೆ ಕಡಿವಾಣ ಹಾಕಬೇಕಾಗಿದೆ ಎಂದಿದ್ದರು.ಮನೆ ಮನೆಗೆ ಹೋಗಿ ಭೇಟಿನೀಡಿ ಅರ್ಜಿ ಕೊಟ್ಟು ಮಾಹಿತಿ ಕೇಳಿದ್ದೇವೆ. ಗೃಹಜ್ಯೋತಿ ಯೋಜನೆಯಡಿ ಸದ್ಯ 1.64 ಲಕ್ಷ ಫಲಾನುಭವಿಗಳಿದ್ದಾರೆ. ಅವರೇ ಫಲಾನುಭವಿಗಳಾ, ಅರ್ಹರಾ..? ಹಲವೆಡೆ ಗೃಹಜ್ಯೋತಿಯಡಿ ಗೃಹ ಬಳಕೆ ಜೊತೆಗೆ ವಾಣಿಜ್ಯ ಉದ್ದೇಶಕ್ಕೂ ಬಳಸಲಾಗುತ್ತಿದೆ. ಹೀಗಾಗಿ ನಾವು ಅರ್ಜಿಯನ್ನು ಕೊಡಲು ಆರಂಭ ಮಾಡುತ್ತೇವೆ. ಮಾಹಿತಿ ಪಡೆದು ಅರ್ಹರಿಗೆ ಮಾತ್ರ ಯೋಜನೆ ತಲುಪುವಂತೆ ಮಾಡುತ್ತೇವೆ ಎಂದು ಹೇಳಿದ್ದರು.

**ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಯೋಜನೆಗಳಿಗೆ ಸೇವಾ ಸಿಂಧು ಮೂಲಕ ಮರು ಅರ್ಜಿ ಸಲ್ಲಿಸಬಹುದು. ಆಧಾರ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯ ನೆರವಿನಿಂದ ನೋಂದಣಿ ಮಾಡಬಹುದು. ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ನಾಡ ಕಚೇರಿಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆಧಾರ್ ಕಾರ್ಡ್, ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಪಾಸ್‌ಬುಕ್, ರೇಷನ್ ಕಾರ್ಡ್ (ಪಡಿತರ ಚೀಟಿ) ಸರ್ಕಾರದಿಂದ ಅಧಿಕೃತ ಮಾರ್ಗಸೂಚಿ ಪ್ರಕಟವಾದ ಬಳಿಕ ಮರು ನೋಂದಣಿ ಪ್ರಕ್ರಿಯೆ, ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಪರಿಷ್ಕೃತ ನಿಯಮಗಳ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ.**

# ಕರ್ನಾಟಕ ಕಳೆದ 10 ವರ್ಷಗಳಲ್ಲಿ ಕೇಂದ್ರದಿಂದ ಶೇ.76 ರಷ್ಟು ಅನುದಾನ ಪಡೆದಿದೆ

**ಬೆಂಗಳೂರು, ಜೂ.14: ಕೇಂದ್ರ ಸರ್ಕಾರ ಯಾವುದೇ ಅನುದಾನ ನೀಡುತ್ತಿಲ್ಲ ಎಂದು ಕರ್ನಾಟಕ ಸರ್ಕಾರ ನಿರಂತರವಾಗಿ ಹೇಳಿಕೊಂಡು ಬರುತ್ತಿದೆ. ಆದರೆ ಯುಪಿಎ ಸರ್ಕಾರದ 10 ವರ್ಷಗಳ ಅವಧಿಯಲ್ಲಿ ರಾಜ್ಯಕ್ಕೆ ಸಿಗುತ್ತಿದ್ದ ಅನುದಾನಕ್ಕಿಂತ ಕೇವಲ ಒಂದು ವರ್ಷದಲ್ಲೇ ಕರ್ನಾಟಕಕ್ಕೆ ಶೇ.76ಕ್ಕೂ ಹೆಚ್ಚು ಅನುದಾನ ಕರ್ನಾಟಕಕ್ಕೆ ದೊರೆಯುತ್ತಿದೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.**

**ಬೆಂಗಳೂರಿನಲ್ಲಿ ಬಿಜೆಪಿ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಹಣಕಾಸು ಆಯೋಗದ ಅಂಕಿಅಂಶಗಳನ್ನೇ ಇಂದು ನಿಮ್ಮ ಮುಂದಿಡುತ್ತಿದ್ದೇನೆ, 2014ರಿಂದ 2026ರ ನಡುವೆ 4 ಲಕ್ಷ ಕೋಟಿ ರೂಪಾಯಿ ತೆರಿಗೆ ಕರ್ನಾಟಕಕ್ಕೆ ನೀಡಲಾಗಿದೆ. ಅದು 2014ಕ್ಕಿಂತ ಹಿಂದೆ ಯುಪಿಎ ಅವಧಿಯಲ್ಲಿ ನೀಡಿದ್ದಕ್ಕಿಂತ 5 ಪಟ್ಟು ಹೆಚ್ಚಾಗಿದೆ ಎಂದರು. ಕರ್ನಾಟಕಕ್ಕೆ ಸಿಕ್ಕಿದ್ದು 82 ಸಾವಿರ ವರ್ಸಸ್ 4 ಲಕ್ಷ ಕೋಟಿ ರೂಪಾಯಿ, ಅನುದಾನ ಮತ್ತು ಸಹಾಯ 2.71 ಲಕ್ಷ ಕೋಟಿ 2014ರಿಂದ 2026ರ ಮಧ್ಯೆ ಆದರೆ ಯುಪಿಎಯ 10 ವರ್ಷದ ಅವಧಿಯಲ್ಲಿ 60 ಸಾವಿರ ಕೋಟಿ ರೂಪಾಯಿ ಎಂದರು.**



ಬೆಂಗಳೂರಿನ ಮೈಸೂರು ಬ್ಯಾಂಕ್ ವೃತ್ತದಲ್ಲಿ ನಡೆದ ಸ್ವಚ್ಛ ಭಾರತ ಅಭಿಯಾನದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭಾಗವಹಿಸಿದ್ದರು.

**ಪ್ರಧಾನಿ ಮೋದಿಯವರು, ರಾಜ್ಯಗಳು ಅಭಿವೃದ್ಧಿಯಾಗದೆ ದೇಶ ಅಭಿವೃದ್ಧಿ ಹೊಂದುವುದಿಲ್ಲ ಎಂಬ ಪರಿಕಲ್ಪನೆ ಹೊಂದಿರುವವರು, ಹೀಗಾಗಿ ರಾಜ್ಯಗಳಿಗೆ ಬಡ್ಡಿರಹಿತ ಸಾಲ ನೀಡುತ್ತಿದ್ದೇವೆ. 18 ಸಾವಿರ ಕೋಟಿಗಿಂತಲೂ ಅಧಿಕ ಹಣವನ್ನು ಹಣಕಾಸು ಆಯೋಗದ ಶಿಫಾರಸು ಇಲ್ಲದಿದ್ದರೂ ರಾಜ್ಯಗಳಿಗೆ ನೀಡಿದ್ದೇವೆ, ಅದು ಕರ್ನಾಟಕಕ್ಕೂ ಸಿಕ್ಕಿದೆ ಎಂದರು.ಪ್ರಸ್ತುತ ಹಣಕಾಸು ವರ್ಷದಲ್ಲಿ 63 ಸಾವಿರ ಕೋಟಿ ರೂಪಾಯಿ ಆದಾಯ ಹಂಚಿಕೆ ಕರ್ನಾಟಕಕ್ಕೆ ಆಗಿದೆ ಎಂದು ನಿರ್ಮಲಾ ಸೀತಾರಾಮನ್ ಅಂಕಿ ಅಂಶ ನೀಡಿದರು.**

**10 ವರ್ಷಗಳಲ್ಲಿ ಯುಪಿಎ ಸರ್ಕಾರ ನೀಡಿದ್ದನ್ನು ನಾವು ಈಗ ಶೇ.76ರಷ್ಟು ಹೆಚ್ಚು ನಾವು ಕರ್ನಾಟಕಕ್ಕೆ ನೀಡುತ್ತಿದ್ದೇವೆ ಎಂದರು. ಲೋಕಸಭೆ ಪ್ರತಿಪಕ್ಷ ನಾಯಕ ಹಾಗೂ ಕಾಂಗ್ರೆಸ್ ನಾಯಕರು ದೇಶದ ಆರ್ಥಿಕತೆಯನ್ನು ಮೇಲಕ್ಕೆತ್ತಲು ಜನರು ನೀಡಿರುವ ಕೊಡುಗೆಯನ್ನು ಕಡೆಗಣಿಸುತ್ತಿದ್ದು, ಅನುಮಾನಗಳನ್ನು ಸೃಷ್ಟಿಸುವ ಮೂಲಕ ನಾಗರಿಕರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು.**

# ಸರ್ಕಾರದ ಜಾಹೀರಾತಿನಲ್ಲಿ ಡಿಸಿಎಂ ಪರಮೇಶ್ವರ ಫೋಟೋ ಕಣ್ಮರೆ: ಏನಾಯಿತು ಕಾಂಗ್ರೆಸ್ ಅಹಿಂದ ಜಪ

## ರಾಜ್ಯ ಸರ್ಕಾರದ ತದ್ವಿರುದ್ಧ ನೀತಿ ವಿರುದ್ಧ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಟೀಕಾಪ್ರಹಾರ



**ನವದೆಹಲಿ, ಜೂ.14:** 'ಅಹಿಂದ' ಮಂತ್ರ ಜಪಿಸುತ್ತಿದ್ದ ಕಾಂಗ್ರೆಸ್ ಇದೀಗ ಅದಕ್ಕೆ ತದ್ವಿರುದ್ಧವಾಗಿ ವರ್ತಿಸುತ್ತಿದೆ. ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ಸಮುದಾಯವನ್ನು ಕಡೆಗಣಿಸುವ ಮತ್ತದೇ ದಲಿತ 'ವಿರೋಧಿ ನೀತಿ' ಮುಂದುವರಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಟೀಕಿಸಿದ್ದಾರೆ.

ರಾಜ್ಯ ಸರ್ಕಾರದ ಅಧಿಕೃತ ಜಾಹೀರಾತುಗಳಲ್ಲಿ ಹಿರಿಯ ದಲಿತ ನಾಯಕ ಹಾಗೂ ಡಿಸಿಎಂ ಡಾ.ಜಿ.ಪರಮೇಶ್ವರ್ ಹೆಸರು ಕೈಬಿಡುವ ಮೂಲಕ ಕಾಂಗ್ರೆಸ್ ಸರ್ಕಾರ ದಲಿತ ನಾಯಕರನ್ನು ಅಪಮಾನಿಸುವ ಸಂಸ್ಕೃತಿ ಪ್ರದರ್ಶಿಸಿದೆ ಎಂದು ಆರೋಪಿಸಿದ್ದಾರೆ.

ಅಹಿಂದ ಸಿದ್ಧಾಂತದಡಿ ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತರ ಪರ ಹೋರಾಡುವುದಾಗಿ ಹೇಳಿಕೊಳ್ಳುವ ಕಾಂಗ್ರೆಸ್ ಪಕ್ಷ ಸದಾ ಈ ಸಮುದಾಯಗಳ ನಾಯಕರನ್ನು ನಿರ್ಲಕ್ಷಿಸುತ್ತಲೇ ಬಂದಿದೆ ಎಂದು ದೂರಿದ್ದಾರೆ.

ರಾಜ್ಯ ಸರ್ಕಾರ ಮತ್ತು ನೂತನ ಸಿಎಂ ಡಿ.ಕೆ.ಶಿವಕುಮಾರ್ ಪದೇ ಪದೇ ದಲಿತ, ಅಹಿಂದ ನಾಯಕರನ್ನು ಕಡೆಗಣಿಸುತ್ತಿದ್ದಾರೆ. ಹಿರಿಯ ಮುತ್ಸದ್ದಿ ದೇವರಾಜ ಅರಸು ಅವರ ಪುನರುತ್ಥಾನ ವೇಳೆ ಸರ್ಕಾರಿ ಜಾಹೀರಾತಿನಲ್ಲಿ ಡಿಸಿಎಂ ಪರಮೇಶ್ವರ ಅವರ ಫೋಟೋ ಕೈ ಬಿಟ್ಟಿರುವುದೇ ಇದಕ್ಕೆ ಸಾಕ್ಷಿ ಎಂದು ಪ್ರಲ್ಹಾದ ಜೋಶಿ ಚಾಟಿ ಬೀಸಿದ್ದಾರೆ.

"ಹಸಿರು ಬೆಂಗಳೂರು" ಉಪಕ್ರಮವನ್ನು ಉತ್ತೇಜಿಸುವ ಇತ್ತೀಚಿನ ಸರ್ಕಾರಿ ಜಾಹೀರಾತಿನಿಂದಲೂ ಉಪಮುಖ್ಯಮಂತ್ರಿ ಅವರನ್ನು ಹೊರಗಿಡಲಾಗಿದೆ. ಆದರೆ, ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ಕೃಷ್ಣ ಬೈರೇಗೌಡ ಅವರಿನ್ನೂ ವಹಿಸಿಕೊಳ್ಳದೇ ಇದ್ದರೂ ಜಾಹೀರಾತುಗಳಲ್ಲಿ "ಬೆಂಗಳೂರು ಅಭಿವೃದ್ಧಿ ಸಚಿವ"ರಾಗಿ ತೋರಿಸಲಾಗಿದೆ. ಕಾಂಗ್ರೆಸ್ ಸರ್ಕಾರದ ಈ ವ್ಯತಿರಿಕ್ತ ನಿಲುವುಗಳು ಅದೇನನ್ನು ತೋರುತ್ತದೆ ಎಂದು ಪ್ರಶ್ನಿಸಿದ್ದಾರೆ.

ಹಿಂದೆ ಡಾ.ಬಿ.ಆರ್.ಅಂಬೇಡ್ಕರ್, ಬಾಬು ಜಗಜೀವನ್ ರಾಮ್ ಮತ್ತು ಸೀತಾರಾಮಕೇಸರಿ ಅವರಂತಹ ನಾಯಕರಿಗೆ ಅಗೌರವ ತೋರಿದ್ದ ಕಾಂಗ್ರೆಸ್ ಇದೀಗ ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿ ಮತ್ತು ಡಾ ಜಿ.ಪರಮೇಶ್ವರ ಅವರನ್ನು ಡಿಸಿಎಂ ಮಾಡಿತು ಸರ್ಕಾರಿ ಜಾಹೀರಾತಿನಲ್ಲಿ ಕಡೆಗಣಿಸುತ್ತಿದ್ದು, ಹಳೇ ರಾಜಕೀಯ ಚಳಿಯನ್ನೇ ಮುಂದುವರೆಸಿದೆ ಎಂದು ಸಚಿವ ಜೋಶಿ ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಅವರ ಅವಧಿಯಲ್ಲಿ ಡಿಸಿಎಂ ಫೋಟೋವನ್ನು ಸರ್ಕಾರಿ ಜಾಹೀರಾತುಗಳಲ್ಲಿ ನಿಯಮಿತವಾಗಿ ಸೇರಿಸಲಾಗುತ್ತಿತ್ತು. ಆದರೆ, ಡಿಕೆ ಶಿವಕುಮಾರ ಆಡಳಿತ ಅದಕ್ಕೆ ತದ್ವಿರುದ್ಧವಾಗಿದೆ. ಉದ್ದೇಶಪೂರ್ವಕವಾಗಿ ಪರಮೇಶ್ವರ ಅವರನ್ನು ಹೊರಗಿಟ್ಟಂತಿದೆ. ಇದು ಸಮಗ್ರ ಪ್ರಾತಿನಿಧ್ಯವನ್ನು ಪ್ರಶ್ನಿಸುವಂತಿದೆ ಎಂದಿದ್ದಾರೆ ಜೋಶಿ.

### ರೈಸ್ ಕಾನ್‌ಕ್ಲೇವ್ ಸಮಾರೋಪ: ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಭಾಷಣ

# ವಿಕಸಿತ ಭಾರತ 2047ಕ್ಕಾಗಿ ನಾವೀನ್ಯತೆ–ಚಾಲಿತ ಉತ್ಪಾದನೆ, ಉದ್ಯಮಶೀಲತೆಗೆ ಸಚಿವರ ಕರೆ

**ಬೆಂಗಳೂರು, ಜೂ.14: ಬೆಂಗಳೂರಿನಲ್ಲಿ ಎರಡು ದಿನಗಳ ಕಾಲ ನಡೆದ ರೈಸ್ ಕಾನ್ ಕ್ಲೇವ್ 2026 (RISE–ಸಂಶೋಧನೆ, ನಾವೀನ್ಯತೆ, ಸ್ಟಾರ್ಟ್ ಅಪ್‌ಗಳು ಮತ್ತು ಉದ್ಯಮಶೀಲತೆ) ಇಂದು ಮುಕ್ತಾಯಗೊಂಡಿತು. ಈ ಸಮಾವೇಶದಲ್ಲಿ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ ಜೋಶಿ ಅವರು ನಾವೀನ್ಯತೆ–ಚಾಲಿತ ಉತ್ಪಾದನೆ, ಸ್ಥಳೀಯ ತಂತ್ರಜ್ಞಾನಗಳು ಮತ್ತು ಉದ್ಯಮಶೀಲತೆಯ ಮೂಲಕ ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲು ಕೊಡುಗೆ ನೀಡುವಂತೆ ನಾವೀನ್ಯಕಾರರು, ಉದ್ಯಮಿಗಳು ಮತ್ತು ಸಂಶೋಧಕರಿಗೆ ಕರೆ ನೀಡಿದರು.**




ಸಮಾರೋಪದಲ್ಲಿ ಮುಖ್ಯ ಭಾಷಣ ಮಾಡಿದ ಜೋಶಿ, ಭಾರತವು ವೈಜ್ಞಾನಿಕ ಪ್ರಗತಿ, ತಾಂತ್ರಿಕ ನಾವೀನ್ಯತೆ ಮತ್ತು ಯುವ ಜನತೆಯ ಆಕಾಂಕ್ಷೆಗಳಿಂದ ಚಾಲಿತವಾಗಿರುವ ಪರಿವರ್ತನಾತ್ಮಕ ಹಂತಕ್ಕೆ ಸಾಕ್ಷಿಯಾಗುತ್ತಿದೆ ಎಂದು ಹೇಳಿದರು.

ರಾಷ್ಟ್ರೀಯ ಆದ್ಯತೆಗಳನ್ನು ಪರಿಣಾಮಕಾರಿಯಾಗಿ ಪೂರೈಸಲು ಭಾರತದೊಳಗೆ ವಿನ್ಯಾಸಗೊಳಿಸಿದ ಮತ್ತು ಅಭಿವೃದ್ಧಿಪಡಿಸಿದ ಪರಿಹಾರಗಳ ಅಗತ್ಯವಿದೆ ಎಂದು ಅವರು ಗಮನಸೆಳೆದರು. ಹಿಂದಿನ ದಶಕಗಳಲ್ಲಿನ ಆಹಾರ ಭದ್ರತೆಯ ಚಿಂತೆಗಳಿಂದ ಹಿಡಿದು ಉದಯೋನ್ಮುಖ ಉತ್ಪಾದನಾ ಮತ್ತು ನಾವೀನ್ಯತೆಯ ಕೇಂದ್ರವಾಗಿ ಹೊರಹೊಮ್ಮುವವರೆಗಿನ ಭಾರತದ ಪ್ರಗತಿಯನ್ನು ಹೈಲೈಟ್ ಮಾಡಿದ ಸಚಿವರು, ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಬಲಪಡಿಸುವ, ಉತ್ಪಾದನಾ ಸಾಮರ್ಥ್ಯಗಳನ್ನು ವಿಸ್ತರಿಸುವ ಮತ್ತು ನಾವೀನ್ಯತೆಯ ಸಂಸ್ಕೃತಿಯನ್ನು ಉತ್ತೇಜಿಸುವ ಮಹತ್ವವನ್ನು ಒತ್ತಿಹೇಳಿದರು. ಭಾರತದ ಜನಸಂಖ್ಯಾ ಲಾಭವು ಆರ್ಥಿಕ ಬೆಳವಣಿಗೆ ಮತ್ತು ತಾಂತ್ರಿಕ ನಾಯಕತ್ವವನ್ನು ವೇಗಗೊಳಿಸಲು ಒಂದು ಮಹತ್ವದ ಅವಕಾಶವನ್ನು ಒದಗಿಸುತ್ತದೆ ಎಂದು ಅವರು ತಿಳಿಸಿದರು.

ಸಂಶೋಧಕರು, ನಾವೀನ್ಯಕಾರರು, ಉದ್ಯಮ ಮತ್ತು ಶಿಕ್ಷಣ ಸಂಸ್ಥೆಗಳ ಸಾಮೂಹಿಕ ಪ್ರಯತ್ನಗಳ ಮೂಲಕ 'ವಿಕಸಿತ ಭಾರತ 2047'ರ ದೃಷ್ಟಿಕೋನವನ್ನು ನನಸಾಗಿಸಬಹುದು ಎಂದು ಅವರು ಒತ್ತಿಹೇಳಿದರು.

ಸಮಾರೋಪ ಸಮಾರಂಭವು ವಂದೇ ಮಾತರಂ ಗೀತೆಯೊಂದಿಗೆ ಪ್ರಾರಂಭವಾಯಿತು ಮತ್ತು ಸಿಎಸ್‌ಐಆರ್–ಸೆಂಟ್ರಲ್ ಫುಡ್ ಟೆಕ್ನಾಲಜಿಕಲ್ ರಿಸರ್ಚ್ ಇನ್‌ಸ್ಟಿಟ್ಯೂಟ್‌ನ ನಿರ್ದೇಶಕ ಡಾ. ಗಿರಿಧರ್ ಪರ್ವತಮ್ ಅವರು ಸ್ವಾಗತ ಭಾಷಣ ಮಾಡಿದರು.

## ನಿತ್ಯ ಪಂಚಾಂಗ 15.06.2026 ಸೋಮವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಬಹುಳ, ಅಮಾವಾಸ್ಯೆ, ಮೃಗಶಿರ ನಕ್ಷತ್ರ, ಮಿಥುನ ಸಂಕ್ರಮಣ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಕೇಂದ್ರ ಟಿಬೆಟಿಯನ್ ಆಡಳಿತದ ಮುಖ್ಯ ಪ್ರತಿನಿಧಿ ಜಿಗ್ಮೆ ಸುಲ್ಟ್ರಿಮ್–ಸಿಎಂ ಡಿ.ಕೆ.ಶಿವಕುಮಾರ್ ಭೇಟಿ

**ಬೆಂಗಳೂರು, ಜೂ.14:** ಭಾನುವಾರ ಬೆಂಗಳೂರಿನ ಕೇಂದ್ರ ಟಿಬೆಟಿಯನ್ ಆಡಳಿತದ ಮುಖ್ಯ ಪ್ರತಿನಿಧಿ ಜಿಗ್ಮೆ ಸುಲ್ಟ್ರಿಮ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸದಾಶಿವನಗರದ ನಿವಾಸದಲ್ಲಿ ಭೇಟಿಯಾಗಿ, ಸಮಾಲೋಚನೆ ನಡೆಸಿದರು. ಇದೇ ವೇಳೆ ಟಿಬೆಟನ್ ಪ್ರತಿನಿಧಿಗಳು ದಲಾಯಿಲಾಮಾ ಪರವಾಗಿ ಅವರಿಗೆ ನೀಡಿದ ಉಡುಗೊರೆ ಎಲ್ಲರ ಗಮನ ಸೆಳೆದಿದೆ.ಭಾರತದ ಇಬ್ಬರು ಮಾಜಿ ಪ್ರಧಾನಿಗಳಾದ ಜವಹರಲಾಲ್ ನೆಹರು ಹಾಗೂ ಇಂದಿರಾಗಾಂಧಿ ಟಿಬೆಟ್ ಜೊತೆ ಹೊಂದಿದ್ದ ಸೌಹಾರ್ದ ಸಂಬಂಧದ ದ್ಯೋತಕವಾಗಿ ಹಳೆಯ ಚಿತ್ರಪಟವೊಂದನ್ನು ಜಿಗ್ಮೆ , ಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಕಾಣಿಕೆಯಾಗಿ ನೀಡಿದ್ದಾರೆ.

ಈ ಫೋಟೋ ನೋಡಿ ಸಿಎಂ ಡಿ.ಕೆ.ಶಿವಕುಮಾರ್ ಅವರೂ ಸಹ ಹರ್ಷ ವ್ಯಕ್ತಪಡಿಸಿದ್ದಾರೆ. ಇದರೊಂದಿಗೆ ಡಿ.ಕೆ.ಶಿವಕುಮಾರ್ ಅವರಿಗೆ ಬುದ್ಧನ ಪ್ರತಿಯೊಂದನ್ನೂ ಸಹ ಟಿಬೆಟಿಯನ್ ಪ್ರತಿನಿಧಿಗಳು ಕಾಣಿಕೆಯಾಗಿ ನೀಡಿದರು. ಸುಲ್ಟ್ರಿಮ್ ದಲೈಲಾಮಾ ಮತ್ತು ಸಿಕ್ಯೊಂಗ್ ಪೆನ್ಪಾ ತ್ಸರಿಂಗ್ ಅವರ ಪತ್ರಗಳನ್ನು ಹಸ್ತಾಂತರಿಸಿದರು.



ಈ ಪತ್ರಗಳಲ್ಲಿ, ಡಿ.ಕೆ. ಶಿವಕುಮಾರ್ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದಕ್ಕೆ ಅಭಿನಂದನೆ ಮತ್ತು ಶುಭ ಹಾರೈಕೆ ತಿಳಿಸಲಾಗಿದೆ.

ಚೀನಾ ಟಿಬೆಟ್ ದೇಶವನ್ನು ಆಕ್ರಮಿಸಿಕೊಂಡಿದ್ದಾಗ ಟಿಬಿಟಿಯನ್ ಧರ್ಮಗುರು ದಲೈಲಾಮಾ ಅವರಿಗೆ ಭಾರತದ ಆಶ್ರಯ ನೀಡಿತ್ತು. ಆಗಿನ ಪ್ರಧಾನಿ ಜವಹರಲಾಲ್ ನೆಹರೂ ಹಲವು ವರ್ಷಗಳ ಕಾಲ ಟಿಬೆಟ್‌ಗೆ ಬೆನ್ನೆಲುಬಾಗಿ ನಿಂತಿದ್ದರು.

ಅಲ್ಲದೇ ಇಂದಿಗೂ ಸಹ ಚೀನಾದ ದಬ್ಬಾಳಿಕೆಯಿಂದ ನರಳುತ್ತಿರುವ ಟಿಬೆಟಿಯನ್ ಜನ ಭಾರತವನ್ನು ಆಪ್ತ ದೇಶವನ್ನಾಗಿರಿಸಿಕೊಂಡಿದ್ದಾರೆ. ಕರ್ನಾಟಕದ ಬೈಲುಕುಪ್ಪೆಯಲ್ಲಿ ಟಿಬೆಟಿಯನ್ ನಿರಾಶ್ರಿತರ ತಾಣವನ್ನೂ ಸಹ ನಿರ್ಮಿಸಿರುವುದು ಅವರ ಕೃತಜ್ಞತೆಗೆ.

# ಬಿಡದಿ ಭೂಸ್ವಾಧೀನ: ಕೇಂದ್ರ ಸಚಿವ ಎಚ್.ಡಿ.ಕೆ. ವಿರುದ್ಧ ಮಾಗಡಿ ಶಾಸಕ ಎಚ್.ಸಿ.ಬಾಲಕೃಷ್ಣ ವಾಗ್ದಾಳಿ



**ಬೆಂಗಳೂರು, ಜೂ.14:** ಬಿಡದಿ ಮತ್ತು ಮಾಗಡಿ ಭಾಗದಲ್ಲಿ ಉದ್ದೇಶಿತ ಹೈಟೆಕ್ ಟೌನ್‌ಶಿಪ್‌ಗಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಸುತ್ತಿರುವುದನ್ನು ವಿರೋಧಿಸುತ್ತಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಆರ್. ಅಶೋಕ್ ವಿರುದ್ಧ ಮಾಗಡಿ ಶಾಸಕ ಎಚ್.ಸಿ.ಬಾಲಕೃಷ್ಣ ಕಿಡಿಕಾರಿದ್ದಾರೆ.

ಎಲ್ಲರೂ ಗಾಜಿನ ಮನೆಯಲ್ಲಿ ಕುಳಿತು ಕಲ್ಲು ಎಸೆಯುತ್ತಿದ್ದಾರೆ. ಆರ್. ಅಶೋಕ್ ಮತ್ತು ಕುಮಾರಸ್ವಾಮಿ ಅವರು ಮಂತ್ರಿಗಳಾದ ಮೇಲೆಯೇ ಕೋಟ್ಯಂತರ ರೂಪಾಯಿ ಆಸ್ತಿ ಮಾಡಿರುವುದು. ಹಾಗಿದ್ದರೆ ಅವರ ಆಸ್ತಿಗಳ ಬಗ್ಗೆ ತನಿಖೆ ಮಾಡಿಸಬೇಕಾ ಎಂದು ಅತ್ಯಂತ ಏಕವಚನದಲ್ಲೇ ಸವಾಲು ಹಾಕಿದ್ದಾರೆ.

ಉದ್ದೇಶಿತ ಟೌನ್‌ಶಿಪ್ ಯೋಜನೆಗಾಗಿ ಭೂಮಿ ನೀಡುತ್ತಿರುವ ರೈತರಿಗೆ ಸೂಕ್ತ ಪರಿಹಾರ ನೀಡುವ ಕುರಿತು ಮಾತನಾಡಿದ ಶಾಸಕರು, ವಿರೋಧ ಪಕ್ಷಗಳ ಆರೋಪಗಳಿಗೆ ಸಾಕ್ಷ್ಯ ಸಮೇತ ತಿರುಗೇಟು ನೀಡಿದ್ದಾರೆ.

ಭೂಸ್ವಾಧೀನದ ಪರಿಹಾರದ ಕುರಿತು ಮಾತನಾಡಿದ ಬಾಲಕೃಷ್ಣ, ರೆಡ್ ಜೋನ್‌ನಲ್ಲಿರುವ ಭೂಮಿಯ ಮಾರುಕಟ್ಟೆ ಬೆಲೆಯ ಆಧಾರದ ಮೇಲೆಯೇ ನಾವು ರೈತರಿಗೆ ಪರಿಹಾರ ನೀಡಬೇಕಾಗುತ್ತದೆ. ಇಲ್ಲದಿದ್ದರೆ ಈ ಪ್ರಕ್ರಿಯೆ ಕೋರ್ಟ್‌ನಲ್ಲಿ ಪ್ರಶ್ನೆಗೊಳಗಾಗುತ್ತದೆ.

ಈ ಹಿಂದೆ ಎಚ್.ಡಿ. ಕುಮಾರಸ್ವಾಮಿ ಅವರು ವಿಡಿಯೋ ಕಾಲ್‌ನಲ್ಲಿ ಮಾತನಾಡುವಾಗ ರೈತರಿಗೆ ಶೇ. 40 ರಷ್ಟು ಮಾತ್ರ ಪರಿಹಾರ ನೀಡಲು ಒಪ್ಪಿದ್ದರು. ಆದರೆ ನಮ್ಮ ಸರ್ಕಾರ ವಸತಿ ಭೂಮಿಗೆ ಶೇ. 50 ರಷ್ಟು ಮತ್ತು ವಾಣಿಜ್ಯ ಭೂಮಿಗೆ ಶೇ. 45 ರಷ್ಟು ಪರಿಹಾರ ನೀಡಲು ತೀರ್ಮಾನಿಸಿದೆ.

ನಾವು ಮತ್ತು ಕುಮಾರಸ್ವಾಮಿ ಒಂದೇ ಸಮುದಾಯಕ್ಕೆ ಸೇರಿದವರು. ಈ ಯೋಜನೆಯಿಂದ ನಮಗೆ ಮತ್ತು ಡಿ.ಕೆ. ಶಿವಕುಮಾರ್ ಅವರಿಗೆ ರಾಜಕೀಯ ಕ್ರೆಡಿಟ್ ಸಿಗುತ್ತದೆ ಎಂಬ ಒಂದೇ ಕಾರಣಕ್ಕೆ ಕುಮಾರಸ್ವಾಮಿ ಹೊಟ್ಟೆಕಿಚ್ಚಿನಿಂದ ವಿರೋಧಿಸುತ್ತಿದ್ದಾರೆ ಎಂದು ಶಾಸಕ ಬಾಲಕೃಷ್ಣ ನೇರವಾಗಿ ಆರೋಪಿಸಿದ್ದಾರೆ.



ಕೇರಳಂ ಲೋಕೋಪಯೋಗಿ ಸಚಿವ ಪಿ.ಕೆ.ಬಷೀರ್ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕುಮಾರಪಾರ್ಕ್‌ನ ಅತಿಥಿ ಗೃಹದಲ್ಲಿ ಭಾನುವಾರ ಭೇಟಿಮಾಡಿ ಅಭಿನಂದಿಸಿದರು.

**ರಾಜ್ಯ ಸರ್ಕಾರದಿಂದ ಒಂದೇ ಕಂಪನಿಗೆ 39,000 ಕೋಟಿ ರೂ. ಮೌಲ್ಯದ ಟೆಂಡರ್ ನೀಡಿಕೆ; 10 ಸಾವಿರ ಕೋಟಿ ಕಿಕ್ ಬ್ಯಾಕ್ ಸಂದಾಯ**

# ತೆರಿಗೆದಾರರ ಹಣ–ಸಾರ್ವಜನಿಕ ವಿಶ್ವಾಸದ ಪ್ರಶ್ನೆ: ಅಶೋಕ್ ಮಾರ್ಮಿಕ ನುಡಿ

**ಬೆಂಗಳೂರು, ಜೂ.14:** ಉದ್ಯಾನ ನಗರಿ ಬೆಂಗಳೂರಿನಲ್ಲಿ ಕಸ ಸಂಸ್ಕರಣೆ ನೆಪದಲ್ಲಿ ರಾಜ್ಯ ಸರ್ಕಾರ ಮೂರು ದಶಕಗಳವರೆಗೆ ಒಂದೇ ಕಂಪನಿಗೆ 39,000 ಕೋಟಿ ರೂಪಾಯಿಗೆ ಟೆಂಡರ್ ನೀಡಿದೆ. ಅದರಿಂದ 10,000 ಕೋಟಿ ರೂ. ಕಿಕ್‌ಬ್ಯಾಕ್ ಪಡೆದಿದೆ ಎಂದು ಆರೋಪಿಸಲಾಗಿತ್ತು. ಇದರ ಬೆನ್ನಲ್ಲೆ ರಾಜ್ಯ ಸರ್ಕಾರ ಟೆಂಡರ್ ಪರಿಶೀಲನೆಗೆ 'ಉನ್ನತ ಮಟ್ಟದ ಪರಿಶೀಲನಾ ಸಮಿತಿ' ರಚಿಸಿದೆ. 39,437 ಕೋಟಿ ಮೊತ್ತದ ಘನತ್ಯಾಜ್ಯ ನಿರ್ವಹಣಾ ಟೆಂಡರ್ ಕುರಿತು ಪರಿಶೀಲನೆ ನಡೆಸುತ್ತಿರುವ ಉನ್ನತ ಮಟ್ಟದ ಸಮಿತಿಗೆ ಪತ್ರ ಬರೆದಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ್, ಯಾವುದೇ ರಾಜಕೀಯ, ಆಡಳಿತಾತ್ಮಕ ಅಥವಾ ಬಾಹ್ಯ ಒತ್ತಡಗಳಿಗೆ ಮಣಿಯದೆ, ಆತ್ಮಸಾಕ್ಷಿ ಮತ್ತು ಸಾರ್ವಜನಿಕ ಹಿತಾಸಕ್ತಿಗೆ ಅನುಗುಣವಾಗಿ ವರದಿ ಸಲ್ಲಿಸಿ ಎಂದು ಕೋರಿದ್ದಾರೆ.ಪತ್ರದಲ್ಲಿ ಇದು ಕೇವಲ ಒಂದು ಟೆಂಡರ್ ವಿಚಾರವಲ್ಲ; ಬೆಂಗಳೂರಿನ ಭವಿಷ್ಯ, ತೆರಿಗೆದಾರರ ಹಣ ಮತ್ತು ಸಾರ್ವಜನಿಕ ವಿಶ್ವಾಸದ ಪ್ರಶ್ನೆಯಾಗಿದೆ. ಸತ್ಯ, ಪಾರದರ್ಶಕತೆ ಮತ್ತು ಜನಹಿತದ ಪರವಾಗಿ ನಿಲ್ಲುವುದು ಸಮಿತಿಯ ಜವಾಬ್ದಾರಿ. ಯಾವುದೇ ಪ್ರಭಾವ, ಒತ್ತಡ ಅಥವಾ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ ವಾಸ್ತವಾಂಶಗಳ ಆಧಾರದ ಮೇಲೆ ವರದಿ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ರಾಜ್ಯದ ಹಣಕಾಸು ಇಲಾಖೆಯೇ ಈ ಟೆಂಡರ್ ಕುರಿತು ಗಂಭೀರ ಆಕ್ಷೇಪಣೆಗಳನ್ನು ದಾಖಲಿಸಿದೆ. ಯೋಜನೆಯ ವೆಚ್ಚ, ವಾರ್ಷಿಕ ದರ ಏರಿಕೆ, 30 ವರ್ಷಗಳ ಸುದೀರ್ಘ ಅವಧಿಯ ಒಪ್ಪಂದ ಹಾಗೂ ಏಕಸ್ವಾಮ್ಯಕ್ಕೆ ಅವಕಾಶ ಕಲ್ಪಿಸುವ "ವೆಂಡರ್ ಲಾಕ್–ಇನ್" ಅಪಾಯಗಳ ಬಗ್ಗೆ ಸರ್ಕಾರದ ಸ್ವಂತ ಹಣಕಾಸು ಇಲಾಖೆ ಎಚ್ಚರಿಕೆ ನೀಡಿದೆ.

ಹಣಕಾಸು ಇಲಾಖೆಯ ಅಭಿಪ್ರಾಯದ ಪ್ರಕಾರ, ವರ್ಷಕ್ಕೆ 5% ದರ ಏರಿಕೆ ಮುಂದುವರಿದರೆ ಮುಂದಿನ 30 ವರ್ಷಗಳಲ್ಲಿ ಈ ಯೋಜನೆಯ ವೆಚ್ಚ ಹಲವು ಪಟ್ಟು ಹೆಚ್ಚಾಗುವ ಸಾಧ್ಯತೆಯಿದೆ. ಇದರ ಅಂತಿಮ ಹೊರೆ ಬೀಳುವುದು ಸರ್ಕಾರದ ಮೇಲೆ ಅಲ್ಲ, ಬೆಂಗಳೂರಿನ ತೆರಿಗೆದಾರ ನಾಗರಿಕರ ಮೇಲೆ ಎಂದು ಪ್ರತಿಪಕ್ಷ ನಾಯಕ ವಿವರಿಸಿದ್ದಾರೆ.ಈಗಾಗಲೇ ಬೆಂಗಳೂರು ನಗರದ ಜನರು ಆಸ್ತಿ ತೆರಿಗೆ, ವಿವಿಧ ಸೆಸ್ಗಳು, ಬಳಕೆದಾರರ ಶುಲ್ಕಗಳು ಹಾಗೂ ಇತರೆ ತೆರಿಗೆಗಳ ಭಾರವನ್ನು ಹೊರುತ್ತಿದ್ದಾರೆ.



ಇಂತಹ ಸಂದರ್ಭದಲ್ಲಿ ಸಾರ್ವಜನಿಕ ಹಣದ ಸಾವಿರಾರು ಕೋಟಿ ರೂ.ಗಳ ಬಳಕೆಯ ಬಗ್ಗೆ ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವೂ ಅತ್ಯಂತ ಜವಾಬ್ದಾರಿಯುತವಾಗಿರಬೇಕು. ನಿಮ್ಮ ಸಮಿತಿಯ ವರದಿ ಕೇವಲ ಸರ್ಕಾರಕ್ಕೆ ಸಲ್ಲಿಸುವ ಒಂದು ದಾಖಲೆಯಾಗಿರುವುದಿಲ್ಲ; ಅದು ಮುಂದಿನ ಪೀಳಿಗೆಗಳ ಮೇಲೂ ಪರಿಣಾಮ ಬೀರುವ ನಿರ್ಧಾರದ ಅಡಿಪಾಯವಾಗಲಿದೆ.

ವರದಿಯಲ್ಲಿ ನೀವು ಬರೆಯುವ ಪ್ರತಿಯೊಂದು ಪದವೂ ಸಾರ್ವಜನಿಕ ವಲಯದಲ್ಲಿ ಮಾಧ್ಯಮಗಳಲ್ಲಿ ತೀವ್ರ ವಿಮರ್ಶೆಗೊಳಗಾಗಲಿದೆ. ಆದ್ದರಿಂದ ಯಾವುದೇ ರಾಜಕೀಯ, ಆಡಳಿತಾತ್ಮಕ ಅಥವಾ ಇತರೆ ಒತ್ತಡಗಳಿಗೆ ಮಣಿಯದೆ, ನಿಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ, ಸಾರ್ವಜನಿಕ ಹಿತಾಸಕ್ತಿಯನ್ನು ಮಾತ್ರ ಮಾನದಂಡವನ್ನಾಗಿಸಿಕೊಂಡು ಸಂಪೂರ್ಣ ಪಾರದರ್ಶಕ, ಪ್ರಾಮಾಣಿಕ ಹಾಗೂ ನಿರ್ಭೀತ ವರದಿಯನ್ನು ಸಲ್ಲಿಸುವಂತೆ ನಿಮ್ಮಲ್ಲಿ ವಿನಂತಿಸುತ್ತೇನೆ ಎಂದು ಅವರು ಕೋರಿದ್ದಾರೆ. ಸರ್ಕಾರಕ್ಕೆ ವರದಿ ಸಲ್ಲಿಸುವುದು ತಮಗೆ ಒಂದು ಕರ್ತವ್ಯವಾಗಿರಬಹುದು. ಆದರೆ ಬೆಂಗಳೂರಿನ ಜನತೆಗೆ ಮತ್ತು ನಿಮ್ಮ ಆತ್ಮಸಾಕ್ಷಿಗೆ ಉತ್ತರ ನೀಡುವುದು ಅದಕ್ಕಿಂತ ದೊಡ್ಡ ಜವಾಬ್ದಾರಿಯಾಗಿದೆ. ನಾಳೆ ಈ ನಗರದ ನಾಗರಿಕರು, ತೆರಿಗೆದಾರರು ಮತ್ತು ಮುಂದಿನ ಪೀಳಿಗೆಗಳು ಹಿಂದಿರುಗಿ ನೋಡಿದಾಗ, ಈ ಸಮಿತಿಯ ಸದಸ್ಯರು ಕೇವಲ ಒಂದು ನಿರ್ಧಾರಕ್ಕೆ ಮುದ್ರೆ ಒತ್ತಲಿಲ್ಲ; ಬೆಂಗಳೂರಿನ ಹಿತಾಸಕ್ತಿಯನ್ನು ಕಾಪಾಡುವ ತಮ್ಮ ಗುರುತರ ಕರ್ತವ್ಯವನ್ನು ನಿಭಾಯಿಸಿದರು ಎಂಬ ಹೆಗ್ಗಳಿಕೆ ನಿಮಗೆ ಸಲ್ಲಲಿ ಎಂಬುದು ನನ್ನ ಆಶಯ ಎಂದು ಆರ್. ಅಶೋಕ್ ಹೇಳಿದ್ದಾರೆ. ಬೆಂಗಳೂರು ನಗರದ ಜನರ ಹಿತಾಸಕ್ತಿಯನ್ನು ಕಾಪಾಡುವ ಐತಿಹಾಸಿಕ ಅವಕಾಶ ಇಂದು ನಿಮ್ಮ ಮುಂದಿದೆ. ನಿಮ್ಮ ವರದಿ ಸರ್ಕಾರದ ನಿರ್ಧಾರವನ್ನು ಮಾತ್ರವಲ್ಲ, ಬೆಂಗಳೂರಿನ ಭವಿಷ್ಯವನ್ನೂ ರೂಪಿಸಲಿದೆ. ಆ ಜವಾಬ್ದಾರಿಯನ್ನು ನ್ಯಾಯಯುತವಾಗಿ ನಿರ್ವಹಿಸುವಿರಿ ಎಂಬ ದೃಢ ವಿಶ್ವಾಸ ನನ್ನದು. ನೆನಪಿರಲಿ, ಕರ್ನಾಟಕದ ಜನತೆ ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

# ಗ್ಯಾರಂಟಿ ಫಲಾನುಭವಿಗಳ ಸಂಖ್ಯೆ ಇಳಿಸುವ ದುಸ್ಸಾಹಸಕ್ಕೆ ಮುಂದಾದ ಕಾಂಗ್ರೆಸ್ ಸರ್ಕಾರ: ವಿಜಯೇಂದ್ರ



**ಬೆಂಗಳೂರು, ಜೂ.14:** ಗ್ಯಾರಂಟಿಯಿಂದ ಆರ್ಥಿಕ ಸಂಕಷ್ಟ, ಪೆಟ್ಟು ಬಿದ್ದಿದೆ. ಒಂದೊಂದೇ ನೆಪಗಳನ್ನು ಒಡ್ಡಿ ಈಗ ಗ್ಯಾರಂಟಿ ಫಲಾನುಭವಿಗಳ ಸಂಖ್ಯೆಯನ್ನು ಲಕ್ಷ ಲಕ್ಷದಷ್ಟು ಇಳಿಸುವ ದುಸ್ಸಾಹಸಕ್ಕೆ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರು ಅರ್ಹರಿದ್ದಾರೋ ಅವರಿಗೆ ಕೊಡಬೇಕು ಎಂಬುದರಲ್ಲಿ ಎರಡು ಮಾತಿಲ್ಲ. 3 ವರ್ಷದ ಕೆಳಗೆ ಇವರದೇ ಸರಕಾರ ಇತ್ತಲ್ಲವೇ? ಗ್ಯಾರಂಟಿ ಕೊಡುವಾಗ ಅರ್ಹತೆ, ಅನರ್ಹತೆ ಬಗ್ಗೆ ಯಾಕೆ ಯೋಚಿಸಿಲ್ಲ. ಗ್ಯಾರಂಟಿಯಿಂದ ಕ್ಷೇತ್ರದ ಅಭಿವೃದ್ಧಿ ಆಗುತ್ತಿಲ್ಲ ಎಂದು ಕಾಂಗ್ರೆಸ್ಸಿನ ಶಾಸಕರಾದ ದೇಶಪಾಂಡೆ ಹೇಳುತ್ತಾರೆ. ಗ್ಯಾರಂಟಿಯಿಂದ ಅಭಿವೃದ್ಧಿ ಆಗದೇ ಆತ್ಮಹತ್ಯೆ ಮಾಡಿಕೊಳ್ಳುವಂಥ ಸ್ಥಿತಿ ಇದೆ ಎಂದು ಕಾಂಗ್ರೆಸ್ ಶಾಸಕರೇ ಹೇಳಿದ್ದಾರೆ. ಹಿಂದಿನ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಯ ರಾಯರೆಡ್ಡಿ ಅವರೂ ಗ್ಯಾರಂಟಿಗಳಿಂದ ಸಂಕಷ್ಟ ಆಗಿದೆ ಎಂದು ಒಪ್ಪಿಕೊಂಡಿದ್ದಾರೆ ಎಂದು ನುಡಿದರು.

ಈ ಎಲ್ಲಾ ವಾಸ್ತವ ಸತ್ಯ ಮರೆಮಾಚಿ ಲಕ್ಷಲಕ್ಷ ಅನರ್ಹ ಫಲಾನುಭವಿಗಳಿಗೆ ಚುನಾವಣೆ ವೇಳೆ ಗ್ಯಾರಂಟಿ ಕೊಟ್ಟರು ಆಗ ಹೇಳಿದ್ದು ಒಂದು; ಈಗ ಹೇಳುತ್ತಿರುವುದು ಒಂದು. ಚುನಾವಣೆ ಮೊದಲು ಅರ್ಹರಾದವರು ಚುನಾವಣೆ ಬಳಿಕ ಅನರ್ಹ ಎಂದು ಹೇಳುವುದು ಜನರಿಗೆ ಮಾಡಿದ ಅಪಮಾನ. ಇದು ಸರಿ ಅಲ್ಲ ಎಂದು ವಿವರಿಸಿದರು.

ಧರ್ಮಸ್ಥಳದ ಬುರುಡೆ ಪ್ರಕರಣದ ಬಗ್ಗೆಯೂ ಪ್ರತಿಕ್ರಿಯೆ ನೀಡಿದ ಅವರು, ಧರ್ಮಸ್ಥಳ ಬುರುಡೆ ಪ್ರಕರಣ ಕಾಂಗ್ರೆಸ್ ಸರ್ಕಾರದ ಷಡ್ಯಂತ್ರ. ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾದಿ ಬೀದಿಯಲ್ಲಿ ಹೋಗುವ ನಗರ ನಕ್ಸಲರ ಮಾತು ಕೇಳಿ ಎಸ್‌ಐಟಿ ರಚಿಸಿದರು. ಅದರ ಅಗತ್ಯ ಇರಲಿಲ್ಲ. ಇದೇ ಈಗ ಸರ್ಕಾರಕ್ಕೆ ಗಂಡಾಂತರ ತಂದಿದೆ ಎಂದರು.

# ಮಂತ್ರಿಮಂಡಲ ಸೇರಲು ಜಮೀರ್ ಕಸರತ್ತು: ಸಿಗದ ಕೈ ಸ್ಪಂದನೆ

**ಬೆಂಗಳೂರು, ಜೂ. 14:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರಮಾಪ್ತ ಎಂಬ ಕಾರಣಕ್ಕಾಗಿ ಪದೇ ಪದೇ ಪಕ್ಷದ ಶಿಸ್ತು ಉಲ್ಲಂಘಿಸುತ್ತಿದ್ದ ಮಾಜಿ ಸಚಿವ ಜಮೀರ್ ಅಹಮದ್ ಖಾನ್, ಈಗ ಹಿರಿಯ ನಾಯಕರ ಮನೆ ಮನೆ ಸುತ್ತುವ ಪರಿಸ್ಥಿತಿ ಬಂದಿದೆ. ಜೂನ್ 18ರ ಬಳಿಕ ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂಬ ವದಂತಿಗಳಿವೆ. ಅದರಲ್ಲಿ ಅವಕಾಶ ಗಿಟ್ಟಿಸಲು ಬಹಳಷ್ಟು ಶಾಸಕರು ನಾನಾ ರೀತಿಯ ಕಸರತ್ತು ನಡೆಸುತ್ತಿದ್ದಾರೆ. ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿದ್ದವರ ಪೈಕಿ ಜಮೀರ್ ಅಹಮದ್ ಖಾನ್ ಮತ್ತು ಎಚ್.ಸಿ.ಮಹದೇವಪ್ಪ ಅವರಿಗೆ ಎರಡನೇ ಬಾರಿ ಅವಕಾಶ ದೊರೆಯುವ ಸಾಧ್ಯತೆಗಳು ಕ್ಷೀಣವಾಗಿವೆ.

ಎಚ್.ಸಿ.ಮಹದೇವಪ್ಪ ಅವರು ವಿವಿಧ ಸಂಘಟನೆಗಳನ್ನು ಬಳಸಿಕೊಂಡು ಪ್ರತಿಭಟನೆ ನಡೆಸುವ ಮೂಲಕ ಸಂಪುಟ ಸೇರಲು ಹರಸಾಹಸ ನಡೆಸುತ್ತಿದ್ದಾರೆ. ಆದರೆ ಅದಕ್ಕೆ ಡಿ.ಕೆ.ಶಿವಕುಮಾರ್ ಸೊಪ್ಪು ಹಾಕುತ್ತಿಲ್ಲ.

ಜಮೀರ್ ಅಹಮದ್ ಖಾನ್ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ವಿವಾದದ ಕೇಂದ್ರ ಬಿಂದುವಾಗಿದ್ದರು. ನಾಯಕತ್ವದ ವಿಚಾರವಾಗಿ ಪದೇ ಪದೇ ಸಿದ್ದರಾಮಯ್ಯ ಅವರ ಪರವಾಗಿ ಬ್ಯಾಟಿಂಗ್ ಮಾಡಿ ಗೊಂದಲ ಮೂಡಿಸುತ್ತಿದ್ದರು.

ಹೈಕಮಾಂಡ್ ಎಚ್ಚರಿಕೆ ನೀಡಿದ ಹೊರತಾಗಿಯೂ ಜಮೀರ್ ತಮ್ಮ ವರಸೆಯನ್ನು ಬದಲಿಸಿಕೊಂಡಿರಲಿಲ್ಲ. ವಸತಿ ಇಲಾಖೆ ನಿರ್ವಹಣೆ ಮಾಡುತ್ತಿದ್ದ ಜಮೀರ್ ಅವರ ಆಪ್ತ ಸಹಾಯಕರ ಮೇಲೆ ಗಂಭೀರ ಆರೋಪವೊಂದು ಕೇಳಿ ಬಂದಿತು. ಬಡವರಿಗೆ ಮನೆ ಮಂಜೂರಾತಿ ಮಾಡಲು ಲಂಚ ಕೇಳಲಾಗುತ್ತಿದೆ ಎಂದು ಆಡಳಿತ ಪಕ್ಷದ ಶಾಸಕ ಹಾಗೂ ಸಿದ್ದರಾಮಯ್ಯ ಅವರ ಆಪ್ತ ಬಿ.ಆರ್.ಪಾಟೀಲ್ ಟೀಕೆ ಮಾಡಿದ್ದರು. ಸಂಧಾನ ಸಭೆ ಮೂಲಕ ಆರೋಪವನ್ನು ಮರೆಮಾಚಲಾಯಿತು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೂ ಮುನ್ನ ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗೆ ಟಿಕೆಟ್ ನೀಡಬೇಕೆಂದು ಜಮೀರ್ ಪಟ್ಟುಹಿಡಿದಿದ್ದರು. ಹಾಲಿ ಶಾಸಕ ಶ್ಯಾಮನೂರು ಶಿವಶಂಕರಪ್ಪ ಅವರು ಮೃತಪಟ್ಟ ಹಿನ್ನೆಲೆಯಲ್ಲಿ ಅವರ ಕುಟುಂಬದ ಸದಸ್ಯರಿಗೆ ಟಿಕೆಟ್ ನೀಡಬೇಕೆಂಬ ಕಾರಣಕ್ಕಾಗಿ ಹೈಕಮಾಂಡ್, ಸಮರ್ಥ ಶ್ಯಾಮನೂರ್‌ಗೆ ಸ್ಪರ್ಧೆ ಮಾಡಲು ಅವಕಾಶ ಕಲ್ಪಿಸಿತು. ಆದರೆ ಚುನಾವಣೆ ಸಂದರ್ಭದಲ್ಲಿ ಜಮೀರ್ ಅಹಮದ್ ಖಾನ್ ಕ್ಷೇತ್ರದಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿರುವ ಮುಸ್ಲಿಮರಿಗೆ ಕಾಂಗ್ರೆಸ್ಗೆ ವಿರುದ್ಧವಾಗಿ ಮತ ಚಲಾಯಿಸುವಂತೆ ಕರೆ ನೀಡಿದ್ದರು ಎಂಬ ಆರೋಪಗಳಿವೆ. ಈ ಕುರಿತ ಆಡಿಯೋ ಒಂದು ಭಾರೀ ವೈರಲ್ ಆಗಿತ್ತು.



ನಾಯಕತ್ವದ ಬದಲಾವಣೆ ಬಳಿಕ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವ ಸಂದರ್ಭದಲ್ಲಿ ಹೊಸ ಸರ್ಕಾರ ರಚನೆಯ ವೇಳೆ ಈ ಆಡಿಯೋ ಪ್ರಕರಣ ಜಮೀರ್ ಅವರನ್ನು ಸಂಪುಟದಿಂದ ದೂರ ಇಡುವಂತೆ ಮಾಡಿತು. ತಾವು ಅಲ್ಪಸಂಖ್ಯಾತ ಸಮುದಾಯದ ಪರಮೋಚ್ಚ ನಾಯಕರಾಗಿದ್ದು ತಮ್ಮನ್ನು ಬಿಟ್ಟು ಸರ್ಕಾರ ರಚನೆ ಸಾಧ್ಯವಿಲ್ಲ ಎಂಬ ಲೆಕ್ಕಾಚಾರದಲ್ಲಿದ್ದ ಜಮೀರ್ಗೆ, ಡಿ.ಕೆ.ಶಿವಕುಮಾರ್ ಮರ್ಮಾಘಾತ ನೀಡಿದ್ದರು.

ವಿಧಾನಸಭಾಧ್ಯಕ್ಷರಾಗಿದ್ದ ಯು.ಟಿ.ಖಾದರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವ ಮೂಲಕ ಜಮೀರ್ ಅವರಿಗೆ ತ್ರಿಶಂಕು ಸ್ಥಿತಿ ಕಾಣಿಸಿದ್ದರು. ಇತ್ತೀಚೆಗೆ ಸಿದ್ದರಾಮಯ್ಯ ಅವರು ಜಮೀರ್ ವಿರುದ್ಧ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿದ್ದರಿಂದಾಗಿ ರಾಜಕೀಯವಾಗಿ ತೀವ್ರ ಹಿನ್ನಡೆ ಅನುಭವಿಸುವಂತಾಗಿದೆ. ಹೀಗಾಗಿ ತಾವು ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ ಎಂದು ಸಾಬೀತು ಪಡಿಸಲು ಜಮೀರ್ ನಾಯಕರ ಮನೆಮನೆ ಸುತ್ತುತ್ತಿದ್ದಾರೆ.

ಮೂರು ದಿನಗಳಲ್ಲಿ ಎರಡನೇ ಬಾರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದರು. ಅವರ ಸೂಚನೆ ಮೇರೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಆದರೆ ಎಲ್ಲಾ ಕಡೆಯಲ್ಲೂ ನಕಾರಾತ್ಮಕ ಉತ್ತರ ಬಂದಿದ್ದರಿಂದ ಈಗ ಕೊನೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನೇ ಭೇಟಿ ಮಾಡಿದ್ದಾರೆ. ಎಲ್ಲರ ಬಳಿಯೂ ಮಂತ್ರಿಸ್ಥಾನ ನೀಡುವಂತೆ ದುಂಬಾಲು ಬಿದ್ದಿದ್ದಾರೆ.

ಕೆಲ ದಿನಗಳ ಹಿಂದಷ್ಟೆ ಜಮೀರ್ ಅವರು ಯಾರ ಮಾತಿಗೂ ಕವಡೆ ಕಾಸಿನ ಕಿಮತ್ತು ನೀಡದೆ, ಪದೇ ಪದೇ ವಿವಾದಾತಕ ಹೇಳಿಕೆಗಳನ್ನು ನೀಡಿ ಗೊಂದಲ ಮೂಡಿಸುತ್ತಿದ್ದರು. ಈಗ ಅದೇ ಜಮೀರ್ ಅಹಮದ್ ಖಾನ್ ಸಚಿವ ಸ್ಥಾನಕ್ಕಾಗಿ ಬೆಂಬಲಿಗರ ಮೂಲಕ ಪ್ರತಿಭಟನೆ ನಡೆಸುವುದು, ಹಿರಿಯ ನಾಯಕರ ಮನೆ ಬಾಗಿಲಿಗೆ ಹೋಗಿ ಅಂಗಲಾಚುವ ಪರಿಸ್ಥಿತಿಗೆ ತಲುಪಿದ್ದಾರೆ.

# ಕಾಂಗ್ರೆಸ್‌ನಿಂದ ಪರಿಶಿಷ್ಟ ಜಾತಿ–ಪಂಗಡಗಳ ಮೀಸಲಾತಿ ಕಸಿಯಲು ಯತ್ನ: ಮಾಜಿ ಸಚಿವ ಶ್ರೀರಾಮುಲು ಆರೋಪ

**ದಾವಣಗೆರೆ, ಜೂ.14:** ರಾಜ್ಯ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ನೀಡಲಾಗಿರುವ ಹೆಚ್ಚುವರಿ ಮೀಸಲಾತಿ ಕಸಿದುಕೊಳ್ಳುವ ಕೆಲಸ ಮಾಡುತ್ತಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ವಾಲ್ಮೀಕಿ (ಎಸ್‌ಟಿ) ಸಮುದಾಯಕ್ಕೆ ಶೇ.3ರಿಂದ ಶೇ.7ಕ್ಕೆ ಹಾಗೂ ಎಸ್‌ಸಿ ಸಮುದಾಯಕ್ಕೆ ಶೇ.15 ರಿಂದ ಶೇ.17ಕ್ಕೆ ಮೀಸಲಾತಿ ಹೆಚ್ಚಿಸಿದ್ದನ್ನು ಕಾಂಗ್ರೆಸ್ ಸರ್ಕಾರ ಕಸಿಯುವ ಕೆಲಸ ಮಾಡುತ್ತಿದೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊಟ್ಟಿದ್ದ ಮೀಸಲಾತಿಗೆ ಸಂಬಂಧಿಸಿದಂತೆ ಇರುವಂತಹ ತಡೆಯಾಜ್ಞೆಯನ್ನು ಕೂಡಲೇ ಸರ್ಕಾರ ತೆರವುಗೊಳಿಸಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಸಾಮಾಜಿಕ ನ್ಯಾಯವನ್ನ ಒದಗಿಸಬೇಕು ಎಂದು ಆಗ್ರಹಿಸಿದರು. ರಾಜ್ಯ



ಸರ್ಕಾರ ತಕ್ಷಣಕ್ಕೆ ನ್ಯಾಯಾಲಯದಲ್ಲಿ ತಡೆಯಾಜ್ಞೆ ತೆರವುಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಬೇಕು. ಅದನ್ನು ಬಿಟ್ಟು ಕೇವಲ 9ನೇ ಶೆಡ್ಯೂಲ್ ನೆಪಹೇಳಿ ಸಮುದಾಯದ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡಬಾರದು ಎಂದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮೀಸಲಾತಿ ಕಡಿತಗೊಳಿಸಿದ ಪರಿಣಾಮ ಶಾಲಾ– ಕಾಲೇಜುಗಳ ಪ್ರವೇಶಾತಿ ಪ್ರಕ್ರಿಯೆಯಲ್ಲಿ ಎಸ್‌ಟಿ ಸಮುದಾಯದ ಮಕ್ಕಳಿಗೆ ಕೇವಲ ಶೇ.3ರಷ್ಟು ಮಾತ್ರ ಅವಕಾಶ ಸಿಗುತ್ತಿದ್ದು, ಸಾವಿರಾರು ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಮತ್ತು ಉದ್ಯೋಗದ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಕಾಂಗ್ರೆಸ್‌ನಲ್ಲಿರುವ ಪರಿಶಿಷ್ಟ ಸಮುದಾಯದ ಸಚಿವರು ಹಾಗೂ ಶಾಸಕರು ಧ್ವನಿ ಎತ್ತುತ್ತಿಲ್ಲ. ಸರ್ಕಾರ ಇದೇ ಧೋರಣೆ ಮುಂದುವರಿಸಿದರೆ ಸರ್ಕಾರದ ಧೋರಣೆಯ ವಿರುದ್ಧ ರಾಜ್ಯಾದ್ಯಂತ ತೀವ ಸ್ವರೂಪದ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದರು.

ಕಾಂಗ್ರೆಸ್ ಶಾಸಕರು ತಮ್ಮ ಸ್ವಾರ್ಥ ಬದಿಗಿಟ್ಟು, ಸಮುದಾಯದ ಹಿತದೃಷ್ಟಿಯಿಂದ ಸರ್ಕಾರದ ವಿರುದ್ಧ ಧ್ವನಿ ಎತ್ತಬೇಕು. ಮೇಜು ಕುಟ್ಟಿ ಮೀಸಲಾತಿ ಮರಳಿ ಕೊಡಿಸುವಂತೆ ಮುಖ್ಯಮಂತ್ರಿಗಳ ಮೇಲೆ ಒತ್ತಡ ಹೇರಬೇಕು. ಒಂದು ವೇಳೆ ಕಾಂಗ್ರೆಸ್ ಸರ್ಕಾರ ಹೆಚ್ಚುವರಿ ಮೀಸಲಾತಿ ನೀಡಲು ವಿಫಲವಾದರೆ, 2028ರಲ್ಲಿ ಮತ್ತೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತ. ಬಿಜೆಪಿ ಅಧಿಕಾರಕ್ಕೆ ಬಂದ ತಕ್ಷಣವೇ ಎಸ್ಸಿ–ಎಸ್ಟಿ ಸಮುದಾಯಗಳಿಗೆ ನೀಡಿದ್ದ ಹಳೆಯ ಮೀಸಲಾತಿಯನ್ನು ಯಥಾಸ್ಥಿತಿಯಲ್ಲಿ ಮರು ಸ್ಥಾಪಿಸಲಾಗುವುದು ಎಂದರು.

ಪಕ್ಷದಿಂದ ಉಚ್ಚಾಟನೆಗೊಂಡಿರುವ ಬಸನಗೌಡ ಪಾಟೀಲ್ ಯತ್ನಾಳ್, ಕೆ.ಎಸ್. ಈಶ್ವರಪ್ಪ ಸೇರಿದಂತೆ ಉಚ್ಚಾಟಿತ ಬಿಜೆಪಿ ನಾಯಕರ ಮರು ಸೇರ್ಪಡೆಗೆ ಹೈಕಮಾಂಡ್ ಸುಳಿವು ನೀಡಿದೆ ಎಂಬ ಪ್ರಶ್ನೆಗೆ, ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಏನಿದ್ದರೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ರಾಮುಲು ಹೇಳಿದರು.




ಮಂಡ್ಯ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಫಸ್ಟ್ ಸರ್ಕಲ್ ಆಯೋಜಿಸಿದ್ದ 'ಮುನ್ನಡೆ ಮಂಡ್ಯ; ವಿಷನ್ 2035' ಎಂಬ ಕಾರ್ಯಾಗಾರದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪಾಲ್ಗೊಂಡಿದ್ದರು. ಕೃಷಿ ಕ್ಷೇತ್ರದಲ್ಲಿ ನಾವಿನ್ಯತೆ, ಆವಿಷ್ಕಾರ ಮತ್ತು ಸ್ವಾವಲಂಬನೆ ದೃಷ್ಟಿಯಿಂದ ಈ ಕಾರ್ಯಾಗಾರ ಮಹತ್ವದ್ದಾಗಿದೆ. ಈ ಸಂದರ್ಭದಲ್ಲಿ ಮಳಿಗೆಗಳಿಗೆ ಭೇಟಿ ನೀಡಿದ್ದು ಹಾಗೂ ಆಲೆಮನೆ ಮಳಿಗೆಯಲ್ಲಿ ಬೆಲ್ಲದ ಪಾಕ ತೆಗೆದಿದ್ದು ವಿಶೇಷ ಅನುಭವ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಸತೀಶ್ ಜಾರಕಿಹೊಳಿ–ಡಿ.ಕೆ. ಶಿವಕುಮಾರ್ ಭೇಟಿ

## ಸಂಪುಟ ವಿಸ್ತರಣೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಆದ್ಯತೆ ನೀಡುವಂತೆ ಮನವಿ



**ಬೆಂಗಳೂರು, ಜೂ.14:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಕುಮಾರಪಾರ್ಕ್ ಸರ್ಕಾರಿ ಅತಿಥಿ ಗೃಹದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿರುವುದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.

ಮುಂಬರುವ ಸಂಪುಟ ವಿಸ್ತರಣೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸಂಪುಟದಲ್ಲಿ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು. ವಿಶೇಷವಾಗಿ ನಾಯಕ ಸಮುದಾಯಕ್ಕೆ ಆದ್ಯತೆ ಕೊಡಬೇಕೆಂದು ಕೋರಿದ್ದಾರೆ.

ಈ ಭೇಟಿ ರಾಜಕೀಯ ವಲಯದಲ್ಲಿ ಹಲವು ರೀತಿಯ ವಿಶ್ಲೇಷಣೆಗಳಿಗೆ ಕಾರಣವಾಗಿದೆ. ಇಬ್ಬರೂ ನಾಯಕರು ಇತ್ತೀಚಿನ ರಾಜಕೀಯ ಬೆಳವಣಿಗೆಗಳ ಬಗ್ಗೆ ಗಹನವಾಗಿ ಚರ್ಚೆ ನಡೆಸಿರುವುದಾಗಿ ತಿಳಿದು ಬಂದಿದೆ.

ಇಬ್ಬರು ನಾಯಕರು ಮುಖಾಮುಖಿಯಾಗಿ ಚರ್ಚೆ ನಡೆಸಿರುವುದು ಕೇವಲ ಔಪಚಾರಿಕ ಭೇಟಿ ಮಾತ್ರವಲ್ಲದೆ, ಪಕ್ಷದ ಒಳಗಿನ ಸಮನ್ವಯ ಹಾಗೂ ಮುಂದಿನ ರಾಜಕೀಯ ಕಾರ್ಯತಂತ್ರಗಳ ಭಾಗವಾಗಿರಬಹುದು ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

ರಾಜ್ಯ ರಾಜಕೀಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು, ವಿರೋಧ ಪಕ್ಷಗಳ ತಂತ್ರಗಳು ಹಾಗೂ ಕಾಂಗ್ರೆಸ್ನ ಮುಂದಿನ ರಾಜಕೀಯ ಕಾರ್ಯತಂತ್ರದ ಕುರಿತೂ ಸಮಾಲೋಚನೆ ನಡೆಸಲಾಗಿದೆ ಎಂದು ಮೂಲಗಳು ಹೇಳಿವೆ. ಸರ್ಕಾರದ ಸ್ಥಿರತೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳ ಯಶಸ್ಸಿಗೆ ತಂಡದ ಕೆಲಸ ಮುಖ್ಯವೆಂದು ಪಕ್ಷದ ನಾಯಕತ್ವ ನಿರಂತರವಾಗಿ ಹೇಳುತ್ತ ಬಂದಿದೆ. ಈ ಹಿನ್ನೆಲೆಯಲ್ಲೇ ಜಾರಕಿಹೊಳಿ ಮತ್ತು ಶಿವಕುಮಾರ್ ಭೇಟಿಯನ್ನು ಪಕ್ಷದೊಳಗಿನ ಸಂವಹನ ಮತ್ತು ಸಮನ್ವಯದ ಭಾಗವಾಗಿ ನೋಡುವವರ ಸಂಖ್ಯೆಯೂ ಹೆಚ್ಚಾಗಿದೆ.

ರಾಜ್ಯ ರಾಜಕೀಯದ ಮುಂದಿನ ಹಂತಗಳಲ್ಲಿ ಈ ಭೇಟಿಯ ಪರಿಣಾಮ ಏನಾಗಲಿದೆ ಎಂಬುದರ ಮೇಲೆ ಈಗ ರಾಜಕೀಯ ವಲಯದ ಗಮನ ಕೇಂದ್ರೀಕೃತವಾಗಿದೆ.



ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಧ್ಯಕ್ಷ ಶಿವಶಂಕರಪ್ಪ ಎಸ್ ಸಾಹುಕಾರ್ ನೇತೃತ್ವದ ನಿಯೋಗದ ಸದಸ್ಯರು ಮೂಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕುಮಾರಪಾರ್ಕ್ ಸರಕಾರಿ ಅತಿಥಿ ಗೃಹದಲ್ಲಿ ಭಾನುವಾರ ಭೇಟಿ ಮಾಡಿ ಅಭಿನಂದಿಸಿದರು.



ಪ್ರಧಾನ ಮಂತ್ರಿ ನರೇಂದ್ರಮೋದಿಯವರು ಸತತ 12 ವರ್ಷಗಳನ್ನು ಪೂರೈಸಿದ ಐತಿಹಾಸಿಕ ಮೈಲಿಗಲ್ಲನ್ನು ಆಚರಿಸಲು ಮಂಡ್ಯದಲ್ಲಿ ನಡೆದ ಬೃಹತ್ ಸಾರ್ವಜನಿಕ ಸಭೆಯಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾಗವಹಿಸಿದ್ದರು. ಜಿಲ್ಲೆಯಾದ್ಯಂತದ ಜನರು ಮತ್ತು ನಾಗರಿಕರ ಉತ್ಸಾಹಭರಿತರಾಗಿ ಭಾಗವಹಿಸುವಿಕೆಯನ್ನು ವೀಕ್ಷಿಸಲು ಹೃದಯ ತುಂಬಿ ಬಂದಿದೆ, ಪ್ರಧಾನಿಯವರ ನಾಯಕತ್ವದಲ್ಲಿ ಭಾರತವು ಅಭೂತಪೂರ್ವ ಪ್ರಗತಿ, ಸಮಗ್ರ ಅಭಿವೃದ್ಧಿ ಮತ್ತು ಲಕ್ಷಾಂತರ ಜೀವನವನ್ನು ಪರಿವರ್ತಿಸುತ್ತಿರುವ ಸಬಲೀಕರಣಗೊಂಡ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ಪುನರುಚ್ಚರಿಸಿದರು.

# ಬಿಡದಿ ಟೌನ್‌ಶಿಪ್ ಸರ್ಕಾರದ ಸ್ಥಿರಾಸ್ತಿ

## ಬಿಡದಿ ಟೌನ್‌ಶಿಪ್ ಯೋಜನೆ ಲೂಟಿ ಹಣದ ಯೋಜನೆ

## ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ

**ಬೆಂಗಳೂರು ಜೂ.14:** ಬಿಡದಿ ಟೌನ್‌ಶಿಪ್‌ಯೋಜನೆ ಸರಕಾರಿ ರಿಯಲ್ ಎಸ್ಟೇಟ್ ಯೋಜನೆಯಾಗಿದೆ. ಇದು ಸಂಪೂರ್ಣವಾಗಿ ಹಣ ಲೂಟಿ ಮಾಡುವ ಯೋಚನೆಯಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದರು. ಬೆಂಗಳೂರಿನ ತಮ್ಮ ನಿವಾಸದಲ್ಲಿ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಕೇಂದ್ರ ಸಚಿವರು; ಬಿಡದಿ ಟೌನ್‌ಶಿಪ್ ನಾಡಿನ ಹಿತಾಸಕ್ತಿ ಅಡಗಿಲ್ಲ. ಭೂ ಮಾಫಿಯ ಹಾಗೂ ಭೂ ಲೂಟಿಕೋರರಿಗೆ ಲಾಭ ಮಾಡಿಕೊಡಲು ಇದನ್ನು ರೂಪಿಸಲಾಗಿದೆ. ಹೀಗಾಗಿ ಇದನ್ನು ನಾನು ಸರಕಾರಿ ರಿಯಲ್ ಎಸ್ಟೇಟ್ ದಂಧೆ ಎಂದು ಕರೆಯುತ್ತೇನೆ ಎಂದು ಹೇಳಿದರು.

ರಸ್ತೆಗಳಲ್ಲಿ ಮೊಣಕಾಲುದ್ದ ಗುಂಡಿಗಳು ಬಿದ್ದು ವಾಹನ ಸಂಚಾರ ದೊಡ್ಡ ಪ್ರಯಾಸವಾಗಿದೆ. ಅದೇನೋ ಬ್ರ್ಯಾಂಡ್ ಬೆಂಗಳೂರು ಎಂದು ಹೇಳುತ್ತಿದ್ದರಲ್ಲ, ಅದನ್ನು ಮಾಡುವುದು ಬಿಟ್ಟು ಬಿಡದಿ ರೈತರ ಬದುಕಿಗೆ ಬೆಂಕಿ ಹಾಕಲು ಹೊರಟಿದ್ದಾರೆ ಎಂದು ಅವರು ಕಟುವಾಗಿ ಟೀಕಿಸಿದರು.

ಬೆಂಗಳೂರು ಅಭಿವೃದ್ಧಿಗೆ ಎಳ್ಳಷ್ಟು ಉಪಯೋಗ ಆಗದ ಈ ಯೋಜನೆಯನ್ನು ತಮ್ಮ ಸ್ವಾರ್ಥಕ್ಕಾಗಿ, ರಿಯಲ್ ಎಸ್ಟೇಟ್ ಮಾಫಿಯಾದೊಂದಿಗೆ ಕೈಜೋಡಿಸಿ ರೈತರ ಭೂಮಿಯನ್ನು ಲೂಟಿ ಹೊಡೆಯಲು ಹೊರಟಿದ್ದಾರೆ. ಈ ಹಿನ್ನೆಯಲ್ಲಿ ನಮ್ಮ ಪಕ್ಷ ರೈತರ ಪರವಾಗಿ ನಿಲ್ಲುತ್ತದೆ. ಅವರ ಜತೆ ನಿಂತು ಕಾನೂನು ಹೋರಾಟ ನಡೆಸುತ್ತದೆ ಎಂದು ಕೇಂದ್ರ ಸಚಿವರು ಹೇಳಿದರು.

### ಪ್ರಧಾನಿ ಕೃಷಿ, ನೀರಾವರಿ ಭೂಮಿಯಲ್ಲಿ ಟೌನ್‌ಶಿಪ್ ಮಾಡಿಲ್ಲ

ಜನರಿಂದ, ರೈತರಿಂದ ತೀವ್ರ ವಿರೋಧ ಬಂದ ನಂತರ ಈಗ ಪ್ರಧಾನಿ ನರೇಂದ್ರ ಮೋದಿಯವರೇ ಈ ಯೋಜನೆಯನ್ನು ಮೆಚ್ಚಿಕೊಂಡಿದ್ದಾರೆ ಎಂದು ಹೇಳುತ್ತಿದ್ದಾರೆ. ಆದರೆ, ನರೇಂದ್ರ ಮೋದಿ ಅವರು ಟೌನ್‌ಶಿಪ್‌ಗಳನ್ನು ಹಾಗೂ ಕೈಗಾರಿಕೆಗಳನ್ನು ಸ್ಥಾಪನೆ ಮಾಡಿದ್ದು ಎಲ್ಲಿ..? ಭೂಕಂಪದಿಂದ ಸಂಪೂರ್ಣವಾಗಿ ನಾಶವಾಗಿದ್ದ ಪ್ರದೇಶದಲ್ಲಿ ಅವರು ಇಂಥ ಯೋಜನೆಗಳನ್ನು ಅನುಷ್ಠಾನಕ್ಕೆ ತಂದರು. ಆದರೆ, ಬಿಡದಿಯಲ್ಲಿ ಬೇರೆ ಪರಿಸ್ಥಿತಿ ಇದೆ. ಇಲ್ಲಿ ತೋಟಗಳಿವೆ, ಹೈನುಗಾರಿಕೆ ನಡೆಯುವ ಭೂಮಿಯಿದೆ. ಈ ವಿಚಾರವನ್ನು ಮುಖ್ಯಮಂತ್ರಿಗಳು ಪ್ರಧಾನಿಗಳಿಗೆ ಹೇಳಿದ್ದಾರಾ ಎಂದು ಕೇಂದ್ರ ಸಚಿವರು ಪ್ರಶ್ನಿಸಿದರು.

ಪ್ರಧಾನಿಗಳು ಮತ್ತು ಮುಖ್ಯಮಂತ್ರಿಗಳು ಇಬ್ಬರೇ ಒನ್ ಟು ಒನ್ ಮಾತನಾಡಿದ್ದಾರೆ. ಅವರು ಏನು ಮಾತನಾಡಿದ್ದಾರೆ ಎಂಬುದು ಯಾರಿಗೂ ಗೊತ್ತಿಲ್ಲ. ಆದರೆ, ಮುಖ್ಯಮಂತ್ರಿಗಳು ರಾಜ್ಯದ ರೈತರ ಹಿತ ಬಲಿಕೊಡುವುದಕ್ಕೆ ಪ್ರಧಾನಿಗಳ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವುದು ಬೇಡ. ಅವರಲ್ಲಿ ಅಧಿಕಾರ ಇದೆ. ಏನು ಬೇಕಾದರೂ ಮಾಡುವ ಉದ್ಧಟತನ ವ್ಯಕ್ತಿ ಅವರು ಎಂದು ಸಚಿವರು ತರಾಟೆಗೆ ತೆಗೆದುಕೊಂಡರು.

ಟೌನ್‌ಶಿಪ್ ವಿಷಯದಲ್ಲಿ ರಾಜಕೀಯ ಮಾಡುವ ಉದ್ದೇಶ ನನಗೆ ಇಲ್ಲ. 2006ರಲ್ಲಿ ನಾನು ಐದು ಟೌನ್‌ಶಿಪ್‌ಗಳನ್ನು ಮಾಡಲು ಹೊರಟಾಗ ಇತ್ತೀಚಿನ ದಿನಗಳವರೆಗೂ ಕಾನೂನು ಮಂತ್ರಿ ಆಗಿದ್ದ ಎಚ್.ಕೆ.ಪಾಟೀಲ್ ಅಧ್ಯಕ್ಷತೆಯಲ್ಲಿ ಸತ್ಯಶೋಧನಾ ಸಮಿತಿ ರಚನೆ ಮಾಡಿ ಐದೂ ಸ್ಥಳಗಳಲ್ಲಿ ಸತ್ಯಶೋಧನೆ ಮಾಡಿದ್ದರಲ್ಲಾ.. ಆ ಸತ್ಯಶೋಧನಾ ವರದಿ ಎಲ್ಲಿ ಹೋಯಿತು? ಅದನ್ನು ಜನರ ಮುಂದೆ ಇಡಿ. ಯಾವ ಉದ್ದೇಶಕ್ಕೆ ಅಂದು ಈ ಯೋಜನೆಯನ್ನು ಕಾಂಗ್ರೆಸ್ ಪಕ್ಷದ ನಾಯಕರು ವಿರೋಧ ಮಾಡಿದರು ಎಂಬುದನ್ನು ಸಾರ್ವಜನಿಕವಾಗಿ ಜನರ ಮುಂದೆ ಹೇಳಲಿ ಎಂದು ಕುಮಾರಸ್ವಾಮಿ ಅವರು ಒತ್ತಾಯ ಮಾಡಿದರು.

ಕಾನೂನಿನಲ್ಲಿ ಏನು ಹೋರಾಟ ಮಾಡಬೇಕೋ ಮಾಡುತ್ತೇವೆ. ರೈತರಿಗೆ ನ್ಯಾಯ ಕೊಡಿಸಲಿದ್ದೇವೆ. ರೈತರ ಪರ ನಿಲ್ಲುವುದು ಜನಪ್ರತಿನಿಧಿಗಳ ಕರ್ತವ್ಯ. ಆ ಕೆಲಸವನ್ನು ನಾವು ಮಾಡುತ್ತೇವೆ. ಯಾವುದೇ ಕಾರಣಕ್ಕೂ ರೈತರ ಭೂಮಿ ಕೊಳ್ಳೆ ಹೊಡೆಯಲು ಬಿಡುವುದಿಲ್ಲ ಎಂದು ಅವರು ನೇರ ಮಾತುಗಳಲ್ಲಿ ಹೇಳಿದರು.

ಈ ಯೋಜನೆ ಕುಮಾರಸ್ವಾಮಿ ಅವರ ಕೂಸು ಎಂದು ಮುಖ್ಯಮಂತ್ರಿ ಸೇರಿದಂತೆ ಇನ್ನೂ ಕೆಲವರು ಹೇಳುತ್ತಿದ್ದಾರೆ. ನಾನು ಚಿಂತನೆ ಮಾಡಿದ್ದು 2006ರಲ್ಲಿ, ಈಗ ನಾವು ಇರುವುದು 2026. 20 ವರ್ಷಗಳಲ್ಲಿ ಎಷ್ಟು ಬದಲಾವಣೆಯಾಗಿದೆ, ಎಷ್ಟೊಂದು ಅಭಿವೃದ್ಧಿಯಾಗಿದೆ.

ಇಷ್ಟು ವರ್ಷಗಳಲ್ಲಿ ಏನೆಲ್ಲಾ ಆಯಿತು ಎನ್ನುವುದನ್ನು ಈ ಸರ್ಕಾರ ಅರ್ಥಃ ಮಾಡಿಕೊಳ್ಳಬೇಕು. ಯಾವುದೇ ಯೋಜನೆ ಕೈಗೊಳ್ಳುವ ಮೊದಲು ರೈತರ ಒಪ್ಪಿಗೆ ಪಡೆಯಬೇಕು. ಅದನ್ನು ಮಾಡದೇ ಈ ಸರ್ಕಾರ ಸರ್ವಾಧಿಕಾರಿ ಮನೋಭಾವದಿಂದ ರೈತರನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮೊದಲಿನಿಂದ ಕಾಂಗ್ರೆಸ್ ಸರಕಾರ ಇಂಥದೇ ದಂಧೆಯಲ್ಲಿ ನಿರತವಾಗಿದೆ. ಬೆಂಗಳೂರು ಸುತ್ತಮುತ್ತ ಅರ್ಕಾವತಿ ಬಡಾವಣೆಗೆ ಸುಮಾರು ಮೂರು ಸಾವಿರ ಎಕರೆ ಭೂಮಿಯನ್ನು ನೋಟಿಫೈ ಮಾಡಲಾಗಿತ್ತು. ಆಮೇಲೆ ಅದರಲ್ಲಿ ಒಂದು ಸಾವಿರ ಎಕರೆ ಭೂಮಿಯನ್ನು ಕೈಬಿಡಲಾಯಿತು. ಇವೆಲ್ಲವೂ ಕಣ್ಣ ಮುಂದೆಯೇ ನಡೆದಿವೆ. ಅದರ ತನಿಖೆಗೆ ಕೆಂಪಣ್ಣ ಆಯೋಗ ರಚನೆ ಮಾಡಿದರು. ಆ ವರದಿ ಎಲ್ಲಿ ಕೊಳೆಯುತ್ತಿದೆಯೋ ಗೊತ್ತಿಲ್ಲ ಎಂದು ಅವರು ಹೇಳಿದರು.

# ಹೊಸ ಅರ್ಜಿ ಹೆಸರಲ್ಲಿ ಗ್ಯಾರಂಟಿ ಫಲಾನುಭವಿಗಳಿಗೆ ಕತ್ತರಿ

## ಇದು ಒಳಸಂಚು: ಪ್ರತಿಪಕ್ಷ ನಾಯಕ ಅಶೋಕ್ ಟೀಕೆ



**ಬೆಂಗಳೂರು, ಜೂ.14–** ಗ್ಯಾರಂಟಿಗಳಿಗೆ ಹೊಸ ಅರ್ಜಿ ಸಲ್ಲಿಕೆಯ ಹಿಂದೆ ಇರುವುದು ಅರ್ಹತೆಯ ಅಳತೆ ಗೋಲು ಅಲ್ಲ. ಫಲಾನುಭವಿಗಳಿಗೆ ಕತ್ತರಿ ಹಾಕುವ ಒಳ ಸಂಚು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಟ್ವೀಟ್ ಮಾಡಿರುವ ಅವರು, ಗೃಹಲಕ್ಷ್ಮಿಗೆ ಕಷ್ಟ, ಗೃಹಜ್ಯೋತಿಗೆ ಕತ್ತಲು. ಅನರ್ಹರ ನೆಪದಲ್ಲಿ ಬಡವರ ಹಕ್ಕು ಕಬಳಿಸಲು ಬಂದಿದೆ ಹೊಸ ಅರ್ಜಿ ಎಂಬ ಹೊಸ ಕತ್ತರಿ ಎಂದು ವ್ಯಂಗ್ಯವಾಡಿದ್ದಾರೆ. ಸತ್ತವರ ಹೆಸರನ್ನು ಫಲಾನುಭವಿಗಳ ಪಟ್ಟಿಯಿಂದ ತೆಗೆಯಲು ಇಡೀ ಗ್ಯಾರಂಟಿ ಯೋಜನೆಗೆ ಹೊಸ ಅರ್ಜಿ ಸಲ್ಲಿಸಬೇಕೆ ಎಂದು ಪ್ರಶ್ನಿಸಿರುವ ಅವರು, ಇದು ಯಾವ ಸೀಮೆಯ ತೊಘಲಕ್ ದರ್ಬಾರ್ ಸ್ವಾಮಿ ಎಂದು ಹರಿಹಾಯ್ದಿದ್ದಾರೆ. ಅನರ್ಹರನ್ನು ತಡೆಯುವ ನೆಪದಲ್ಲಿ ಈಗಾಗಲೇ ಸೌಲಭ್ಯ ಪಡೆಯುತ್ತಿರುವ ಲಕ್ಷಾಂತರ ಸ್ವಾಭಿಮಾನಿ ತಾಯಂದಿರುವ ಮತ್ತು ಜನಸಾಮಾನ್ಯರನ್ನು ಮತ್ತೆ ಕಚೇರಿಗಳ ಮುಂದೆ, ಸೈಬರ್ ಕೇಂದ್ರಗಳ ಮುಂದೆ ಸಾಲಿನಲ್ಲಿ ನಿಲ್ಲಿಸಲು ನಿಮಗೆ ನಾಚಿಕೆಯಾಗುವುದಿಲ್ಲವೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ. ನಿಮ್ಮ ಸರ್ಕಾರದ ಕಮೀಷನ್ ದಂಧೆ ಹಾಗೂ ದುರಾಡಳಿತದಿಂದ ರಾಜ್ಯದ ಬೊಕ್ಕಸ ಸಂಪೂರ್ಣ ದಿವಾಳಿಯಾಗಿದೆ. ಗ್ಯಾರಂಟಿಗೆ ನೀಡಲು ಹಣವಿಲ್ಲದೆ ಈಗ ಜನರಿಗೆ ತೊಂದರೆ ಕೊಟ್ಟು ಫಲಾನುಭವಿಗಳ ಸಂಖ್ಯೆಯನ್ನು ಕಡಿತಗೊಳಿಸುವುದೇ ನಿಮ್ಮ ಅಸಲಿ ಅಜೆಂಡಾ ಎನ್ನುವ ಸತ್ಯವನ್ನು ಅರಿಯದಷ್ಟು ಅಮಾಯಕರಲ್ಲ ಸ್ವಾಭಿಮಾನಿ ಕನ್ನಡಿಗರು. ಮನೆಗೆ ತಲುಪಲಿದೆ ನಮೂನೆ ಎಂಬ ನಿಮ್ಮ ಹೊಸ ನಾಟಕ ಯಾರಿಗಾಗಿ ಎಂದು ಪ್ರಶ್ನಿಸಿದ್ದಾರೆ. ಬಡವರ, ಶೋಷಿತರ ಹಕ್ಕಿನ ದುಡ್ಡಿಗೆ ಕತ್ತರಿ ಹಾಕಲು ಹೊರಟಿರುವ ನಿಮ್ಮ ಜನ ವಿರೋಧಿ ನೀತಿಯನ್ನು ಸ್ವಾಭಿಮಾನಿ ಕನ್ನಡಿಗರು ಸಹಿಸುವುದಿಲ್ಲ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಸಾಲಿನಲ್ಲಿ ನಿಲ್ಲಿಸಿ ಕಾಟ ಕೊಡುವುದನ್ನು ತಕ್ಷಣ ನಿಲ್ಲಿಸಿ. ಬೊಕ್ಕಸದ ದುಡ್ಡನ್ನು ಲೂಟಿ ಹೊಡೆಯುವುದನ್ನು ಬಿಟ್ಟು ಜನರಿಗೆ ಕೊಟ್ಟ ಮಾತಿನಂತೆ ಗ್ಯಾರಂಟಿ ಸೌಲಭ್ಯಗಳನ್ನು ತಲುಪಿಸಿ. ಇಲ್ಲದಿದ್ದರೆ ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷವನ್ನು ಗಂಟು ಮೂಟೆ ಕಟ್ಟಿಸಿ ಶಾಶ್ವತವಾಗಿ ಮನೆಗೆ ಕಳುಹಿಸುವುದು ಗ್ಯಾರಂಟಿ ಎಂದು ಅಶೋಕ್ ಹೇಳಿದ್ದಾರೆ.

# ಮುಂದಿನ 5 ದಿನಗಳಲ್ಲಿ ಹರಿಯಾಣ, ಪಂಜಾಬ್, ದೆಹಲಿ, ಚಂಡೀಗಢದಲ್ಲಿ

## ತಾಪಮಾನ 4-6°C ಏರುವ ಸಾಧ್ಯತೆ: ಹವಾಮಾನ ಇಲಾಖೆ ಎಚ್ಚರಿಕೆ

**ಪಂಚಕುಲ, ಜೂ.14:** ಭಾರತ ಹವಾಮಾನ ಇಲಾಖೆ (ಐಎಂಡಿ) ಇಂದು ಬಿಡುಗಡೆ ಮಾಡಿದ ಇತ್ತೀಚಿನ ಮುನ್ಸೂಚನೆಯ ಪ್ರಕಾರ, ಹರಿಯಾಣ, ಪಂಜಾಬ್, ದೆಹಲಿ ಮತ್ತು ಚಂಡೀಗಢದಲ್ಲಿ ಮುಂದಿನ ಐದು ದಿನಗಳಲ್ಲಿ ಗರಿಷ್ಠ ತಾಪಮಾನವು ಕ್ರಮೇಣ 4–6 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆಯಿದೆ. ಇತ್ತೀಚಿನ ದಿನಗಳಲ್ಲಿ ವಾಯುವ್ಯ ಭಾರತದ ಹಲವಾರು ಭಾಗಗಳಲ್ಲಿ ಗರಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಕಡಿಮೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಪಂಜಾಬ್ನ ಹೆಚ್ಚಿನ ಸ್ಥಳಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ತಾಪಮಾನ ದಾಖಲಾಗಿದೆ, ಆದರೆ ಹರಿಯಾಣ ಮತ್ತು ದೆಹಲಿಯಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ತಾಪಮಾನ ಕಂಡುಬಂದಿದೆ. ಐಎಂಡಿ ಪ್ರಕಾರ, ಜೂನ್ 14 ರಿಂದ ಜೂನ್ 18 ರವರೆಗೆ ಚಂಡೀಗಢ ಮತ್ತು ದೆಹಲಿ ಸೇರಿದಂತೆ ಪಂಜಾಬ್ ಮತ್ತು ಹರಿಯಾಣದಲ್ಲಿ ಮಾತ್ರ ಪ್ರತ್ಯೇಕ ಮಳೆಯಾಗುವ ಸಾಧ್ಯತೆಯಿದೆ. ನಂತರ ಮಳೆಯ ಚಟುವಟಿಕೆ ಸ್ವಲ್ಪ ಹೆಚ್ಚಾಗುವ ನಿರೀಕ್ಷೆಯಿದೆ, ಜೂನ್ 19 ಮತ್ತು ಜೂನ್ 20 ರಂದು ಈ ಪ್ರದೇಶದಲ್ಲಿ ಚದುರಿದ ಮಳೆಯಾಗುವ ಮುನ್ಸೂಚನೆ ಇದೆ. ಕಳೆದ 24 ಗಂಟೆಗಳಲ್ಲಿ, ವಾಯುವ್ಯ ಭಾರತದ ಬಯಲು ಪ್ರದೇಶಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗಿದೆ. ಪಂಜಾಬ್ನ ಪ್ರತ್ಯೇಕ ಸ್ಥಳಗಳಲ್ಲಿ ಬಿರುಗಾಳಿ ಬೀಸುವ ವರದಿಯಾಗಿದೆ. ಈ ಅವಧಿಯಲ್ಲಿ ಹರಿಯಾಣ, ಪಂಜಾಬ್, ದೆಹಲಿ ಮತ್ತು ಚಂಡೀಗಢದಲ್ಲಿ ವ್ಯಾಪಕ ಮಳೆಯಾಗುವುದಿಲ್ಲ ಎಂದು ಐಎಂಡಿಯ ಏಳು ದಿನಗಳ ಮುನ್ಸೂಚನೆ ಸೂಚಿಸುತ್ತದೆ. ಆದಾಗ್ಯೂ, ತಾಪಮಾನವು ಸ್ಥಿರವಾಗುವ ಮೊದಲು ವಾಯುವ್ಯ ಭಾರತದ ಬಯಲು ಪ್ರದೇಶಗಳಲ್ಲಿ ಹಗಲಿನ ತಾಪಮಾನದಲ್ಲಿ ಸ್ಥಿರವಾದ ಏರಿಕೆ ಇರುತ್ತದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಈ ಅವಧಿಯಲ್ಲಿ ವಾಯುವ್ಯ ಭಾರತದ ಬಯಲು ಪ್ರದೇಶಗಳಲ್ಲಿ ದಾಖಲಾದ ಗರಿಷ್ಠ ಗರಿಷ್ಠ ತಾಪಮಾನ ರಾಜಸ್ಥಾನದ ಫಲೋಡಿಯಲ್ಲಿ 42.8 ಡಿಗ್ರಿ ಸೆಲ್ಸಿಯಸ್ ಆಗಿತ್ತು. ಜೂನ್ 20 ರ ನಂತರದ ಎರಡು ದಿನಗಳ ಮುನ್ಸೂಚನೆಯಲ್ಲಿ, ಪಶ್ಚಿಮ ಹಿಮಾಲಯ ಪ್ರದೇಶದ ಮೇಲೆ ಪ್ರತ್ಯೇಕ ಮಳೆಯಾಗುವ ಮುನ್ಸೂಚನೆಯನ್ನು ಐಎಂಡಿ ನೀಡಿದೆ.

# ಬಲವಂತದ ಬಿಡದಿ ಭೂಸ್ವಾಧೀನ ಪ್ರಕ್ರಿಯೆ ನಿಲ್ಲಿಸಿ

## ರಾಹುಲ್‌ಗಾಂಧಿಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಪತ್ರ



ಬೆಂಗಳೂರು: ಬಿಡದಿ ಪ್ರದೇಶದ ರೈತರ ಹಿತಾಸಕ್ತಿಗಳ ವಿರುದ್ಧವಾಗಿ ನಡೆಯುತ್ತಿರುವ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಮಧ್ಯ ಪ್ರವೇಶಿಸುವಂತೆ ಕೋರಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಬಹಿರಂಗ ಪತ್ರ ಬರೆದಿದ್ದಾರೆ.ಕರ್ನಾಟಕ ಬಿಜೆಪಿ ಘಟಕದ ರಾಜ್ಯಾಧ್ಯಕ್ಷನಾಗಿ, ಇಲ್ಲಿನ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ, ರಾಜ್ಯದ ರೈತರ ಅಳಲನ್ನು ಕೇಳಿಸಿಕೊಳ್ಳದೇ ಇರುವುದರಿಂದ, ನಿಮಗೆ ಈ ಪತ್ರವನ್ನು ಬರೆಯುತ್ತಿದ್ದೇನೆ. ಕರ್ನಾಟಕದ ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯಲ್ಲಿ ಫಲವತ್ತಾದ ಭೂಮಿಯನ್ನು ಕಳೆದುಕೊಂಡು ಕಣ್ಣೀರು ಹಾಕುತ್ತಿರುವ ಸಾವಿರಾರು ಶೋಷಿತ, ಅನ್ನದಾತ ರೈತ ಕುಟುಂಬಗಳ ಧ್ವನಿಯಾಗಿ ನಿಮ್ಮ ಗಮನಕ್ಕೆ ಕೆಲವು ವಿಷಯಗಳನ್ನು ತರಲು ಬಯಸುತ್ತಿದ್ದೇನೆ ಮತ್ತು ತಾವು ನ್ಯಾಯಯುತ ಪ್ರತಿಕ್ರಿಯೆಯನ್ನು ನೀಡಬೇಕು ಎಂದು ಈ ಮೂಲಕ ಕೋರುತ್ತಿದ್ದೇನೆ ಎಂದು ಮನವಿ ಮಾಡಿದ್ದಾರೆ.ನೀವು ದೇಶಾದ್ಯಂತ ರೈತರ ಭೂಮಿ ಉಳಿಸುವ ಹಾಗೂ ಕಾರ್ಪೊರೇಟ್ ಕಪಿಮುಷ್ಟಿಯಿಂದ ದೇಶವನ್ನು ರಕ್ಷಿಸುವ ಹೆಸರಿನಲ್ಲಿ ಘೋಷಣೆ ಕೂಗುತ್ತೀರಿ, ಯಾತ್ರೆ ನಡೆಸುತ್ತೀರಿ. ಆದರೆ ಕಾಂಗ್ರೆಸ್ ಸರ್ಕಾರವಿರುವ ಕರ್ನಾಟಕದಲ್ಲಿ ನಿಮ್ಮ ಮುಖ್ಯಮಂತ್ರಿಗಳು ನಾಡಿನ ಅನ್ನದಾತ ರೈತರ ಹಿತ ನಿರ್ಲಕ್ಷಿಸುತ್ತಿರುವುದು ತಮ್ಮ ಗಮನಕ್ಕೆ ಬಂದಿದೆ ಎಂದು ಭಾವಿಸುತ್ತೇನೆ. ಬಿಡದಿ ಸಮಗ್ರ ನಗರ (Greater Bengaluru Integrated Township-GBIT) ಯೋಜನೆಯ ಹೆಸರಿನಲ್ಲಿ ನಡೆಯುತ್ತಿರುವ ಈ ಸರ್ಕಾರಿ 'ಭೂಕಬಳಿಕೆ'ಯ ಬಗ್ಗೆ ನಿಮ್ಮ ನಿಲುವನ್ನು ಸ್ಪಷ್ಟಪಡಿಸಬೇಕು ಎಂದು ಕೋರುತ್ತಾ ತಮ್ಮ ಗಮನಕ್ಕೆ ಕೆಲವು ವಾಸ್ತವಾಂಶಗಳನ್ನು ತರಲು ಬಯಸುತ್ತೇನೆ ಎಂದಿದ್ದಾರೆ.ಬೆಂಗಳೂರು ನಗರದ ಸಂಚಾರ ದಟ್ಟಣೆ ಮತ್ತು ಜನಸಂದಣಿ ಒತ್ತಡವನ್ನು ಕಡಿಮೆ ಮಾಡಲು, ಕರ್ನಾಟಕದ ಕಾಂಗ್ರೆಸ್ ಸರ್ಕಾರ ಬಿಡದಿ ಮತ್ತು ಹಾರೋಹಳ್ಳಿ ನಡುವೆ ಸುಮಾರು 7,481 ಎಕರೆ ಪ್ರದೇಶದಲ್ಲಿ "ವರ್ಕ್–ಲಿವ್–ಪ್ಲೇ" (Work-Live-Play) ಮಾದರಿಯ ಬೃಹತ್ ಉಪನಗರವನ್ನು (Satellite Township) ಅಭಿವೃದ್ಧಿಪಡಿಸಲು ಮುಂದಾಗಿದೆ.

ಈ ಯೋಜನೆಗೆ ಅಂದಾಜು 18,000 ಕೋಟಿ ರೂ. ವೆಚ್ಚವನ್ನು ನಿಗದಿಪಡಿಸಲಾಗಿದ್ದು, ಎರಡನೇ ಪ್ರಮುಖ ವಾಣಿಜ್ಯ ಕೇಂದ್ರವನ್ನು (Second CBD) ನಿರ್ಮಿಸಲಾಗುವುದು ಎಂದು ಹೇಳಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನದ ಅಂತಿಮ ಅಧಿಸೂಚನೆಯನ್ನು 11 ಜೂನ್ 2026 ರಂದು ಅಧಿಕೃತವಾಗಿ ರಾಜ್ಯ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ. ಫಲವತ್ತಾದ ಕೃಷಿ ಭೂಮಿಯನ್ನೇ ಆಯ್ಕೆ ಮಾಡಿಕೊಂಡು ಈ ಯೋಜನೆಯನ್ನು ಮುಂದುವರಿಸುವ ಅಗತ್ಯ ಮತ್ತು ಸಮರ್ಥನೆ ಏನು ಎಂಬ ಪ್ರಶ್ನೆ ಸಹಜವಾಗಿಯೇ ಉದ್ಭವಿಸುತ್ತದೆ. ಈ ಹಿನ್ನೆಲೆಯಲ್ಲಿ ರೈತರ ಪರವಾಗಿ ಕೆಲವು ವಿಚಾರಗಳನ್ನು ತಮ್ಮ ಮುಂದಿಡುತ್ತಿದ್ದು ತಾವು ಸ್ಪಂದಿಸುವಿರಿ ಎಂಬ ನಂಬಿಕೆ ಇದೆ ಎಂದು ತಿಳಿಸಿದ್ದಾರೆ. ಬಿಡದಿಯ25 ಹಳ್ಳಿಗಳ ಅನ್ನದಾತರು ಕಳೆದ 470ಕ್ಕೂ ಅಧಿಕ ದಿನಗಳಿಂದ ನಿರಂತರವಾಗಿ ಶಾಂತಿಯುತ ಧರಣಿ ನಡೆಸುತ್ತಿದ್ದಾರೆ. 3,500ಕ್ಕೂ ಹೆಚ್ಚು ಸಣ್ಣ ಹಿಡುವಳಿದಾರರು ಲಿಖಿತ ಆಕ್ಷೇಪಣೆ ಸಲ್ಲಿಸಿದ್ದರೂ, ನಿಮ್ಮ ಮುಖ್ಯಮಂತ್ರಿಗಳು ಯಾವುದೇ ಸಾರ್ವಜನಿಕ ಸಭೆ ನಡೆಸದೆ, ರೈತರ ಒಪ್ಪಿಗೆಯನ್ನು ಸಂಪೂರ್ಣವಾಗಿ ಬದಿಗೊತ್ತಿ, ಅಂತಿಮ ಅಧಿಸೂಚನೆ ಹೊರಡಿಸಿದ್ದಾರೆ ಎಂದು ವಿವರಿಸಿದ್ದಾರೆ.

ಹಸಿರು ಭೂಮಿಯನ್ನು ಕಾಂಕ್ರೀಟ್ ಜಂಗಲ್ ಮಾಡುತ್ತಿರುವುದು ಏಕೆ? ಸ್ವಾಧೀನ ಪಡಿಸಿಕೊಳ್ಳಲಾಗುತ್ತಿರುವ ಈ ಭೂಮಿ ಬಂಜರು ಭೂಮಿಯಲ್ಲ. ಇದು ಬೆಂಗಳೂರು ನಗರಕ್ಕೆ ಪ್ರತಿದಿನ ಹಾಲು, ತರಕಾರಿ ಮತ್ತು ಹಣ್ಣುಗಳನ್ನು ಪೂರೈಸುವ, ತೆಂಗು, ಅಡಿಕೆ ಮತ್ತು ಬಾಳೆ ಬೆಳೆಯುವ ಅತ್ಯಂತ ಫಲವತ್ತಾದ ಮುಂಗಾರು ಬೆಳೆ ತೆಗೆಯುವ ಭೂಮಿಯಾಗಿದೆ. ಸಾವಿರಾರು ಗ್ರಾಮೀಣ ಮಹಿಳೆಯರು ಈ ಕೃಷಿ ಮತ್ತು ಸ್ಥಳೀಯ ಅಡಿಕೆ ತಟ್ಟೆ ತಯಾರಿಕಾ ಘಟಕಗಳನ್ನು ನಂಬಿ ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರೆ. ಹತ್ತಿರದಲ್ಲೇ ಇರುವ 1,000 ಎಕರೆ ವಿಸ್ತೀರ್ಣದ ಐತಿಹಾಸಿಕ ಬೈರಮಂಗಲ ಕೆರೆಯ ಪರಿಸರ ವ್ಯವಸ್ಥೆಯನ್ನು ನಾಶ ಮಾಡಿ, ಅಲ್ಲಿ "Work-Live-Play" ಹೆಸರಿನ ಕಾಂಕ್ರೀಟ್ ಜಂಗಲ್ ನಿರ್ಮಿಸಲು ಹೊರಟಿರುವುದು ಯಾವ ರೀತಿಯಲ್ಲಿ ಸಮರ್ಥನೀಯ ಎಂದು ಅವರು ಪ್ರಶ್ನಿಸಿದ್ದಾರೆ.ಈ ಯೋಜನೆಯಿಂದಾಗಿ ಗ್ರಾಮೀಣ ಭಾಗದ ಮಹಿಳಾ ಕಾರ್ಮಿಕರು ತಮ್ಮ ಕೃಷಿ ಮೂಲದ ಉದ್ಯೋಗ ಕಳೆದುಕೊಂಡು ನಗರದ ಅಸಂಘಟಿತ ಮತ್ತು ಅಭದ್ರ ವಲಯಕ್ಕೆ ತಳ್ಳಲ್ಪಡುತ್ತಿದ್ದಾರೆ. ಬಡವರ ಭೂಮಿಯನ್ನು ಅತ್ಯಂತ ಕಡಿಮೆ ಮಾರ್ಗಸೂಚಿ ದರಕ್ಕೆ ಕಿತ್ತುಕೊಂಡು, ರಿಯಲ್ ಎಸ್ಟೇಟ್ ಉದ್ಯಮಿಗಳ ಹಿತಾಸಕ್ತಿ ಕಾಯುವ ಈ ಯೋಜನೆ ನ್ಯಾಯಬದ್ಧ ಎಂದು ನಿಮಗೆ ಅನಿಸುತ್ತಿದೆಯೇ ಎಂದು ಪ್ರಶ್ನಿಸಿದ್ದು, ರಾಹುಲ್ ಗಾಂಧಿಯವರೇ, ತಾವು ಈ ಕೂಡಲೇ ಮಧ್ಯಪ್ರವೇಶಿಸಿ, ರಾಜ್ಯದ ಮುಖ್ಯಮಂತ್ರಿಗಳಿಗೆ, ರೈತರ ಹಿತಾಸಕ್ತಿಗಳ ವಿರುದ್ಧವಾಗಿ ನಡೆಸಲಾಗುತ್ತಿರುವ ಈ ಬಲವಂತದ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡುವಂತೆ ಸೂಚಿಸಬೇಕು ಎಂದು ಕೋರಿದ್ದಾರೆ.

# ಟ್ರಂಪ್ ಜೊತೆಗಿನ ಸಭೆಯಲ್ಲಿ ನಾವಿಕರ ಸಾವು, ವ್ಯಾಪಾರದ ಬಗ್ಗೆ ಪ್ರಸ್ತಾಪಿಸಿ

## ಪ್ರಧಾನಿಗೆ ಜೈರಾಮ್ ರಮೇಶ್ ಕಿವಿಮಾತು



**ನವದೆಹಲಿ, ಜೂ.14:** ಓಮನ್ ಕರಾವಳಿಯಲ್ಲಿ ಅಮೆರಿಕದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ ವಿಷಯವನ್ನು ಬಲವಾಗಿ ಎತ್ತುವಂತೆ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗಿನ ಇತ್ತೀಚಿನ ಸಂಭಾಷಣೆಯ ಸಂದರ್ಭದಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಬಳಸಿದ ಬೆದರಿಕೆ ಭಾಷೆಯನ್ನು ಎದುರಿಸುವಂತೆ ಹಿರಿಯ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಭಾನುವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕರೆದಿದ್ದಾರೆ. ಪ್ರಧಾನಿಯವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಲು ಸಿದ್ಧತೆ ನಡೆಸುತ್ತಿರುವಾಗ, ಮೋದಿ ಅವರು ಮುಂಬರುವ ಸಂವಾದದ ಸಮಯದಲ್ಲಿ ಭಾರತದ ಕಳವಳಗಳನ್ನು ದೃಢವಾಗಿ ತಿಳಿಸುತ್ತಾರೆಯೇ ಎಂದು ಭಾರತೀಯ ನಾಗರಿಕರು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ರಮೇಶ್ ಹೇಳಿದರು. "ಪ್ರಧಾನಿ ಮೋದಿ ಅವರು ಶೀಘ್ರದಲ್ಲೇ ತಮ್ಮ ಸ್ವಯಂ ಘೋಷಿತ ಒಳ್ಳೆಯ ಸ್ನೇಹಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗಲಿದ್ದಾರೆ" ಎಂದು ರಮೇಶ್ ಬರೆದಿದ್ದಾರೆ. "ಎಲ್ಲಾ ಭಾರತೀಯ ನಾಗರಿಕರ ಮನಸ್ಸಿನಲ್ಲಿರುವ ಪ್ರಮುಖ ಪ್ರಶ್ನೆಯೆಂದರೆ, ಪ್ರಧಾನಿ ಮೋದಿ (i) ಓಮನ್ ಕರಾವಳಿಯಲ್ಲಿ ಹಡಗಿನ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ್ದಕ್ಕೆ ಭಾರತದ ಬಲವಾದ ಖಂಡನೆಯನ್ನು ಎತ್ತುತ್ತಾರೆಯೇ; ಮತ್ತು (ii) ಜೂನ್ 12, 2026 ರಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗಿನ ಸಂಭಾಷಣೆಯಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಬಳಸಿದ ಬೆದರಿಕೆ ಮತ್ತು ನಿಜವಾಗಿಯೂ ಸ್ವೀಕಾರಾರ್ಹವಲ್ಲದ ಭಾಷೆ." ಕಾಂಗ್ರೆಸ್ ನಾಯಕರು ಅಮೆರಿಕದೊಂದಿಗೆ ನಡೆಯುತ್ತಿರುವ ವ್ಯಾಪಾರ ಮಾತುಕತೆಗಳನ್ನು ಮೋದಿ ಸರ್ಕಾರ ನಿರ್ವಹಿಸುವ ರೀತಿಯನ್ನು ಗುರಿಯಾಗಿಸಿಕೊಂಡರು, ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಚರ್ಚೆಗಳನ್ನು ಮುನ್ನಡೆಸಲು ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ಶೀಘ್ರದಲ್ಲೇ ಭಾರತಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ ಎಂದು ಗಮನಿಸಿದರು. ಮಧ್ಯಂತರ ವ್ಯಾಪಾರ ಒಪ್ಪಂದ ಎಂದು ಅವರು ವಿವರಿಸಿದ ಚೌಕಟ್ಟನ್ನು ಫೆಬ್ರವರಿ 3, 2026 ರಂದು ಅಧ್ಯಕ್ಷ ಟ್ರಂಪ್ ಘೋಷಿಸಿದ್ದಾರೆ ಎಂದು ರಮೇಶ್ ನೆನಪಿಸಿಕೊಂಡರು ಮತ್ತು ಈ ವ್ಯವಸ್ಥೆಯು ಭಾರತದಿಂದ ಗಮನಾರ್ಹ ರಿಯಾಯಿತಿಗಳನ್ನು ಒಳಗೊಂಡಿದೆ ಎಂದು ಆರೋಪಿಸಿ ದರು. ಓಮನ್ ಬಳಿ ಅಮೆರಿಕದ ಮಿಲಿಟರಿ ಕಾರ್ಯಾಚರಣೆಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ ನಂತರ ಮೋದಿ ಸರ್ಕಾರವು ಅಮೆರಿಕದೊಂದಿಗೆ ಸಂಬಂಧಗಳನ್ನು ನಿರ್ವಹಿಸುವ ಬಗ್ಗೆ ಕಾಂಗ್ರೆಸ್ ಪಕ್ಷದ ತೀವ್ರ ಟೀಕೆಗೆ ಈ ಹೇಳಿಕೆಗಳು ಕಾರಣವಾಗಿವೆ. ಕಳೆದ ಹಲವು ದಿನಗಳಿಂದ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಕಾಂಗ್ರೆಸ್ ನಾಯಕರು ಈ ಘಟನೆಗೆ ಸರ್ಕಾರದ ಪ್ರತಿಕ್ರಿಯೆಯನ್ನು ಪ್ರಶ್ನಿಸಿದ್ದಾರೆ, ಭಾರತದ ಸಾರ್ವಭೌಮತ್ವವನ್ನು ಸಮರ್ಪಕವಾಗಿ ರಕ್ಷಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ ಮತ್ತು ನಾವಿಕರ ಸಾವುಗಳು ಮತ್ತು ಭಾರತ–ಅಮೆರಿಕ ಸಂಬಂಧಗಳ ವಿಶಾಲ ಪಥದ ಬಗ್ಗೆ ಹೆಚ್ಚಿನ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಒತ್ತಾಯಿಸಿದ್ದಾರೆ.

# ಕಚ್ಚಾತೈಲ ಆಮದು ತಡೆಯಲು ಶೇ.100 ರಷ್ಟು ಎಥೆನಾಲ್ ಇಂಧನ ಬಳಕೆ: ಕೇಂದ್ರ ಸಚಿವ ಗಡ್ಕರಿ ಅನುಮೋದನೆ

**ನಾಗ್ಪುರ, ಜೂ.14:** ಆಮದು ಮಾಡಿಕೊಂಡ ಕಚ್ಚಾತೈಲ ಮೇಲಿನ ಭಾರತದ ಅವಲಂಬನೆಯನ್ನು ಕಡಿಮೆ ಮಾಡುವ ಮತ್ತು ಪರ್ಯಾಯ ಇಂಧನ ಮೂಲಗಳಿಗೆ ಪರಿವರ್ತನೆಯನ್ನು ವೇಗಗೊಳಿಸುವ ಗುರಿಯನ್ನು ಹೊಂದಿರುವ 100 ಪ್ರತಿಶತ ಎಥೆನಾಲ್ ಇಂಧನದ ಬಳಕೆಯನ್ನು ಅನುಮೋದಿಸಿದ್ದೇನೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಎನ್ಡಿಎ ಸರ್ಕಾರದ 12 ವರ್ಷಗಳನ್ನು ಗುರುತಿಸಲು ನಾಗ್ಪುರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಗಡ್ಕರಿ, ಶುದ್ಧ ಎಥೆನಾಲ್ ಅನ್ನು ಇಂಧನವಾಗಿ ಬಳಸುವುದನ್ನು ಕಾನೂನುಬದ್ಧಗೊಳಿಸುವ ನಿಯಂತ್ರಕ ಪ್ರಕ್ರಿಯೆಯು ಪೂರ್ಣಗೊಂಡಿದೆ ಎಂದು ಹೇಳಿದರು. "ನಿನ್ನೆ ರಾತ್ರಿ 8 ಗಂಟೆಗೆ, 100 ಪ್ರತಿಶತ ಎಥೆನಾಲ್ ಬಳಕೆಯನ್ನು ಕಾನೂನುಬದ್ಧವಾಗಿ ಅಧಿಕೃತಗೊಳಿಸಲು ನಿಯಮವನ್ನು ಅಂತಿಮಗೊಳಿಸುವ ಕಡತಕ್ಕೆ ನಾನು ಸಹಿ ಹಾಕಿದ್ದೇನೆ" ಎಂದು ಅವರು ಹೇಳಿದರು. ಪೆಟ್ರೋಲ್ಗೆ ಸುಸ್ಥಿರ ಪರ್ಯಾಯವಾಗಿ ಎಥೆನಾಲ್ನ ಸಾಮರ್ಥ್ಯವನ್ನು ಎತ್ತಿ ತೋರಿಸಿದ ಸಚಿವರು, ಈ ಉಪಕ್ರಮವು ಭಾರತದ ಇಂಧನ ಆಮದು ಹೊರೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಮತ್ತು ಶುದ್ಧ ಇಂಧನ ಪರ್ಯಾಯಗಳನ್ನು ಉತ್ತೇಜಿಸುತ್ತದೆ ಎಂದು ಹೇಳಿದರು. ಪ್ರಸ್ತಾವನೆಯ ಆರಂಭಿಕ ದಿನಗಳನ್ನು ನೆನಪಿಸಿಕೊಂಡ ಗಡ್ಕರಿ, ಈ ಪರಿಕಲ್ಪನೆಯು ಆರಂಭದಲ್ಲಿ ಸಂದೇಹ ಮತ್ತು



ಟೀಕೆಗೆ ಗುರಿಯಾಯಿತು ಎಂದು ಹೇಳಿದರು. "ನಾನು ಈ ದೃಷ್ಟಿಕೋನದ ಬಗ್ಗೆ ಮೊದಲು ಮಾತನಾಡಿದಾಗ, ಜನರು ಅದನ್ನು ನೋಡಿ ನಕ್ಕರು. ಕೆಲವರು ಈ ಕಲ್ಪನೆಯನ್ನು ಟೀಕಿಸಿದರು," ಎಂದು ಅವರು ಹೇಳಿದರು.

ಮುಂದಿನ ವಾರಗಳಲ್ಲಿ 100 ಪ್ರತಿಶತ ಎಥೆನಾಲ್ ಇಂಧನಕ್ಕೆ ಹೊಂದಿಕೆಯಾಗುವ ವಾಹನಗಳನ್ನು ಹೊರತರಲು ಪ್ರಮುಖ ಆಟೋಮೊಬೈಲ್ ತಯಾರಕರು ತಯಾರಿ ನಡೆಸುತ್ತಿದ್ದಾರೆ ಎಂದು ಸಚಿವರು ಹೇಳಿದರು. ಟೊಯೋಟಾ, ಸುಜುಕಿ, ಎಂಜಿ ಮತ್ತು ಹುಂಡೈ ಸೇರಿದಂತೆ ಕಂಪನಿಗಳು ಮುಂದಿನ ಒಂದೂವರೆ ತಿಂಗಳೊಳಗೆ ಎಥೆನಾಲ್-ಹೊಂದಾಣಿಕೆಯ ವಾಹನಗಳನ್ನು ಪರಿಚಯಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು. ಸರ್ಕಾರವು ಎಥೆನಾಲ್ ಮಿಶ್ರಣದಲ್ಲಿ ಕಾರ್ಯನಿರ್ವಹಿಸಲು ವಿನ್ಯಾಸಗೊಳಿಸಲಾದ ಫ್ಲೆಕ್ಸ್-ಇಂಧನ ವಾಹನಗಳಿಗೆ E85 ಇಂಧನವನ್ನು ಪರಿಚಯಿಸಿದ ಕೆಲವು ದಿನಗಳ ನಂತರ ಈ ಘೋಷಣೆ ಬಂದಿದೆ. ಏತನ್ಮಧ್ಯೆ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಭಾರತವು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ತನ್ನ ಎಥೆನಾಲ್ ಮಿಶ್ರಣ ಗುರಿಗಳನ್ನು ಮೀರಿದೆ ಎಂದು ಹೇಳಿದರು. ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣವು 2014 ರಲ್ಲಿ ಶೇ. 1.5 ರಿಂದ ನವೆಂಬರ್ 2022 ರ ವೇಳೆಗೆ ಶೇ.10ಕ್ಕೆ ಏರಿದೆ ಎಂದು ಅವರು ಹೇಳಿದರು. ಶೇ. 20 ಮಿಶ್ರಣವನ್ನು ಸಾಧಿಸುವ ಗುರಿಯನ್ನು ಮೂಲತಃ 2030ಕ್ಕೆ ನಿಗದಿಪಡಿಸಲಾಗಿದ್ದರೂ, ಅದನ್ನು 2024 ರಲ್ಲಿಯೇ ಸಾಧಿಸಲಾಗಿದೆ.

ಎಥೆನಾಲ್ ಅಳವಡಿಕೆಯನ್ನು ಮತ್ತಷ್ಟು ವಿಸ್ತರಿಸಲು ಆಟೋಮೊಬೈಲ್ ಉದ್ಯಮ ಸಂಸ್ಥೆ SIAM ಮತ್ತು ಇತರ ಸಂಸ್ಥೆಗಳು ಸೇರಿದಂತೆ ಉದ್ಯಮದ ಪಾಲುದಾರರೊಂದಿಗೆ ಚರ್ಚೆಗಳು ನಡೆಯುತ್ತಿವೆ ಎಂದು ಪುರಿ ಹೇಳಿದರು. "ಪ್ರಸ್ತುತ, ಉದ್ಯಮದೊಂದಿಗೆ ವ್ಯಾಪಕ ಸಮಾಲೋಚನೆಗಳನ್ನು ನಡೆಸಲಾಗುತ್ತಿದೆ. ಇ85 ಇಂಧನವನ್ನು ಈಗಾಗಲೇ ಪರಿಚಯಿಸಲಾಗಿದೆ, ಆದರೆ ಇದು ಇ85-ಹೊಂದಾಣಿಕೆಯ ಫ್ಲೆಕ್ಸ್-ಇಂಧನ ವಾಹನಗಳಿಗೆ ಮಾತ್ರ" ಎಂದು ಅವರು ಹೇಳಿದರು.

# ಅಯೋಧ್ಯೆ ರಾಮಮಂದಿರ ಸಿಬ್ಬಂದಿ ಮನೆಯಲ್ಲಿ 10 ಲಕ್ಷ ರೂ. ಪತ್ತೆ

**ಲಖನೌ, ಜೂ.14:** ಅಯೋಧ್ಯೆಯ ರಾಮಮಂದಿರ ದೇಣಿಗೆ ವಿವಾದ ಇನ್ನಷ್ಟು ತೀವ್ರಗೊಂಡಿದೆ. ರಾಮಮಂದಿರ ನೌಕರನ ಮನೆಯಲ್ಲಿ 10 ಲಕ್ಷ ನಗದು ಪತ್ತೆಯಾಗಿದೆ.

ರಾಮಮಂದಿರದ ದೇಣಿಗೆ ನಿಧಿಯಿಂದ ಸುಮಾರು 7 ಕೋಟಿ ರೂಪಾಯಿ ದುರುಪಯೋಗಪಡಿಸಿಕೊಂಡ ಆರೋಪವು ದೊಡ್ಡ ವಿವಾದಕ್ಕೆ ಕಾರಣವಾಗಿದ್ದು, ಅಯೋಧ್ಯೆಯ ರುಡೌಲಿ ಪ್ರದೇಶದ ದೇವಾಲಯದ ಉದ್ಯೋಗಿಯೊಬ್ಬರ ನಿವಾಸದಿಂದ ಪೊಲೀಸರು 10 ಲಕ್ಷದಿಂದ 12 ಲಕ್ಷ ರೂಪಾಯಿ ವರೆಗಿನ ಹಣವನ್ನು ವಶಪಡಿಸಿಕೊಂಡಿದ್ದಾರೆ.

ಐದು ದಿನಗಳಲ್ಲಿ ಎರಡನೇ ಬಾರಿಗೆ ಅಯೋಧ್ಯೆಗೆ ಆಗಮಿಸಿದ ರಾಮಮಂದಿರ ನಿರ್ಮಾಣ ಸಮಿತಿ ಅಧ್ಯಕ್ಷ ನೃಪೇಂದ್ರ ಮಿಶ್ರಾ, ಈ ವಿಷಯದಿಂದ ದೂರ ಉಳಿದಿದ್ದಾರೆ. ನಿರ್ಮಾಣ ಕಾರ್ಯದ ಮೇಲ್ವಿಚಾರಣೆಗೆ ಮಾತ್ರ ನಾನು ಜವಾಬ್ದಾರನಾಗಿದ್ದೇನೆ ಎಂದು ಹೇಳಿದ್ದಾರೆ.

ಹಣವನ್ನು ವಶಪಡಿಸಿಕೊಳ್ಳಲು ಅಯೋಧ್ಯಾ ಪೊಲೀಸರು, ಮೀನಾಪುರ್ ಠಾಕೂರನ್ ಫಗೌಲಿ ಗ್ರಾಮದಲ್ಲಿರುವ ಲವಕುಶ್ ಮಿಶ್ರಾ ಅವರ ನಿವಾಸದ ಮೇಲೆ ಶ್ರೀ ರಾಮಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಚಂಪತ್‌ರಾಯ್ ಅವರ ಸಮ್ಮುಖದಲ್ಲಿ ದಾಳಿ ನಡೆಸಿದ್ದಾರೆ. ದೇವಾಲಯ ಆಡಳಿತದಲ್ಲಿ ಕೆಲಸ ಪಡೆಯುವ ಮೊದಲು ಮಿಶ್ರಾ ಕಾರ್ ಮೆಕ್ಯಾನಿಕ್ ಆಗಿ ಕೆಲಸ ಮಾಡುತ್ತಿದ್ದ. ನಂತರ ಆತನ ಆರ್ಥಿಕ ಸ್ಥಿತಿ ಅಲ್ಪಾವಧಿಯಲ್ಲಿಯೇ ತೀವ್ರವಾಗಿ ಸುಧಾರಿಸಿದೆ ಎಂದು ಸ್ಥಳೀಯ ಮೂಲಗಳು ತಿಳಿಸಿವೆ.

ಕಳ್ಳತನದ ಆರೋಪಗಳ ಬಗ್ಗೆ ಎಸ್‌ಐಟಿ ತನಿಖೆಗೆ ಆದೇಶಿಸುವಂತೆ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಒತ್ತಾಯಿಸಿದೆ ಎಂದು ಮೂಲಗಳು ತಿಳಿಸಿವೆ.

ದೇವಾಲಯದ ದೇಣಿಗೆಗಳನ್ನು ಎಣಿಸುವ ಜವಾಬ್ದಾರಿ ಹೊತ್ತಿರುವ ಇಬ್ಬರು ಉದ್ಯೋಗಿಗಳನ್ನು ಟ್ರಸ್ಟ್ ಬಂಧಿಸಿದೆ. ಶಂಕೆಯ ಮೇಲೆ ಅವರ ವಿಚಾರಣೆ ಮುಂದುವರೆದಿದೆ. ದೇವಾಲಯದಲ್ಲಿ ಸ್ವೀಕರಿಸಿದ ಕಾಣಿಕೆಗಳನ್ನು ಎಣಿಸುವ ಜವಾಬ್ದಾರಿಯನ್ನು ಇಬ್ಬರೂ ನೌಕರರಿಗೆ ವಹಿಸಲಾಗಿತ್ತು. ಅವರು ಮಾಸಿಕ 18,000 ರಿಂದ 20,000 ರೂ.ಗಳ ವೇತನ ಪಡೆಯುತ್ತಿದ್ದರು.

ಇಬ್ಬರಲ್ಲಿ ಒಬ್ಬರು ಇತ್ತೀಚೆಗೆ 1.5 ಕೋಟಿ ರೂ. ಮೌಲ್ಯದ ಭೂಮಿಯನ್ನು ಖರೀದಿಸಿದ್ದರೆ, ಇನ್ನೊಬ್ಬರು 40 ಲಕ್ಷ ರೂ. ಮೌಲ್ಯದ ಪ್ಲಾಟ್ ಖರೀದಿಸಿದ್ದಾರೆ. ಎಸ್ಪಿ ಸರ್ಕಾರದಲ್ಲಿ ಸಚಿವರಾಗಿದ್ದ ಪವನ್ ಪಾಂಡೆ ಜೂನ್ 7 ರಂದು ರಾಮಮಂದಿರದಿಂದ 5 ಕೋಟಿಯಿಂದ 7.5 ಕೋಟಿ ರೂ.ವರೆಗೆ ವಂಚನೆ ನಡೆದಿದೆ ಎಂದು ಆರೋಪಿಸಿದ್ದರು.

# ಗೋ ಸಾಗಣೆ ವ್ಯಕ್ತಿಯ ಹತ್ಯೆ ಪ್ರಕರಣ ಏಳು ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ



**ನರ್ಮದಾಪುರಂ,ಜೂ.14:** 2022ರಲ್ಲಿ ಮಧ್ಯಪ್ರದೇಶದ ನರ್ಮದಾಪುರಂ ಜಿಲ್ಲೆಯಲ್ಲಿ ಗೋ ಸಾಗಾಟ ಮಾಡುತ್ತಿದ್ದ ವ್ಯಕ್ತಿಯನ್ನು ಥಳಿಸಿ ಹತ್ಯೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಏಳು ಅಪರಾಧಿಗಳಿಗೆ ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ನರ್ಮದಾಪುರಂ ಜಿಲ್ಲೆಯ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶರು, ದೀಪಕ್ ಅಲಿಯಾಸ್ ಬಾಬಾ ಕೆವಾತ್, ಅಜಯ್ ಅಲಿಯಾಸ್ ಅಜ್ಜು ರಾಥೋಡ್, ಪ್ರಕಾಶ್ ಕೌಶಲ್, ಪವನ್ ಬಾಥಮ್, ಅಮರ್ ಅಲಿಯಾಸ್ ಭೋಲಾ ಬಾಥಮ್, ಕನ್ಹಯ್ಯ ಬಾಥಮ್ ಹಾಗೂ ಬಲ್ಲು ಅಲಿಯಾಸ್ ಅನುಜ್ ರಘುವಂಶಿಯನ್ನು ಭಾರತೀಯ ದಂಡ ಸಂಹಿತೆಯ ಸೆಕ್ಷನ್ 148, 307/149 ಮತ್ತು 302/149ರ ಅಡಿಯಲ್ಲಿ ತಪ್ಪಿತಸ್ಥರು ಎಂದು ಘೋಷಿಸಿದರು.

ಪ್ರಾಸಿಕ್ಯೂಷನ್ ಪ್ರಕಾರ, 2022ರ ಆಗಸ್ಟ್ 2-3ರ ರಾತ್ರಿ ಟ್ರಕ್ ಚಾಲಕ ಶೇಖ್ ಲಾಲಾ, ನಝೀರ್ ಅಹ್ಮದ್ ಹಾಗೂ ಶೇಖ್ ಮುಸ್ತಾಕ್ ಅವರೊಂದಿಗೆ ನಂದರವಾಡಾದಿಂದ ಮಹಾರಾಷ್ಟ್ರದ ಕಡೆಗೆ ಗೋವುಗಳನ್ನು ಸಾಗಿಸುತ್ತಿದ್ದರು. ಈ ವೇಳೆ ಸಿಯೋನಿ ಮಾಲ್ವಾ ವ್ಯಾಪ್ತಿಯ ಬರಾಖಾದ್ ಗ್ರಾಮದ ಬಳಿ ಗ್ರಾಮಸ್ಥರ ಗುಂಪೊಂದು ಟ್ರಕ್ ತಡೆದು, ಕೋಲುಗಳು ಹಾಗೂ ಲಾಠಿಗಳಿಂದ ಹಲ್ಲೆ ನಡೆಸಿತ್ತು. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡ ನಝೀರ್ ಅಹ್ಮದ್ ಮೃತಪಟ್ಟಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯವು, ಆರೋಪಿಗಳು ಲಾಠಿ ಮತ್ತು ಕೋಲುಗಳನ್ನು ಹಿಡಿದು ಗುಂಪಾಗಿ ಸೇರಿ ನಝೀರ್ ಅಹ್ಮದ್ ಹಾಗೂ ಇತರರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಹೇಳಿದೆ.

ಮರಣೋತ್ತರ ಪರೀಕ್ಷಾ ವರದಿಯಲ್ಲಿ ಆರೋಪಿಗಳು ನಝೀರ್ ಅಹ್ಮದ್ ಹಾಗೂ ಇತರರ ಮೇಲೆ ಕೋಲು ಮತ್ತು ಲಾಠಿಗಳಿಂದ ಹಲ್ಲೆ ನಡೆಸಿರುವುದು ಸಾಬೀತಾಗಿದೆ ಎಂದು ನ್ಯಾಯಾಲಯ ಹೇಳಿದೆ. ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡ ನಝೀರ್ ಅಹ್ಮದ್ ಬಳಿಕ ಮೃತಪಟ್ಟಿದ್ದರು ಎಂದು ನ್ಯಾಯಾಲಯ ಉಲ್ಲೇಖಿಸಿದೆ. ಪ್ರಕರಣವು ಮರಣದಂಡನೆ ವಿಧಿಸಬೇಕಾದ ಅಪರೂಪದ ಪ್ರಕರಣವಲ್ಲ ಎಂದು ಹೇಳಿದ ನ್ಯಾಯಾಲಯ, ಏಳು ಅಪರಾಧಿಗಳಿಗೂ ಜೀವಾವಧಿ ಶಿಕ್ಷೆ ವಿಧಿಸಿದೆ. ಜೊತೆಗೆ ಕೊಲೆ ಯತ್ನ ಪ್ರಕರಣದಲ್ಲಿ 10 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಮತ್ತು ಗಲಭೆ ಆರೋಪಕ್ಕೆ ಮೂರು ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ದಂಡ ವಿಧಿಸಿದೆ.

# ಹರಿಯಾಣದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಎಸ್‌ಐಆರ್ ಇಂದು ಆರಂಭ: ನಾಗರಿಕರು ಎಣಿಕೆ ನಮೂನೆ ಸಲ್ಲಿಕೆಗೆ ಸೂಚನೆ

**ಪಂಚಕುಲ, ಜೂ.14:** ಹರಿಯಾಣವು ಜೂನ್ 15 ರಿಂದ ರಾಜ್ಯಾದ್ಯಂತ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಅನ್ನು ಪ್ರಾರಂಭಿಸಲಿದ್ದು, ಭವಿಷ್ಯದ ಚುನಾವಣೆಗಳಿಗೆ ಮುಂಚಿತವಾಗಿ ಮತದಾರರ ಪಟ್ಟಿಗಳ ನಿಖರತೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗವು ಸಮಗ್ರ ಕಾರ್ಯವನ್ನು ಪ್ರಾರಂಭಿಸಲಿದೆ. ಹರಿಯಾಣದ ಮುಖ್ಯ ಚುನಾವಣಾ ಅಧಿಕಾರಿ ಎ ಶ್ರೀನಿವಾಸ್ ರಾಜ್ಯವ್ಯಾಪಿ ಪರಿಷ್ಕರಣೆ ಪ್ರಕ್ರಿಯೆಗೆ ಸಿದ್ಧತೆ ವಿವರಿಸಿದರು ಮತ್ತು ನಾಗರಿಕರು ಮತ್ತು ರಾಜಕೀಯ ಪಕ್ಷಗಳು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದರು. ಪರಿಷ್ಕರಣೆ ಪ್ರಕ್ರಿಯೆಯ ಭಾಗವಾಗಿ ಪ್ರತಿಯೊಬ್ಬ ಅರ್ಹ ಮತದಾರರು ಎಣಿಕೆ ನಮೂನೆಯನ್ನು ಭರ್ತಿ ಮಾಡಿ ಹಿಂದಿರುಗಿಸಬೇಕಾಗುತ್ತದೆ ಎಂದು ಶ್ರೀನಿವಾಸ್ ಹೇಳಿದರು. ಈ ಪ್ರಕ್ರಿಯೆಯನ್ನು ಸುಗಮಗೊಳಿಸಲು, ಬೂತ್‌ಮಟ್ಟದ ಅಧಿಕಾರಿಗಳು ರಾಜ್ಯಾದ್ಯಂತ ಮನೆ-ಮನೆಗೆ ಭೇಟಿ ನೀಡುತ್ತಾರೆ ಮತ್ತು ಅರ್ಜಿಯನ್ನು ಮನೆಗಳಿಗೆ ವಿತರಿಸುತ್ತಾರೆ.



ಕುಟುಂಬದ ಸದಸ್ಯರು ಅಧ್ಯಯನ, ಉದ್ಯೋಗ ಅಥವಾ ವ್ಯವಹಾರ ಉದ್ದೇಶಗಳಿಗಾಗಿ ಬೇರೆಡೆ ವಾಸಿಸುತ್ತಿದ್ದರೆ, ಮನೆಯ ಯಾವುದೇ ಒಬ್ಬ ಸದಸ್ಯರು ತಮ್ಮ ಪರವಾಗಿ ಎಣಿಕೆ ನಮೂನೆಗಳನ್ನು ಸಲ್ಲಿಸಬಹುದು ಎಂದು ಅವರು ಸ್ಪಷ್ಟಪಡಿಸಿದರು. ಬಿಎಲ್‌ಒ ಭೇಟಿಯ ಸಮಯದಲ್ಲಿ ಯಾವುದೇ ಕುಟುಂಬ ಸದಸ್ಯರು ಲಭ್ಯವಿಲ್ಲದ ಸಂದರ್ಭಗಳಲ್ಲಿ, ಫಾರ್ಮ್ ಅನ್ನು ಮನೆಯಲ್ಲಿ ಬಿಡಲಾಗುತ್ತದೆ ಮತ್ತು ಆವರಣದಲ್ಲಿ ನೋಟೀಸ್ ಅಂಟಿಸಲಾಗುತ್ತದೆ. ಬಿಎಲ್‌ಓಗಳು ಪ್ರತಿ ಮನೆಗೆ ಮೂರು ಬಾರಿ ಭೇಟಿ ನೀಡಿ ಪೂರ್ಣಗೊಂಡ ಅರ್ಜಿಗಳನ್ನು ಸಂಗ್ರಹಿಸುತ್ತಾರೆ.

ಪರಿಷ್ಕರಣೆ ಕಾರ್ಯದ ಸಮಯದಲ್ಲಿ ಮತದಾರರಿಗೆ ಸಹಾಯ ಮಾಡಲು, ಜಿಲ್ಲಾ ಮತ್ತು ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗುತ್ತದೆ. ಮತದಾರರ ನೋಂದಣಿ, ನಮೂದುಗಳ ತಿದ್ದುಪಡಿ ಮತ್ತು ಅರ್ಜಿ ಸಲ್ಲಿಕೆಗೆ ಸಂಬಂಧಿಸಿದಂತೆ ಚುನಾವಣಾ ಅಧಿಕಾರಿಗಳು ಮಾರ್ಗದರ್ಶನ ನೀಡುತ್ತಾರೆ.

ಪರಿಷ್ಕರಣೆ ಪ್ರಕ್ರಿಯೆಯ ಸಮಯವನ್ನು ವಿವರಿಸಿದ ಶ್ರೀನಿವಾಸ್, ಕರಡು ಮತದಾರರ ಪಟ್ಟಿಯನ್ನು ಜುಲೈ 21 ರಂದು ಪ್ರಕಟಿಸಲಾಗುವುದು ಎಂದು ಹೇಳಿದರು. ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಜುಲೈ 21 ಮತ್ತು ಆಗಸ್ಟ್ 20 ರ ನಡುವೆ ಸಲ್ಲಿಸಬಹುದು, ಈ ಸಮಯದಲ್ಲಿ ಎಲ್ಲಾ ಅರ್ಜಿಗಳು ಮತ್ತು ಆಕ್ಷೇಪಣೆಗಳನ್ನು ಚುನಾವಣಾ ಅಧಿಕಾರಿಗಳು ಪರಿಶೀಲಿಸುತ್ತಾರೆ ಮತ್ತು ವಿಲೇವಾರಿ ಮಾಡುತ್ತಾರೆ. ಅಂತಿಮ ಮತದಾರರ ಪಟ್ಟಿಯನ್ನು ಸೆಪ್ಟೆಂಬರ್ 22 ರಂದು ಪ್ರಕಟಿಸಲಾಗುವುದು. ಫತೇಹಾಬಾದ್ ಜಿಲ್ಲೆ ಹರಿಯಾಣದಲ್ಲಿ ಇದುವರೆಗೆ ಅತಿಹೆಚ್ಚು ಮತದಾರರ ಮ್ಯಾಪಿಂಗ್ ಶೇಕಡಾವಾರು ಪ್ರಮಾಣವನ್ನು ದಾಖಲಿಸಿದೆ, ಶೇ.87.8 ರಷ್ಟು ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದು ಸಿಇಒ ಬಹಿರಂಗಪಡಿಸಿದರು. ಮುಕ್ತ, ನ್ಯಾಯಯುತ ಮತ್ತು ಪಾರದರ್ಶಕ ಚುನಾವಣಾ ಪ್ರಕ್ರಿಯೆಗಳನ್ನು ಕಾಪಾಡಿಕೊಳ್ಳಲು ಚುನಾವಣಾ ಆಯೋಗದ ಬದ್ಧತೆಯನ್ನು ಪುನರುಚ್ಚರಿಸಿದ ಶ್ರೀನಿವಾಸ್, ನಾಗರಿಕರು ಬಿಎಲ್‌ಓಗಳೊಂದಿಗೆ ಸಹಕರಿಸಬೇಕು, ಅಗತ್ಯವಿರುವ ಔಪಚಾರಿಕತೆಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಬೇಕು ಮತ್ತು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳು ಸರಿಯಾಗಿ ಪ್ರತಿಫಲಿಸುವುದನ್ನು ಖಚಿತ ಪಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

# ಭಾರತದ ಬಾಹ್ಯಾಕಾಶ ಆರ್ಥಿಕತೆಯು 10 ವರ್ಷದಲ್ಲಿ 45 ಶತಕೋಟಿ ಡಾಲರ್ ತಲುಪುವ ನಿರೀಕ್ಷೆ: ಜಿತೇಂದ್ರ ಸಿಂಗ್



**ನವದೆಹಲಿ, ಜೂ.14:** ಭಾರತದ ಬಾಹ್ಯಾಕಾಶ ಆರ್ಥಿಕತೆಯು ಮುಂದಿನ ದಶಕದಲ್ಲಿ ಐದು ಪಟ್ಟು ವಿಸ್ತರಿಸಬಹುದು, ಪ್ರಸ್ತುತ 8-9 ಶತಕೋಟಿ ಡಾಲರ್‌ನಿಂದ ಸುಮಾರು 40-45 ಶತಕೋಟಿ ಡಾಲರ್ ಗೆ ಬೆಳೆಯಬಹುದು ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ಭಾನುವಾರ ಹೇಳಿದ್ದಾರೆ, ಈ ನಿರೀಕ್ಷಿತ ಬೆಳವಣಿಗೆಗೆ ನೀತಿ ಸುಧಾರಣೆಗಳು, ಹೆಚ್ಚಿದ ಖಾಸಗಿ ವಲಯದ ಭಾಗವಹಿಸುವಿಕೆ ಮತ್ತು ಬೆಳೆಯುತ್ತಿರುವ ನವೋದ್ಯಮ ಪರಿಸರ ವ್ಯವಸ್ಥೆಯೇ ಕಾರಣ ಎಂದು ಹೇಳಿದ್ದಾರೆ. "ವಿಕ್ಷಿತ್ ಭಾರತ್ 2047 ಗಾಗಿ ನಾವೀನ್ಯತೆ ಮತ್ತು ಉದ್ಯಮಶೀಲತೆ ಚಾಲಿತ ಬೆಳವಣಿಗೆ" ಎಂಬ ವಿಷಯದ RISE ಸಮಾವೇಶದಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಿಂಗ್, ದೇಶದ ಬಾಹ್ಯಾಕಾಶ ವಲಯವು ಇತ್ತೀಚಿನ ವರ್ಷಗಳಲ್ಲಿ ಗಮನಾರ್ಹ ಬದಲಾವಣೆಗಳಿಗೆ ಒಳಗಾಗಿದೆ, ಖಾಸಗಿ ಕಂಪನಿಗಳು ಮತ್ತು ನವೋದ್ಯಮಗಳು ಹೆಚ್ಚು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಹೇಳಿದರು. "ಭಾರತದ ಬಾಹ್ಯಾಕಾಶ ಆರ್ಥಿಕತೆಯು ಇಂದು 8-9 ಶತಕೋಟಿ ಡಾಲರ್ ನಿಂದ ಮುಂದಿನ ದಶಕದಲ್ಲಿ 40-45 ಬಿಲಿಯನ್ ಡಾಲರ್ ಗೆ ಬೆಳೆಯುವ ನಿರೀಕ್ಷೆಯಿದೆ" ಎಂದು ಸಚಿವರು ಹೇಳಿದರು. ಭಾರತದಲ್ಲಿ 400 ಕ್ಕೂ ಹೆಚ್ಚು ಬಾಹ್ಯಾಕಾಶ ನವೋದ್ಯಮಗಳಿವೆ, ಕೆಲವು ವರ್ಷಗಳ ಹಿಂದೆ ಕೆಲವೇ ಕೆಲವು ಉದ್ಯಮಗಳಿದ್ದವು ಎಂದು ಅವರು ಹೇಳಿದರು. ಸುಧಾರಣೆಗಳ ನಂತರ ಖಾಸಗಿ ಭಾಗವಹಿಸುವಿಕೆಗೆ ವಲಯವನ್ನು ತೆರೆಯಲಾಯಿತು ಎಂದು ಸಿಂಗ್ ಹೇಳಿದರು. ಪರಿಸರ ವ್ಯವಸ್ಥೆಯ ತ್ವರಿತ ಬೆಳವಣಿಗೆಯು ದೇಶದ ಬಾಹ್ಯಾಕಾಶ ಉದ್ಯಮದ ಸಾಮರ್ಥ್ಯವನ್ನು ಪ್ರದರ್ಶಿಸುತ್ತದೆ.

# ಗೋವಿಂದಪುರಿ ಅಗ್ನಿದುರಂತ ನಾಲ್ವರು ಆರೋಪಿಗಳ ಬಂಧನ

**ನವದೆಹಲಿ, ಜೂ. 14:** ದಕ್ಷಿಣ ದೆಹಲಿಯ ತುಘಲಕಾಬಾದ್ ಬಡಾವಣೆಯಲ್ಲಿ ಆಕಸ್ಮಿಕವಾಗಿ ಸಂಭವಿಸಿದ ಅಗ್ನಿ ದುರಂತವು ನಾಟಕೀಯ ತಿರುವು ಪಡೆದುಕೊಂಡಿದೆ, ದೆಹಲಿ ಪೊಲೀಸರು ಮೂರು ಜೀವಗಳನ್ನು ಬಲಿ ತೆಗೆದುಕೊಂಡ ಬೆಂಕಿಯ ಹಿಂದಿನ ಕ್ರಿಮಿನಲ್ ಪಿತೂರಿಯನ್ನು ಬಯಲು ಮಾಡಿದ್ದಾರೆ. ಜೂನ್ 12 ರಂದು ಬೆಳಗಿನಜಾವ ಕಟ್ಟಡ ಸಂಖ್ಯೆ

ತುಘಲಕಾಬಾದ್ ಬಡಾವಣೆಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ನೆಲ ಮಹಡಿಯಿಂದ ಐದನೇ ಮಹಡಿಯವರೆಗಿನ ರಚನೆಯನ್ನು ಆವರಿಸಿದೆ. ಎಂಟು ಜನರಿಗೆ ಗಾಯಗಳಾಗಿದ್ದು, ಅವರನ್ನು ಂಋಖಋಒಋ ಟ್ರಾಮಾ ಸೆಂಟರ್ ಮತ್ತು ಸಫ್ದರ್ಜಂಗ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಮೂವರು ಬಲಿಪಶುಗಳು - ಪಂಕಜ್ ಪಾಂಡೆ, ಸುಶೀಲಾ ದೇವಿ ಮತ್ತು ಸೋನಿಯಾ ಕುಮಾರಿ - ನಂತರ ಸಾವನ್ನಪ್ಪಿದ್ದಾರೆ. ಪೊಲೀಸರು ಆರಂಭದಲ್ಲಿ ಭಾರತೀಯ ನ್ಯಾಯಸಂಹಿತೆ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದರು, ಘಟನೆಯನ್ನು ನಿರ್ಲಕ್ಷ್ಯದ ಪ್ರಕರಣವೆಂದು ಪರಿಗಣಿಸಿದ್ದರು. ಆದಾಗ್ಯೂ, ತನಿಖೆಯ ಸಮಯದಲ್ಲಿ, ಬೆಂಕಿ ಸ್ಫೋಟಗೊಳ್ಳುವ ಸ್ವಲ್ಪ ಸಮಯದ ಮೊದಲು ಮಹಿಳೆಯೊಬ್ಬರು ಆವರಣಕ್ಕೆ ಪ್ರವೇಶಿಸಿರುವುದನ್ನು ಸಿಸಿಟಿವಿ ದೃಶ್ಯಗಳು ಬಹಿರಂಗಪಡಿಸಿವೆ, ಇದು ತನಿಖಾಧಿಕಾರಿಗಳು ದುಷ್ಕೃತ್ಯವನ್ನು ಶಂಕಿಸಲು ಕಾರಣವಾಯಿತು. ಹೆಚ್ಚಿನ ತನಿಖೆಯ ಪರಿಣಾಮವಾಗಿ ಗೋವಿಂದಪುರಿಯ ನವಜೀವನ ಶಿಬಿರದ 17 ವರ್ಷದ ಬಾಲಕಿಯನ್ನು ಗುರುತಿಸಿ ಬಂಧಿಸಲಾಯಿತು. ವಿಚಾರಣೆಯ ಸಮಯದಲ್ಲಿ, ಗೋವಿಂದ್ ಪುರಿಯ ಗಿರಿನಗರದ ನಿವಾಸಿ ಸರಿತಾ



(27) ಹಣಕಾಸಿನ ವಿವಾದದ ಮೇಲೆ ತನಗೆ ಪೆಟ್ರೋಲ್ ಮತ್ತು ಬೆಂಕಿಪೊಟ್ಟಣ ಒದಗಿಸಿ ಕಟ್ಟಡದ ಐದನೇ ಮಹಡಿಯ ನಿವಾಸಿ ದೀಪಕ್ ಅವರ ಸ್ಕೂಟರ್‌ಗೆ ಬೆಂಕಿ ಹಚ್ಚಲು ಪ್ರೇರೇಪಿಸಿದ್ದಾಳೆ ಎಂದು ಆಕೆ ಬಹಿರಂಗಪಡಿಸಿದ್ದಾಳೆ. ಪೊಲೀಸರ ಪ್ರಕಾರ, ಗೋವಿಂದ್ ಪುರಿಯ ನವಜೀವನ ಶಿಬಿರದ ನಿರಂಜನ್ (33) ಮತ್ತು ಅವರ ಸಹೋದರ ರಾಜಕುಮಾರ್ (27) ಈ ಯೋಜನೆಯನ್ನು ರೂಪಿಸಿದ್ದಾರೆ ಎಂದು ಸರಿತಾ ಬಹಿರಂಗಪಡಿಸಿದ್ದಾರೆ, ಇಬ್ಬರೂ ವೈಯಕ್ತಿಕ ದ್ವೇಷವನ್ನು ಬಗೆಹರಿಸಲು ಪ್ರಯತ್ನಿಸಿದ್ದಾರೆ ಎನ್ನಲಾಗಿದೆ. ಅಂತಿಮವಾಗಿ ಇಡೀ ಕಟ್ಟಡವನ್ನು ಆವರಿಸಿದ ಬೆಂಕಿಯು ಉದ್ದೇಶಪೂರ್ವಕವಾಗಿ ಮಾಡಿದ ಬೆಂಕಿಯ ಪರಿಣಾಮವಾಗಿದೆ ಎಂದು ದೆಹಲಿ ಪೊಲೀಸರು ತಿಳಿಸಿದ್ದಾರೆ. ಅಪ್ರಾಪ್ತ ವಯಸ್ಸಿನ ಮತ್ತು ಮೂವರು ಆರೋಪಿಗಳನ್ನು ಬಂಧಿಸಲಾಗಿದೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

# ಬೆಂಗಳೂರು ಪೊಲೀಸರು ರಾಜಸ್ಥಾನದಲ್ಲಿ ಟ್ರ್ಯಾಪ್ ಎರಡು ಲಕ್ಷಕ್ಕೆ ಬೇಡಿಕೆ ಇಟ್ಟು ಆರೋಪಿ ಲಾಕ್

**ಜೈಪುರ,ಜೂ.14:** ವರದಕ್ಷಿಣೆ ಪ್ರಕರಣದಲ್ಲಿ ಆರೋಪಿ ಬಂಧನಕ್ಕೆ ತೆರಳಿದ್ದ ಬೆಂಗಳೂರಿನ ಎಚ್‌ಎಎಲ್ ಪೊಲೀಸರು ಜೈಪುರದಲ್ಲಿ ಟ್ರ್ಯಾಪ್ ಆಗಿರುವ ಘಟನೆ ನಡೆದಿದೆ.

ಆರೋಪಿಯ ಬಂಧನಕ್ಕೆ ತೆರಳಿದ್ದ ಪೊಲೀಸರು, ಆತನ ಬಳಿ ಹಣಕ್ಕೆ ಬೇಡಿಕೆಯಿಟ್ಟು ರಾಜಸ್ಥಾನದ ಎಸಿಬಿ ಅಧಿಕಾರಿಗಳಿಗೆ ಲಾಕ್ ಆಗಿದ್ದಾರೆ. ಪಿಎಸ್‌ಐ ಅನಿತಾ, ಮುಖ್ಯಪೇದೆ ಉಳುವಪ್ಪ, ಪೇದೆ ಯತೀಶ್ ಟ್ರ್ಯಾಪ್ ಆದ ಪೊಲೀಸರು.

ವರದಕ್ಷಿಣೆ ಪ್ರಕರಣದ ತನಿಖೆ ಕೈಗೆತ್ತಿಕೊಂಡಿದ್ದ ಪೊಲೀಸರು ಶುಕ್ರವಾರ ಆರೋಪಿ ಬಂಧನಕ್ಕೆ ರಾಜಸ್ಥಾನದ ಜೈಪುರಕ್ಕೆ ತೆರಳಿದ್ದರು. ಈ ವೇಳೆ ಸಿಕ್ಕ ಆರೋಪಿ ಬಳಿ 2 ಲಕ್ಷ ಹಣಕ್ಕೆ ಬೇಡಿಕೆಯಿಟ್ಟಿದ್ದರು. ಆದ್ರೆ ಆರೋಪಿ ಸಾಧ್ಯವಾದಷ್ಟು ಹಣ ಕೊಡುವುದಾಗಿ ಹೇಳಿದ್ದ.

ಜೈಪುರದ ಗಂಗೌರ್‌ನ ಹೋಟೆಲ್‌ನಲ್ಲಿ 40,000 ರೂ. ಹಣ ಪಡೆಯುವಾಗ ಎಸಿಬಿ ಅಧಿಕಾರಿಗಳಿಗೆ ಲಾಕ್ ಆಗಿದ್ದಾರೆ. ಸದ್ಯ ಎಚ್‌ಎಎಲ್ ಪೊಲೀಸರನ್ನೇ ಬಂಧಿಸಿರುವ ಎಸಿಬಿ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ.

# ಧರ್ಮಸ್ಥಳಕ್ಕೆ ಆಯುಷ್ ಶೆಟ್ಟಿ ಭೇಟಿ



**ಮುಂಬಯಿ, ಜೂ.14:** ಭಾರತದ ಭರವಸೆಯ ಬ್ಯಾಡ್ಮಿಂಟನ್ ತಾರೆ, ಥಾಮಸ್ ಕಪ್ ವಿಜೇತ ಹಾಗೂ 2026ರ ಏಷ್ಯನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಬೆಳ್ಳಿ ಪದಕ ವಿಜೇತ ಆಯುಷ್ ಶೆಟ್ಟಿ ಅವರು ಕುಟುಂಬ ಸಮೇತ ಭಾನುವಾರ ಧರ್ಮಸ್ಥಳಕ್ಕೆ ಭೇಟಿ ನೀಡಿ ಧರ್ಮಾಧಿಕಾರಿ ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಆಶೀರ್ವಾದ ಪಡೆದರು.

ಬಳಿಕ ಅವರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ದೇಶದ ಕ್ರೀಡಾಕ್ಷೇತ್ರದಲ್ಲಿ ಕರ್ನಾಟಕದ ಕೀರ್ತಿಯನ್ನು ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿಸುತ್ತಿರುವ ಆಯುಷ್ ಶೆಟ್ಟಿ ಅವರ ಸಾಧನೆಯನ್ನು ಶ್ಲಾಘಿಸಿದ ಡಾ. ಡಿ. ವೀರೇಂದ್ರ ಹೆಗ್ಗಡೆಯವರು, ಮುಂದಿನ ದಿನಗಳಲ್ಲಿ ಇನ್ನಷ್ಟು ಯಶಸ್ಸು ಸಾಧಿಸಿ ದೇಶಕ್ಕೆ ಕೀರ್ತಿ ತರಲೆಂದು ಶುಭ ಹಾರೈಸಿದರು.

ಹೆಗ್ಗಡೆಯವರು ಆಯುಷ್ ಶೆಟ್ಟಿ ಅವರ ಸಾಧನೆಗೆ ಅಭಿನಂದಿಸಿ ಮುಂದೆ ಇನ್ನೂ ಹೆಚ್ಚಿನ ಯಶಸ್ಸು ಪಡೆಯುವಂತಾಗಲೆಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಹೆಗ್ಗಡೆಯವರ ಆಪ್ತ ಕಾರ್ಯದರ್ಶಿ ಎ.ವಿ. ಶೆಟ್ಟಿ ಹಾಗೂ ಉಜಿರೆಯ ಎಸ್.ಡಿ.ಎಂ. ಆಂಗ್ಲ ಮಾಧ್ಯಮ ಶಾಲೆಯ ದೈಹಿಕ ಶಿಕ್ಷಕ ಸಂತೋಷ್ ಹಾಜರಿದ್ದರು.

# ಶಾಸಕರ ಸಹಿ ನಕಲಿ ಪ್ರಕರಣ: ಸಿಐಡಿಯಿಂದ ಅಭಿಷೇಕ್ ಬ್ಯಾನರ್ಜಿ 8 ಗಂಟೆಗೂ ಹೆಚ್ಚು ಕಾಲ ವಿಚಾರಣೆ

**ಕೋಲ್ಕತ್ತಾ, ಜೂ.14:** ತೃಣಮೂಲ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರನ್ನು ಭಾನುವಾರ ಅಪರಾಧ ತನಿಖಾ ವಿಭಾಗದ (ಸಿಐಡಿ) ಅಧಿಕಾರಿಗಳು ಎಂಟೂವರೆ ಗಂಟೆಗಳ ಕಾಲ ವಿಚಾರಣೆ ನಡೆಸಿದರು. ಮ್ಯಾರಥಾನ್ ವಿಚಾರಣೆಯ ನಂತರ ಅವರು ರಾತ್ರಿ 8.20 ರ ಸುಮಾರಿಗೆ ಭವಾನಿ ಭವನದಲ್ಲಿರುವ ಸಿಐಡಿ ಪ್ರಧಾನ ಕಚೇರಿಯಿಂದ ಹೊರಬಂದರು. ಅದೇ ಪ್ರಕರಣದಲ್ಲಿ ಸಮನ್ಸ್ ಜಾರಿಯಾಗಿದ್ದ ಬೆಲಿಯಾಘಾಟ್ ಶಾಸಕ ಕುನಾಲ್ ಘೋಷ್ ಅವರನ್ನು ಪ್ರತ್ಯೇಕವಾಗಿ ವಿಚಾರಣೆಗೆ ಒಳಪಡಿಸಲಾಯಿತು ಮತ್ತು ನಂತರ ತನಿಖೆಯ ಸಮಯದಲ್ಲಿ ಬ್ಯಾನರ್ಜಿಯನ್ನು ಎದುರಿಸಲಾಯಿತು. ಭವಾನಿ ಭವನದಿಂದ ಹೊರಬಂದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಘೋಷ್, ತನಿಖೆಗೆ ಸಂಪೂರ್ಣವಾಗಿ ಸಹಕರಿಸಿದ್ದೇನೆ ಮತ್ತು ಬ್ಯಾನರ್ಜಿ ಸಮ್ಮುಖದಲ್ಲಿ ಸಿಐಡಿ ಅಧಿಕಾರಿಗಳು ತಮ್ಮನ್ನು ಪ್ರಶ್ನಿಸಿದ್ದಾರೆ ಎಂದು ದೃಢಪಡಿಸಿದರು. ಸುಮಾರು ನಾಲ್ಕು ಗಂಟೆಗಳ ವಿಚಾರಣೆಯ ನಂತರ ಅವರು ಸಿಐಡಿ ಕಚೇರಿಯಿಂದ ನಿರ್ಗಮಿಸಿದರು. ಬ್ಯಾನರ್ಜಿ ಮಧ್ಯಾಹ್ನ ಹಾಜರಾಗಲು ನಿಗದಿಪಡಿಸಿದ 17 ನಿಮಿಷಗಳ ಮೊದಲು ಬೆಳಿಗ್ಗೆ 11.43 ಕ್ಕೆ ಸಿಐಡಿ ಪ್ರಧಾನ ಕಚೇರಿಗೆ ಬಂದರು. ಸ್ವಾಗತ ಸಮಾರಂಭದಲ್ಲಿ ಔಪಚಾರಿಕತೆಗಳನ್ನು ಪೂರ್ಣಗೊಳಿಸಿ ಹಾಜರಾತಿ ನೋಂದಣಿಯಲ್ಲಿ ಸಹಿ ಮಾಡಿದ ನಂತರ, ಅವರು ವಿಚಾರಣೆಗಾಗಿ ಸಿಐಡಿ ಕಚೇರಿಗೆ ಪ್ರವೇಶಿಸಿದರು. ಭವಾನಿ ಭವನದ ಸುತ್ತಲೂ ಭದ್ರತೆಯನ್ನು ಬಿಗಿಗೊಳಿಸಲಾಗಿದ್ದು, ಹೆಚ್ಚುವರಿ ರಾಜ್ಯ ಪೊಲೀಸ್ ಸಿಬ್ಬಂದಿ, ಕೇಂದ್ರ ಪಡೆಗಳು ಮತ್ತು ಆರ್‌ಎಎಫ್



ಘಟಕಗಳನ್ನು ಈ ಪ್ರದೇಶದಲ್ಲಿ ನಿಯೋಜಿಸಲಾಗಿದೆ. ಕೋಲ್ಕತ್ತಾ ಹೈಕೋರ್ಟ್ ಬ್ಯಾನರ್ಜಿಗೆ ನಕಲಿ ದಾಖಲೆಗಳ ಕುರಿತು ಸಿಐಡಿ ತನಿಖೆಗೆ ಸಹಕರಿಸುವಂತೆ ಸೂಚಿಸಿತ್ತು ಮತ್ತು ಎರಡು ವಾರಗಳ ಕಾಲ ಬಲವಂತದ ಕ್ರಮದಿಂದ ಅವರಿಗೆ ರಕ್ಷಣೆ ನೀಡಿತ್ತು. ನ್ಯಾಯಾಲಯದ ಆದೇಶದ ಮೇರೆಗೆ ಕಾರ್ಯನಿರ್ವಹಿಸಿದ ಅವರು, ಪ್ರಕರಣದಲ್ಲಿ ಎರಡನೇ ಬಾರಿಗೆ ತನಿಖಾಧಿಕಾರಿಗಳ ಮುಂದೆ ಹಾಜರಾದರು. ದೆಹಲಿಯಿಂದ ಕೋಲ್ಕತ್ತಾಗೆ ಹಿಂದಿರುಗಿದ ನಂತರ ಗುರುವಾರ ಬ್ಯಾನರ್ಜಿ ಅವರನ್ನು ಸುಮಾರು ಐದೂವರೆ ಗಂಟೆಗಳ ಕಾಲ ವಿಚಾರಣೆ ನಡೆಸಲಾಗಿತ್ತು. ಆ ಅಧಿವೇಶನದ ಕೊನೆಯಲ್ಲಿ, ಸಿಐಡಿ ಅಧಿಕಾರಿಗಳು ಭಾನುವಾರ ಮತ್ತೆ ಹಾಜರಾಗುವಂತೆ ಹೊಸ ನೋಟಿಸ್ ಜಾರಿ ಮಾಡಿದ್ದಾರೆ. ಪ್ರಾಥಮಿಕ ಶಿಕ್ಷಕರ ನೇಮಕಾತಿ ಹಗರಣದ ತನಿಖೆಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಜೂನ್ 15 ರಂದು ಅವರಿಗೆ ಸಮನ್ಸ್ ಜಾರಿ ಮಾಡಿದೆ. ಪ್ರತ್ಯೇಕವಾಗಿ, ಅವರ ಸಾರ್ವಜನಿಕ ಹೇಳಿಕೆಗಳಲ್ಲಿ ಒಂದಕ್ಕೆ ಸಂಬಂಧಿಸಿದ ಮತ್ತೊಂದು ಪ್ರಕರಣದಲ್ಲಿ ಜೂನ್ 16 ರಂದು ಹಾಜರಾಗುವಂತೆ ಸಿಐಡಿ ಅವರಿಗೆ ನಿರ್ದೇಶನ ನೀಡಿದೆ. ವಿಧಾನಸಭೆ ಸಹಿ ನಕಲಿ ದಾಖಲೆಗಳ ಪ್ರಕರಣಕ್ಕಿಂತ ಭಿನ್ನವಾಗಿ, ಪ್ರಸ್ತುತ ಈ ಎರಡು ವಿಷಯಗಳಲ್ಲಿ ಅವರಿಗೆ ಯಾವುದೇ ನ್ಯಾಯಾಂಗ ರಕ್ಷಣೆ ಇಲ್ಲ.

# ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ: ಬೆಂಗಳೂರಿನಲ್ಲಿ ಸಿಜೆಪಿ ಭಾರಿ ಪ್ರತಿಭಟನೆ



**ಬೆಂಗಳೂರು: ಜೂ 14** ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿರುವ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಕ್ರಮವನ್ನು ಖಂಡಿಸಿ ಭಾನುವಾರ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ದೆಹಲಿಯಲ್ಲಿ ನಡೆದ ಯಶಸ್ವಿ ಪ್ರತಿಭಟನೆಯ ಬೆನ್ನಲ್ಲೇ, ಬೆಂಗಳೂರಿನ ಪ್ರಸಿದ್ಧ ಫ್ರೀಡಂ ಪಾರ್ಕ್‌ನಲ್ಲಿ ಕಾಕ್ರಾಚ್ ಜನತಾ ಪಾರ್ಟಿ (ಸಿಜೆಪಿ) ಮತ್ತು ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗಿತ್ತು. ಪ್ರತಿಭಟನೆಯಲ್ಲಿ ನೂರಾರು ಸಂಖ್ಯೆಯ ಯುವಕರು, ವಿದ್ಯಾರ್ಥಿಗಳು ಹಾಗೂ ಆಕ್ರೋಶಿತ ಪೋಷಕರು ಪಾಲ್ಗೊಂಡಿದ್ದರು. ಭ್ರಷ್ಟಾಚಾರ ಮತ್ತು ಪರೀಕ್ಷಾ ಅಕ್ರಮಗಳಿಂದ ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಟವಾಡಲಾಗುತ್ತಿದೆ ಎಂದು ಪ್ರತಿಭಟನಾಕಾರರು ಕೇಂದ್ರ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದರು.

ಫ್ರೀಡಂ ಪಾರ್ಕ್ ಆವರಣವು ಕೇಂದ್ರ ಸರ್ಕಾರದ ವಿರುದ್ಧದ ಘೋಷಣೆಗಳಿಂದ ಮೊಳಗಿ ಹೋಗಿತ್ತು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಇಷ್ಟೊಂದು ದೊಡ್ಡ ಮಟ್ಟದ ಪರೀಕ್ಷಾ ಹಗರಣ ನಡೆದಿದ್ದರೂ ಸಚಿವರು ನೈತಿಕ ಹೊಣೆ ಹೊತ್ತು ಅಧಿಕಾರದಿಂದ ಕೆಳಗಿಳಿಯುತ್ತಿಲ್ಲ ಎಂದು ದೂರಿದರು. ದೇಶದ ಶಿಕ್ಷಣ ವ್ಯವಸ್ಥೆಯ ಪಾವಿತ್ರ್ಯವನ್ನು ಕಾಪಾಡುವಲ್ಲಿ ವಿಫಲರಾಗಿರುವ ಧರ್ಮೇಂದ್ರ ಪ್ರಧಾನ್ ಅವರು ತಕ್ಷಣವೇ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನಾಕಾರರು ಬಲವಾಗಿ ಆಗ್ರಹಿಸಿದರು.

ಈ ಮಹತ್ವದ ಹೋರಾಟಕ್ಕೆ ಬಹುಭಾಷಾ ನಟ ಹಾಗೂ ಸಾಮಾಜಿಕ ಹೋರಾಟಗಾರ ಪ್ರಕಾಶ್ ರಾಜ್ ಅವರು ಭೌತಿಕವಾಗಿ ಭಾಗವಹಿಸುವ ಮೂಲಕ ಬೆಂಬಲ ಸೂಚಿಸಿದರು. ವಿದ್ಯಾರ್ಥಿಗಳ ಪರವಾಗಿ ಧ್ವನಿ ಎತ್ತಿದ ಅವರು, ಇದು ಕೇವಲ ಒಂದು ಪರೀಕ್ಷೆಯ ಅಕ್ರಮವಲ್ಲ, ದೇಶದ ಯುವ ಪೀಳಿಗೆಯ ಭವಿಷ್ಯಕ್ಕೆ ಮಾಡುತ್ತಿರುವ ದ್ರೋಹ.

ಇಂತಹ ಅನ್ಯಾಯಗಳ ವಿರುದ್ಧ ಪ್ರತಿಯೊಬ್ಬ ನಾಗರಿಕನೂ ಧ್ವನಿ ಎತ್ತಬೇಕಿದೆ" ಎಂದು ಕರೆ ನೀಡಿದರು.:

ಕಾಕ್ರೋಚ್ ಜನತಾ ಪಾರ್ಟಿಯ ಪ್ರಮುಖ ಮುಖಂಡರು ಮತ್ತು ಪದಾಧಿಕಾರಿಗಳು ಪ್ರತಿಭಟನೆಯ ಮುಂಚೂಣಿಯಲ್ಲಿದ್ದರು.

ಪಕ್ಷದ ಕಾರ್ಯಕರ್ತರು ಮತ್ತು ಯುವ ಮುಖಂಡರು ಹೋರಾಟಕ್ಕೆ ಸಾಥ್ ನೀಡಿ, ನೀಟ್ ಅಕ್ರಮದ ಕುರಿತು ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆಯಾಗಬೇಕು ಮತ್ತು ನೊಂದ ವಿದ್ಯಾರ್ಥಿಗಳಿಗೆ ಸೂಕ್ತ ನ್ಯಾಯ ಸಿಗಬೇಕು ಎಂದು ಒತ್ತಾಯಿಸಿದರು. ತನಿಖೆ ಪೂರ್ಣಗೊಂಡು ದೋಷಿಗಳಿಗೆ ಕಠಿಣ ಶಿಕ್ಷೆಯಾಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಸಿಜೆಪಿ ಪ್ರಮುಖರು ಇದೇ ವೇಳೆ ಎಚ್ಚರಿಸಿದರು.

## "ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ಪ್ರಯಾಸ್"

# ಭಾರತದ ಸಂಕಲ್ಪವನ್ನು ಈಡೇರಿಸಲು ದೇಶ ಸಜ್ಜು: ನಿರ್ಮಲಾ ಸೀತಾರಾಮನ್

**ಬೆಂಗಳೂರು: ಜೂ 14:** ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ಪ್ರಯಾಸ್ ಜೊತೆಗೆ 2047ರ ವಿಕಸಿತ ಭಾರತದ ಸಂಕಲ್ಪವನ್ನು ಈಡೇರಿಸಲು ದೇಶ ಸಜ್ಜಾಗಿದೆ ಎಂದು ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ತಿಳಿಸಿದ್ದಾರೆ.

ದೇವನಹಳ್ಳಿ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿಜಿಟಲ್ ಪಾವತಿ ವ್ಯವಸ್ಥೆ, ದೇಶಾದ್ಯಂತ ಸಾರ್ವಜನಿಕ ಮೂಲಸೌಕರ್ಯ ಕ್ಷೇತ್ರದಲ್ಲಿ ಮಹತ್ವದ ಅಭಿವೃದ್ಧಿ ಹಾಗೂ ವಾಯುಕ್ಷೇತ್ರದ ಸಂಪರ್ಕದಲ್ಲಿನ ಕ್ರಾಂತಿ– ಇವು ನರೇಂದ್ರ ಮೋದಿ ಸರಕಾರದ ಪ್ರಮುಖ ಕ್ರಾಂತಿಕಾರಿ ಸಾಧನೆಗಳು ಎಂದು ವಿಶ್ಲೇಷಿಸಿದರು. ಅಮೆರಿಕವು ಬಡ್ಡಿ ದರ ಕಡಿಮೆ ಮಾಡುವುದು, ಅಮೆರಿಕದ ಹಣಕಾಸು ಕ್ಷೇತ್ರದ ಕ್ರಮಗಳು ಕೂಡ ರೂಪಾಯಿಯ ವಿನಿಮಯ ದರ ಏರುಪೇರಿಗೆ ಕಾರಣವಾಗಿದೆ. ಜಪಾನ್ ಯೆನ್ ಕೂಡ ಡಾಲರ್ ಎದುರು ಮೌಲ್ಯ ಕಳೆದುಕೊಂಡಿದೆ ಎಂದು ಅವರು ಪ್ರಶ್ನೆಗೆ ಉತ್ತರ ನೀಡಿದರು.

ನಾವು ಕಚ್ಚಾ ತೈಲ, ಗ್ಯಾಸ್ ಅನ್ನು ಹೊರಗಿನಿಂದ ತರಿಸಿಕೊಳ್ಳ ಬೇಕಿದೆ. ಈ ವಿಚಾರದಲ್ಲಿ ನಾವು ಸ್ವಾವಲಂಬಿಗಳಲ್ಲ. ಇದಕ್ಕೆ ಪಾವತಿಯನ್ನು ಡಾಲರ್‌ನಲ್ಲೇ ಮಾಡಬೇಕಿದೆ. ಎರಡನೇಯದಾಗಿ ಗರಿಷ್ಠ ಪ್ರಮಾಣದ ರಸಗೊಬ್ಬರವನ್ನು ಆಮದು ಮಾಡಿಕೊಳ್ಳುತ್ತೇವೆ. ರಸಗೊಬ್ಬರದ ಆಮದು ವೆಚ್ಚ ಹೆಚ್ಚಾಗುತ್ತಿದೆ. ಕೋವಿಡ್ ಅವಧಿಯಲ್ಲಿ ನಾವು ರಸಗೊಬ್ಬರದ ಚೀಲಕ್ಕೆ 300 ರೂ. ದರ ನಿಗದಿಪಡಿಸಿದ್ದೇವೆ. ಅದೇ ಬ್ಯಾಗ್ ಆಮದು ದರ 3 ಸಾವಿರಕ್ಕೆ ಏರಿದೆ. ಇದರಿಂದ 2700 ರೂ. ಸಬ್ಸಿಡಿಯನ್ನು ಕೇಂದ್ರವು ನೀಡಬೇಕಿದೆ ಎಂದು ವಿವರಿಸಿದರು. ಇದಲ್ಲದೇ, ಚಿನ್ನದ ಆಮದು ಮಾಡಿಕೊಂಡು ಡಾಲರ್‌ನಲ್ಲಿ ಪಾವತಿ ನಡೆಯುತ್ತಿದೆ. ಚಿನ್ನದ ಪ್ರತಿ ಔನ್ಸ್ ದರ ರಾಕೆಟ್‌ನಂತೆ ತೀವ್ರವಾಗಿ ಏರುತ್ತಿದೆ. ಇದೇ ಕಾರಣಕ್ಕೆ ಪ್ರಧಾನಿಯವರು ಕಾರ್ ಪೂಲಿಂಗ್‌ನಂಥ ಕ್ರಮಕ್ಕೆ ಮುಂದಾಗಲು ಮನವಿ ಮಾಡಿದ್ದಾಗಿ ವಿವರ ನೀಡಿದರು. ಪ್ರಶ್ನೆಗೆ ಉತ್ತರಿಸಿದ ಅವರು, ಬೆಂಗಳೂರಿನಲ್ಲಿ ಸಂಗ್ರಹವಾದ ತೆರಿಗೆಯನ್ನೆಲ್ಲ ಬೆಂಗಳೂರಿಗೇ ಬಳಸಬೇಕೆಂದು ಭಾವಿಸಿದರೆ, ಯಾದಗಿರಿ, ಕಲಬುರ್ಗಿ ಅಭಿವೃದ್ಧಿಗೆ ಕರ್ನಾಟಕ ಸರಕಾರ ಎಲ್ಲಿಂದ ಅನುದಾನ ಕೊಡಬೇಕು..? ಎಂದು ಪ್ರಶ್ನಿಸಿದ ಅವರು, ಕರ್ನಾಟಕ ಹೆಚ್ಚು ತೆರಿಗೆ ನೀಡುತ್ತಿದ್ದು, ಇಲ್ಲಿಗೆ ಹೆಚ್ಚು ಅನುದಾನ ಬರಬೇಕೆಂಬ ತತ್ವ– ಚಿಂತನೆ ಸರಿಯಲ್ಲ ಎಂದು ಹೇಳಿದರು. ಇದೆಲ್ಲವನ್ನು ಹಣಕಾಸು ಆಯೋಗ ನಿರ್ಧರಿಸುತ್ತದೆ. ಕರ್ನಾಟಕದಲ್ಲಿರುವ ಹಿರಿಯ ಕಾಂಗ್ರೆಸ್ ನಾಯಕರು ಇದೆಲ್ಲವನ್ನೂ ತಿಳಿದಿದ್ದಾರೆ. ಆದರೂ, ಅವರು ಸದ್ದುಗದ್ದಲ ಮಾಡುತ್ತಿದ್ದಾರೆ ಎಂದು ಆಕ್ಷೇಪಿಸಿದರು. ಮನೆಗಳ ನಿರ್ಮಾಣ, ಶೌಚಾಲಯ ನಿರ್ಮಾಣ, ಮನೆಮನೆಗೆ ನಳ್ಳಿ ನೀರು ಮೊದಲಾದ ಯೋಜನೆಗಳ ಮೂಲಕ ಜನಸಾಮಾನ್ಯರಿಗೆ ಕೇಂದ್ರವು ನೆರವಾಗುತ್ತಿದೆ ಎಂದು ಅವರು ಮತ್ತೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ಅಣ್ಣಾಮಲೈ ಅವರು ಪಕ್ಷ ತೊರೆದ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಬಿಜೆಪಿ ಕೇಡರ್ ಆಧರಿತ ಪಕ್ಷ. ಜನಸಂಘದ ಸ್ಥಾಪಕರಾದ ಬಾಲರಾಜ ಮಧೋಕ್ ಅವರು ಕೆಲಸಮಯದ ಬಳಿಕ ಪಕ್ಷ ತೊರೆದಿದ್ದರು. ಕಲ್ಯಾಣ್ ಸಿಂಗ್ ಅವರೂ ಪಕ್ಷ ತೊರೆದು ಕೆಲಸಮಯದ ಬಳಿಕ ಪಕ್ಷಕ್ಕೆ ಮರಳಿದ್ದಾರೆ. ಉಮಾಭಾರತಿಯವರು, ಯಡಿಯೂರಪ್ಪನವರು ಒಂದು ಸಂದರ್ಭದಲ್ಲಿ ಪಕ್ಷ ತೊರೆದಿದ್ದರು. ಆದರೆ, ಪಕ್ಷ ಮುಂದುವರೆಯಿತು. ಯಡಿಯೂರಪ್ಪನವರು ಪಕ್ಷಕ್ಕೆ ಮರಳಿದಾಗ ನಾವು ಸಂತಸಪಟ್ಟೆವು ಎಂದು ವಿಶ್ಲೇಷಿಸಿದರು. ಮೋದಿಜೀ ಅವರ ನೇತೃತ್ವದ 12 ಪೂರ್ಣ ವರ್ಷಗಳ ಕಾರ್ಯನಿರ್ವಹಣೆಯು ದಾಖಲೆಗಳ ಅವಧಿ ಎಂದು ತಿಳಿಸಿದರು. ಪ್ರಧಾನಿಯಾಗಿ 4,399 ದಿನಗಳ ಆಡಳಿತದ ಗರಿಷ್ಠ ದಾಖಲೆಯನ್ನೂ ಮೋದಿಯವರು ಮಾಡಿದ್ದಾರೆ ಎಂದು ತಿಳಿಸಿದರು. ಈ ಮೂಲಕ ನೆಹರೂ ಅವರ ಚುನಾಯಿತ ಪ್ರಧಾನಿಯಾಗಿ ಅವಧಿಯ ದಾಖಲೆಯನ್ನು ಮುರಿದಿದ್ದಾರೆ ಎಂದರು. ಕರ್ನಾಟಕದಲ್ಲಿ ಶೇ 96ರಷ್ಟು ವಿದ್ಯುದೀಕೃತ ರೈಲ್ವೆ ವ್ಯವಸ್ಥೆ ಈಗ ಸಾಧ್ಯವಾಗಿದೆ. ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್‌ಗಳನ್ನು ಆರಂಭಿಸಲಾಗಿದೆ. ಏಮ್ಸ್, ಐಐಟಿಗಳನ್ನು ದೇಶಾದ್ಯಂತ ಆರಂಭಿಸಿದ್ದೇವೆ



ಎಂದು ಅವರು ಮೋದಿಯವರ ಸರಕಾರದ ಕ್ರಾಂತಿಕಾರಿ ಸಾಧನೆಗಳ ವಿವರ ನೀಡಿದರು. ಆದಾಯ ತೆರಿಗೆ ಮಿತಿ 2014ರಲ್ಲಿ 2.5 ಲಕ್ಷ ಆಗಿತ್ತು. ಅದನ್ನು ಈಗ 12.75 ಲಕ್ಷಕ್ಕೆ ಏರಿಸಿದ್ದೇವೆ. ಇದು ಮಧ್ಯಮ ವರ್ಗದವರಿಗೆ ಕೊಟ್ಟ ಕೊಡುಗೆ ಎಂದು ತಿಳಿಸಿದರು. ಜಿಎಸ್‌ಟಿಯಿಂದಾಗಿ ತೆರಿಗೆ ವ್ಯವಸ್ಥೆಯ ಸುಧಾರಣೆ ಎಂದು ಅವರು ಹೇಳಿದರು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಸಂಸದ ಡಾ. ಕೆ.ಸುಧಾಕರ್, ರಾಜ್ಯ ಕಾರ್ಯದರ್ಶಿ ತಮ್ಮೇಶ್ ಗೌಡ, ಮಾಜಿ ಶಾಸಕ ಚಂದ್ರಣ್ಣ, ಮಂಡಲದ ಅಂಬರೀಷ್ ಗೌಡ, ವಿಭಾಗ ಪ್ರಭಾರಿ ಬ್ಯಾಟರಂಗೇಗೌಡ, ವಿಧಾನಪರಿಷತ್ ಸದಸ್ಯ ಎಸ್. ಕೇಶವ ಪ್ರಸಾದ್, ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಪ್ರಮುಖರು ಇದ್ದರು.

# ಬಿಜೆಪಿ ವಲಯದಲ್ಲೂ ಮಹತ್ವದ ಬೆಳವಣಿಗೆಗಳ ಸುಳಿವು, ಹೊಸ ಕುತೂಹಲ

**ಬೆಂಗಳೂರು, ಜೂ. 14–** ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಗಳು ತೀವ್ರಗೊಂಡಿರುವ ಬೆನ್ನಲ್ಲೇ, ಆಡಳಿತಾರೂಢ ಕಾಂಗ್ರೆಸ್ ಬಳಿಕ ಇದೀಗ ಪ್ರತಿಪಕ್ಷ ಬಿಜೆಪಿ ವಲಯದಲ್ಲೂ ಮಹತ್ವದ ಬೆಳವಣಿಗೆಗಳ ಸುಳಿವುಗಳು ಕಾಣಿಸತೊಡಗಿವೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಲ್ಲಿ ಬದಲಾವಣೆ ಹಾಗೂ ಪಕ್ಷದಿಂದ ಉಚ್ಚಾಟನೆಗೊಂಡ ನಾಯಕರ ಮರುಸೇರ್ಪಡೆ ಕುರಿತ ಚರ್ಚೆಗಳು ರಾಜಕೀಯ ವಲಯದಲ್ಲಿ ಹೊಸ ಕುತೂಹಲ ಹುಟ್ಟಿಸಿವೆ.

ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ಬಿ.ವೈ. ವಿಜಯೇಂದ್ರ ಅಧಿಕಾರ ವಹಿಸಿಕೊಂಡ ಬಳಿಕ ಪಕ್ಷದೊಳಗೆ ಹಲವು ಬಾರಿ ಭಿನ್ನಮತದ ಧ್ವನಿಗಳು ಕೇಳಿಬಂದಿದ್ದವು. ವಿಶೇಷವಾಗಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಕೆಲ ನಾಯಕರು ನಾಯಕತ್ವದ ವಿರುದ್ಧ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿದ್ದರು. ಬಳಿಕ ನಡೆದ ಬೆಳವಣಿಗೆಯಲ್ಲಿ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಗಿತ್ತು.

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸೇರಿದಂತೆ ಇತರ ಕೆಲ ನಾಯಕರೂ ಪಕ್ಷದ ಸಂಘಟನೆ ಮತ್ತು ನಾಯಕತ್ವದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಇದೀಗ ವಿಧಾನಪರಿಷತ್ ಚುನಾವಣೆ ಹಾಗೂ ಮುಂಬರುವ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪಕ್ಷವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಬಿಜೆಪಿ ಹೈಕಮಾಂಡ್ ಮಹತ್ವದ ನಿರ್ಧಾರಗಳನ್ನು ಕೈಗೊಳ್ಳುವ ಸಾಧ್ಯತೆ ಇದೆ ಎನ್ನಲಾಗಿದೆ. ಮಾಜಿ ಉಪಮುಖ್ಯ ಮಂತ್ರಿ ಕೆ.ಎಸ್. ಈಶ್ವರಪ್ಪ, ಬಸನಗೌಡ ಪಾಟೀಲ್ ಯತ್ನಾಳ್, ಶಿವರಾಮ್ ಹೆಬ್ಬಾರ್ ಹಾಗೂ ಎಸ್.ಟಿ. ಸೋಮಶೇಖರ್ ಸೇರಿದಂತೆ ಪಕ್ಷದಿಂದ ದೂರವಾದ ನಾಯಕರಿಗೆ ಮತ್ತೆ ಬಿಜೆಪಿ ಬಾಗಿಲು ತೆರೆಯುವ ಸಾಧ್ಯತೆಗಳ ಕುರಿತು ರಾಜಕೀಯ ವಲಯದಲ್ಲಿ ಚರ್ಚೆಗಳು ಜೋರಾಗಿವೆ. ಈ ಬೆಳವಣಿಗೆಗಳಿಗೆ ಪೂರಕವಾಗಿ ಮಂಗಳೂರಿನಲ್ಲಿ ಮಾತನಾಡಿದ ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನದಾಸ್ ಅಗರ್ವಾಲ್, ರಾಜ್ಯಾಧ್ಯಕ್ಷರ ಆಯ್ಕೆ ಕುರಿತ ಅಂತಿಮ ತೀರ್ಮಾನವನ್ನು ಪಕ್ಷದ ರಾಷ್ಟ್ರೀಯ ನಾಯಕತ್ವ ಕೈಗೊಳ್ಳಲಿದೆ ಎಂದು

# ಬುರುಡೆ ಪ್ರಕರಣದಲ್ಲಿ ಉಲ್ಟಾ ಹೊಡೆದ ಚಿನ್ನಯ್ಯ: ಇಕ್ಕಟ್ಟಿನಲ್ಲಿ ಸರ್ಕಾರ

**ಬೆಂಗಳೂರು, ಜೂ. 14–** ಧರ್ಮಸ್ಥಳದ ಪ್ರಕರಣದಲ್ಲಿ ರಾಜ್ಯ ಸರ್ಕಾರ ಮತ್ತೆ ಇಕ್ಕಟ್ಟಿಗೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಅತ್ಯಾಚಾರ ಮತ್ತು ಕೊಲೆಯಾದ ನೂರಾರು ಶವಗಳನ್ನು ಧರ್ಮಸ್ಥಳದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹೂತು ಹಾಕಲಾಗಿದೆ ಎಂದು ಚಿನ್ನಯ್ಯ ಮಾಡಿದ ಆರೋಪದ ತನಿಖೆಗೆ ಸಂಬಂಧಪಟ್ಟಂತೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪತ್ರ ಆಧರಿಸಿ 2025ರ ಜುಲೈನಲ್ಲಿ ಎಸ್‌ಐಟಿ ರಚಿಸಲಾಯಿತು. ಇದೀಗ ಚಿನ್ನಯ್ಯನೇ ಉಲ್ಟಾ ಹೊಡೆದಿದ್ದಾನೆ.

ತನಿಖೆ ನಡೆಸಿದ ಎಸ್‌ಐಟಿ ಮುಖ್ಯಸ್ಥ ಡಿಜಿಪಿ ಪ್ರಣವ್ ಮೊಹಂತಿ ನೇತೃತ್ವದ ತಂಡ 30ಕ್ಕೂ ಹೆಚ್ಚು ಸ್ಥಳಗಳನ್ನು ಗುರುತಿಸಿ, ಅಗೆದಿತ್ತು. ಸುದೀರ್ಘ ತನಿಖೆ ನಡೆಸಿದ ಬಳಿಕ ಚಿನ್ನಯ್ಯನ ಆರೋಪದಲ್ಲಿ ಹುರುಳಿಲ್ಲ ಎಂದು ಆತನನ್ನೇ ಎಸ್‌ಐಟಿ ಬಂಧಿಸಿದೆ. ಈಗ ಆತ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಪ್ರಕರಣ ತಣ್ಣಗಿದ್ದ ಹೊತ್ತಿನಲ್ಲೇ ಚಿನ್ನಯ್ಯ ನ್ಯಾಯಾಲಯಕ್ಕೆ ರಿಟ್ ಅರ್ಜಿ ಸಲ್ಲಿಸಿ, ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆದಿದ್ದು, ತಮ ಅಸಹಾಯಕತೆಯನ್ನು ಬಳಸಿಕೊಂಡ ಕೆಲವರು ಆರೋಪ ಮಾಡುವಂತೆ ಮಾಡಿದ್ದರು ಎಂದಿದ್ದಾರೆ.

ಪ್ರಕಾಶ್‌ರಾಜ್, ಚಿತ್ರದುರ್ಗದ ರಮಾ ನಾಗರಾಜ್, ಮಹೇಶ್ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಟಿ.ಜಯಂತ್, ಸಮೀರ್ ಎಂ.ಡಿ., ದಿನೇಶ್, ವಿಠಲ್‌ಗೌಡ ಅವರು ಧರ್ಮಸ್ಥಳದ ವಿರುದ್ಧ ಷಡ್ಯಂತ್ರದಲ್ಲಿ ಭಾಗಿಯಾಗಿ ದ್ದಾರೆ. 200 ಕೋಟಿ ರೂ. ಹಣಕಾಸಿನ ವಹಿವಾಟು ನಡೆದಿದೆ ಎಂದು ಚಿನ್ನಯ್ಯ ದೂರಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಗಿರೀಶ್ ಮಟ್ಟಣ್ಣನವರ್, ಆರಂಭದಲ್ಲೇ ಹೇಳಿಕೆ ನೀಡಿದ್ದ ಚಿನ್ನಯ್ಯ ಈಗ ವ್ಯತಿರಿಕ್ತವಾಗಿ ಮಾತನಾಡುತ್ತಿದ್ದಾರೆ. ಮಂಪರು ಪರೀಕ್ಷೆಗೆ ಒಳಗಾಗಲು ಸಿದ್ಧನಿದ್ದೇನೆ ಎಂದು ಆತ 164ಯಡಿ ನೀಡಿರುವ ಹೇಳಿಕೆಯಲ್ಲಿ ತಿಳಿಸಿದ್ದಾನೆ. ಹೀಗಾಗಿ ಚಿನ್ನಯನನ್ನು ಮಂಪರು ಪರೀಕ್ಷೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

# ನಿರ್ಮಲಾ ಸೀತಾರಾಮನ್ ಅತ್ಯಂತ ಯಶಸ್ವಿ ಹಣಕಾಸು ಮಂತ್ರಿಗಳಲ್ಲಿ ಒಬ್ಬರು: ತೇಜಸ್ವಿ ಸೂರ್ಯ

**ಬೆಂಗಳೂರು ಜೂ.14:** ಅತ್ಯಂತ ಸವಾಲಿನ ಸಂದರ್ಭಗಳಲ್ಲಿಯೂ ನಿರ್ಮಲಾ ಸೀತಾರಾಮನ್ ಅವರು ಯಶಸ್ವಿ ಹಣಕಾಸು ಸಚಿವರಲ್ಲಿ ಒಬ್ಬರಾಗಿದ್ದಾರೆ ಎಂದು ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಶ್ಲಾಘಿಸಿದ್ದಾರೆ.

ಬಿಜೆಪಿಯ ವಿಕಸಿತ ಭಾರತ ಸಂಕಲ್ಪ ಸಮಾವೇಶ'ದಲ್ಲಿ ಮಾತನಾಡಿದ ವಿತ್ತ ಸಚಿವರು, ಅವರ ಆಡಳಿತ ವರ್ಷಗಳನ್ನು ನೋಡಿದಾಗ ಬಹುಶ: ನಿರ್ಮಲಾ ಸೀತಾರಾಮನ್ ಅವರು ಎದುರಿಸಿದಷ್ಟು ಭೌಗೋಳಿಕ, ರಾಜಕೀಯ ಸವಾಲುಗಳು, ಸಮಸ್ಯೆಗಳನ್ನು ಇದುವರೆಗೆ ಯಾವ ಹಣಕಾಸು ಸಚಿವರೂ ಎದುರಿಸಿರಲಿಕ್ಕಿಲ್ಲ, ಆದರೆ ನಿರ್ಮಲಾ ಸೀತಾರಾಮನ್ ಅವರು ಸವಾಲುಗಳೆಲ್ಲವನ್ನೂ ಸಮರ್ಥವಾಗಿ ಎದುರಿಸಿದ್ದಾರೆ ಎಂದರು.ದೇಶದ ಆರ್ಥಿಕತೆ ನಿರಂತರ ಬೆಳೆಯಲು, ಹೊಸ ಉದ್ಯೋಗಾವಕಾಶ ಸೃಷ್ಟಿಯಾಗಲು, ಕಾಲೇಜಿನಿಂದ ಹೊರಬರುವ ಯುವ ಪ್ರತಿಭೆಗಳಿಗೆ ಉದ್ಯೋಗಾವಕಾಶ ಸೃಷ್ಟಿಸಲು, ತೈಲ ಬೆಲೆ ಏರಿಕೆ, ಬೆಲೆ ಏರಿಕೆಯ ಮಧ್ಯೆ ಹಣದುಬ್ಬರ ನಿಯಂತ್ರಿಸಿ, ದೇಶದ ಮಧ್ಯಮ ವರ್ಗದ ಜನರು ಇವತ್ತಿಗೂ ಸುಖವಾಗಿ ಜೀವನ ನಡೆಸಲು ನಿರ್ಮಲಾ ಸೀತಾರಾಮನ್ ಬಹಳ ದೊಡ್ಡ ಪಾತ ವಹಿಸಿದ್ದಾರೆ. ಅವರು ಅಭಿನಂದನಾರ್ಹರು ಎಂದರು.

ಬೆಂಗಳೂರಿನ ಗುರು ರಾಘವೇಂದ್ರ ಸಹಕಾರ ಸೊಸೈಟಿಯ ಸಮಸ್ಯೆಯಿದೆ,



ನ್ಯಾಷನಲ್ ಕೋ ಆಪರೇಟಿವ್ ಬ್ಯಾಂಕ್ ಸಮಸ್ಯೆ ಬಂತು. ನಿರ್ಮಲಾ ಸೀತಾರಾಮನ್ ಅವರು ರಾಷ್ಟ್ರೀಯ ಬ್ಯಾಂಕುಗಳ ಜೊತೆ ವಿಲೀನಗೊಳಿಸಿ 40–50 ಸಾವಿರ ಜನ ಠೇವಣಿದಾರರಿಗೆ ಸಹಾಯ ಮಾಡಿದರು. ಗುರು ರಾಘವೇಂದ್ರ ಬ್ಯಾಂಕಿನ ಸಮಸ್ಯೆ ಬಗೆಹರಿದಿಲ್ಲ, ನಮ್ಮ ಕ್ಷೇತ್ರದಲ್ಲಿ 60 ಸಾವಿರಕ್ಕೂ ಹೆಚ್ಚು ಕುಟುಂಬಗಳು ಸಮಸ್ಯೆಯಿದೆ, ಗುರು ರಾಘವೇಂದ್ರ ಸಹಕಾರ ಬ್ಯಾಂಕಿನ ಸಮಸ್ಯೆ ಆದಷ್ಟು ಶೀಘ್ರ ಬಗೆಹರಿಸಿಕೊಡಿ ಎಂದು ಸಚಿವೆಗೆ ಸಂಸದ ತೇಜಸ್ವಿ ಸೂರ್ಯ ಮನವಿ ಮಾಡಿಕೊಂಡರು.

ಪ್ರಧಾನಿ ನರೇಂದ್ರ ಮೋದಿ ಸರ್ಕಾರವು 12 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ ಅವರು ಬೆಂಗಳೂರಿನ ಬನ್ನಪ್ಪ ಗಾರ್ಡನ್‌ನಲ್ಲಿ ತಾಯಿಯ ಹೆಸರಿನಲ್ಲಿ ಒಂದು ಗಿಡ ಅಭಿಯಾನದ ಅಂಗವಾಗಿ ಗಿಡ ನೆಟ್ಟರು. ಬಳಿಕ ಸಂತ ದೇವರ ದಾಸಿಮಯ್ಯ ಅವರಿಗೆ ಪುಷ್ಪ ನಮನ ಸಲ್ಲಿಸಿದರು.

ಸ್ವಚ್ಛತಾ ಅಭಿಯಾನದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಭಾಗಿಯಾಗಿದ್ದು, ಮಾಸ್ಕ್, ಗ್ಲೌಸ್ ಹಾಕಿ ಕಸ ಗುಡಿಸುವ ಮೂಲಕ ಗಮನ ಸೆಳೆದಿದ್ದಾರೆ. ಬಳಿಕ ತಳ್ಳುವ ತರಕಾರಿ ಗಾಡಿ ವ್ಯಾಪಾರಿಗಳ ಬಳಿ ಮಾತನಾಡಿದ ಸಚಿವರು, ಕೇಂದ್ರ ಯೋಜನೆಯಡಿ ಸಾಲದ ಸಂಬಂಧ ವಿಚಾರಿಸಿದ್ದಾರೆ. ಈ ವೇಳೆ ನಮಗೆ ಸಾಲ ಕೊಡಿಸಿ ಎಂದು ವ್ಯಾಪಾರಿಗಳು ಸಚಿವರನ್ನು ಆಗ್ರಹಿಸಿದ ಪ್ರಸಂಗ ನಡೆದಿದೆ.

ಸತತ 12 ವರ್ಷ ದೇಶದ ಪ್ರಧಾನಿಯಾಗಿ ದಾಖಲೆ ನಿರ್ಮಿಸಿರುವ ನರೇಂದ್ರ ಮೋದಿಯವರ ಆಡಳಿತ ಹಿನ್ನೆಲೆಯಲ್ಲಿ ಬಿಜೆಪಿ ಕರ್ನಾಟಕದ ಭಾಗವಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಬೆಂಗಳೂರಿನ ಮೈಸೂರು ಬ್ಯಾಂಕ್ ವೃತ್ತದಲ್ಲಿ ಕಸ ಗುಡಿಸುವ ಮೂಲಕ ಸ್ವಚ್ಛತಾ ಅಭಿಯಾನ ಕಾರ್ಯದಲ್ಲಿ ಪಾಲ್ಗೊಂಡರು.

ಮೋದಿಯವರ 12 ವರ್ಷಗಳ ಜನಪರ ಆಡಳಿತ ಮತ್ತು ಅಭೂತ ಪೂರ್ವ ಸಾಧನೆಗಳನ್ನು ಸಾರ್ಥಕವಾಗಿ ಆಚರಿಸಲು ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದ ಅವರು, ಗಾಂಧೀಜಿಯವರ ಕನಸಿನ ಸ್ವಚ್ಛ ಭಾರತ ಸಂಕಲ್ಪ ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಒಂದು ಜನಾಂದೋಲನವಾಗಿ ಉಳಿಯದೆ, ಪ್ರತಿಯೊಬ್ಬ ಭಾರತೀಯನ ಜೀವನ ಪದ್ಧತಿಯಾಗಿ ಮಾರ್ಪಟ್ಟಿದೆ ಎಂದರು.

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕನ್ನಡ ಕ್ರಿಯಾಸಮಿತಿ

# ರಾಜ್ಯಮಟ್ಟದ ಕನ್ನಡ ಜಾಗೃತಿ ಸಮಾವೇಶ ಕನ್ನಡ ಪರ ಹೋರಾಟಗಾರ ವ.ಚ. ಚನ್ನೇಗೌಡರ ಅಭಿನಂದನಾ ಸಮಾರಂಭ: ನಾಡಹಣತೆಗಳು ಕೃತಿ ಬಿಡುಗಡೆ

**ಬೆಂಗಳೂರು, ಜೂ.14:**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಕೇಂದ್ರ ಕನ್ನಡ ಕ್ರಿಯಾ ಸಮಿತಿ ವತಿಯಿಂದ ರಾಜ್ಯಮಟ್ಟದ ಕನ್ನಡ ಜಾಗೃತಿ ಸಮಾವೇಶ ಹಾಗೂ ಕನ್ನಡ ಪರ ಹೋರಾಟಗಾರ ವ.ಚ.ಚನ್ನೇಗೌಡರ ಅಭಿನಂದನಾ ಸಮಾರಂಭ ಮತ್ತು ನಾಡಹಣತೆಗಳು ಕೃತಿ ಬಿಡುಗಡೆ ಕಾರ್ಯಕ್ರಮ.

ಹಂಪಿ ವಿಶ್ವವಿದ್ಯಾಲಯ ವಿಶ್ರಾಂತ ಕುಲಪತಿಗಳಾದ ಡಾ॥ಹಿ.ಚಿ.ಬೋರಲಿಂಗಯ್ಯ, ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ನಾಡೋಜ ಮನು ಬಳಿಗಾರ್, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷರಾದ ವೂಡೆ ಪಿ.ಕೃಷ್ಣ, ಕನ್ನಡ ಪರ ಹೋರಾಟಗಾರ ರಾ.ನಂ. ಚಂದ್ರಶೇಖರ್, ವಿಷ್ಣು ಸೇನಾ ಸಮಿತಿ ಅಧ್ಯಕ್ಷರಾದ ವೀರಕಪುತ್ರ ಶ್ರೀನಿವಾಸ್, ಸಾಹಿತಿ ಡಾ.ಪದ್ಮನಿ ನಾಗರಾಜು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಗೌರವಾಧ್ಯಕ್ಷರಾದ ವ.ಚ.ಚನ್ನೇಗೌಡರು, ರಾಜ್ಯಾಧ್ಯಕ್ಷರಾದ ಕೆ.ಎಸ್.ಪ್ರಭುಸ್ವಾಮಿ,ರಾಜ್ಯ ಕಾರ್ಯಾಧ್ಯಕ್ಷರಾದ ಕೆ.ಎಸ್.ಎ.ಹುಸೇನ್ ರವರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು.



ನಾಡೋಜ ಮನು ಬಳಿಗಾರ್ ರವರು ಮಾತನಾಡಿ ಎಲ್ಲರು ಸೇರಿ ಕನ್ನಡ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಶುದ್ಧ ಕನ್ನಡದ ಹೃದಯ ವೈಶಾಲ್ಯವಿರುವ ವ್ಯಕ್ತಿ ವ.ಚ.ಚನ್ನೇಗೌಡರು. ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಸ್ಥಾನದಲ್ಲಿ ವ.ಚ.ಚನ್ನೇಗೌಡರು ಒಂದು ರೂಪಾಯಿ ಗೌರವಧನ ಸ್ವೀಕರಿಸದೇ ಪರಿಷತ್‌ನ ಸೇವೆ ಸಲ್ಲಿಸಿದರು. ಗಟ್ಟಿತನ ಪ್ರಾಮಾಣಿಕತೆ, ಕ್ರಿಯಾಶೀಲತೆವುಳ್ಳ ವ್ಯಕ್ತಿ ವ.ಚ.ಚನ್ನೇಗೌಡರು. ಎಲ್ಲ ಕನ್ನಡ ಪರ ಹೋರಾಟಗಳಲ್ಲಿ ವ.ಚ.ಚನ್ನೇಗೌಡರು ಪ್ರಮುಖ ಪಾತ್ರವಹಿಸಿದರು.

ಹಿ.ಚಿ.ಬೋರಲಿಂಗಯ್ಯ ರವರು ಮಾತನಾಡಿ ವ.ಚ.ಚನ್ನೇಗೌಡರು ರಾಜ್ಯ ಸಾರಿಗೆ ಸಂಸ್ಥೆಯಲ್ಲಿ 39ವರ್ಷ ವೃತ್ತಿ ಸೇವೆ ಜೊತೆಯಲ್ಲಿ ಕನ್ನಡ ಕೆಲಸವನ್ನು ಮಾಡುತ್ತಾ ಬಂದಿದ್ದಾರೆ.

ಅತ್ಯಂತ ಸರಳತೆ, ಘನತೆ ಇರುವ ಸಜ್ಜನಿಕೆ ಮೂಲಕ ಕನ್ನಡ ಚಳವಳಿಯನ್ನು ಕಟ್ಟಿದವರು ವ.ಚ.ಚನ್ನೇಗೌಡರು. ತಮಿಳಿಗರ ಸಂಗಮ ಸಾಹಿತ್ಯವನ್ನು ಆರಾಧಿಸುತ್ತಾರೆ. ಸಂಗಮ ಸಾಹಿತ್ಯದಲ್ಲಿ ಮೈಸೂರು ಮತ್ತು ಮೈಸೂರಿನ ಇತಿಹಾಸ ತಿಳಿಸುತ್ತದೆ.

ಯಾವ ಸರ್ಕಾರಗಳು ನನ್ನ ತಾಯಿ ನುಡಿ ಎಂದು ಕನ್ನಡ ಭಾಷೆಯನ್ನು ರಕ್ಷಣೆ ಮಾಡಲ್ಲಿಲ, ಶಿಕ್ಷಣವನ್ನು ಉದ್ಯೋಗ ಮಾಡಿಕೊಂಡು ಕನ್ನಡವನ್ನು ಬಡವರಾಗಿ ಮಾಡುತ್ತಿದ್ದಾರೆ. ರಾಜ್ಯ ಮತ್ತು ಕನ್ನಡ ಭಾಷೆ ಉಳಿಸಲು ಕನ್ನಡ ಪರ ಹೋರಾಟಗಾರರ ಅವಶ್ಯಕತೆ ತುಂಬ ಇದೆ. 1 ರಿಂದ 7ನೇ ತರಗತಿವರಗೆ ಕನ್ನಡ ಮಾಧ್ಯಮದಲ್ಲಿ ಮಕ್ಕಳು ಶಿಕ್ಷಣ ಪಡೆಯಬೇಕು. ಅಂಗ್ಲ ಒಂದು ಪಠ್ಯವಾಗಿ ಇದ್ದರೆ ಸಾಕು ಎಂದು ಹೇಳಿದರು.

ವೂಡೇ ಪಿ.ಕೃಷ್ಣರವರು ಮಾತನಾಡಿ ಕನ್ನಡ ಪರ ಹೋರಾಟಗಾರ ವ.ಚ.ಚನ್ನೇಗೌಡರು ಅಪ್ಪಟ ಗ್ರಾಮೀಣ ಪ್ರತಿಭೆ. ಚಿಕ್ಕ ವಯಸ್ಸಿನಿಂದಲೇ ಕನ್ನಡ ಭಾಷೆ ಕುರಿತು ಅಭಿಮಾನ, ವೃತ್ತಿ ಜೊತೆಯಲ್ಲಿ ನಾಡು, ನುಡಿಗೆ ಸದಾ ಶ್ರಮಿಸುತ್ತಿರುವ ವ.ಚ.ಚನ್ನೇಗೌಡರು ಕನ್ನಡಕ್ಕಾಗಿ ಇಡೀ ಬದುಕು ಸಾಗಿಸಿದರು. ಕನ್ನಡವನ್ನು ಯಾರು ಪ್ರೀತಿಸುತ್ತಾರೆ ಅವರೆಲ್ಲರು ವ.ಚ.ಚನ್ನೇಗೌಡರ ಸ್ನೇಹಿತರು. ಕುವೆಂಪು ಹೇಳಿದಂತೆ ಕನ್ನಡಕ್ಕಾಗಿ ಕೈ ಎತ್ತು ನಿನ್ನ ಕೈ ಕಲ್ಪವೃಕ್ಷವಾಗುವುದು ಗಾದೆ ಮಾತಿನಂತೆ ವ.ಚ.ಚನ್ನೇಗೌಡರು ಕಲ್ಪವೃಕ್ಷದಂತೆ ಎಂದರು.

ವ.ಚ.ಚನ್ನೇಗೌಡರು ಮಾತನಾಡಿ ಕನ್ನಡಕ್ಕಾಗಿ ನನ್ನ ಸಲ್ಲಿಸಿದ್ದು ಅಲ್ಪಸೇವೆ, ಅದರೆ ನನಗೆ ಸಿಕ್ಕಿದ್ದು ಕನ್ನಡಿಗರ ದೊಡ್ಡ ಪ್ರೀತಿ, ಅವರು ಋಣ ತೀರಿಸಲು ಸಾಧ್ಯವಿಲ್ಲ. ಕನ್ನಡ ಪರ ಹೋರಾಟ, ಸಂಘಟನೆಯಲ್ಲಿ ಜರಗನಹಳ್ಳಿ ಶಿವಶಂಕರ್ ರಾ.ನಂ.ಚಂದ್ರಶೇಖರ್ ರವರ ಸಹಕಾರ ನೀಡಿದ್ದಾರೆ.ಶಿಫಾರಸ್ಸು ಮತ್ತು ಓಲೈಕೆ ಮಾಡುವವರಿಗೆ ರಾಜ್ಯ ಸರ್ಕಾರಗಳು ಪ್ರಶಸ್ತಿ ಕೊಡುತ್ತದೆ. ಕನ್ನಡ ಪರ ಹೋರಾಟಗಾರರನ್ನ ಗುರುತಿಸುವ ಕಾರ್ಯವಾಗಬೇಕು. ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರ ಸಾರಿಗೆ ಸಂಸ್ಥೆಯ ನೌಕರರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಬೇಕು. ನಮ್ಮ ಭೂಮಿಯನ್ನು ಪಡೆದ ಖಾಸಗಿ ಕಂಪನಿಗಳು ಸ್ಥಳೀಯ ಕನ್ನಡಿಗರಿಗೆ ಉದ್ಯೋಗ ನೀಡುತ್ತಿಲ್ಲ, ಉತ್ತರ ಭಾರತದವರಿಗೆ ಅವಕಾಶ ನೀಡುತ್ತಿದ್ದಾರೆ. ಸರೋಜಿನಿ ಮಹಿಷಿ ವರದಿ ಯಥವತ್ತ ಜಾರಿಗೆ ತನ್ನಿ ಎಂಬುದು ನಮ್ಮ ಒತ್ತಾಯ. ಕೇಂದ್ರ ಸಚಿವರಾದ ಕುಮಾರಸ್ವಾಮಿರವರು 4ಸಾವಿರ ಎಲೆಕ್ಟ್ರಿಕಲ್ ಬಸ್ ಗಳನ್ನು ಖಾಸಗಿರವರಿಗೆ ಕೊಡಬೇಡಿ, ಸಾರಿಗೆ ಸಂಸ್ಥೆಯವರಿಗೆ ಕೊಡಿ ಎಂಬ ಮನವಿ.

ಯುವಕರಲ್ಲಿ ಶಕ್ತಿ ಇರುತ್ತದೆ , ಕನ್ನಡ ಉಳಿಸಿ, ಬೆಳಸಲು ಕನ್ನಡದ ತೇರು ಏಳೆಯುವ ಕೆಲಸ ಮಾಡಬೇಕು. ನಾಡಹಣತೆಗಳು ಪುಸ್ತಕ ಕನ್ನಡ ನಾಡು, ನುಡಿಗೆ ಸೇವೆ ಸಲ್ಲಿಸಿದ ಮಹನೀಯರುಗಳ ಮಾಹಿತಿ ಇದೆ. ಕನ್ನಡ ತಾಯಿಯ ಸೇವೆ ಮಾಡಿದವರಿಗೆ ಸಮಾಜದಲ್ಲಿ ಗೌರವ ಸಿಗುತ್ತದೆ.. ಕೆ.ಎಸ್.ಪ್ರಭುಸ್ವಾಮಿರವರು ಮಾತನಾಡಿ ಅನ್ಯ ಭಾಷಿಕರ ಹಾವಳಿಯಿಂದ ತಪ್ಪಿಸಲು, ಕನ್ನಡದ ಚಿಂತನೆಗಳನ್ನು ಬಿತ್ತ ಬೇಕು ಎಂದು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕನ್ನಡ ಕ್ರಿಯಾ ಸಮಿತಿ 1988ರಲ್ಲಿ ಸ್ಥಾಪನೆಯಾಯಿತು. ನಮ್ಮ ಸಂಸ್ಥೆಯಲ್ಲಿ ಕನ್ನಡಿಗರಿಗೆ ಉದ್ಯೋಗ ಮತ್ತು ಆಡಳಿತದಲ್ಲಿ ಕನ್ನಡ ಭಾಷೆ ಬಳಸಲು ಹೋರಾಟದಲ್ಲಿ ಅತ್ಯಂತ ಯಶ್ವಸಿಯಾಗಿ ನಮ್ಮ ಸಂಸ್ಥೆ ಶ್ರಮಿಸಿದೆ. ನಾಡು,ನುಡಿ ಸೇವೆ ಸಲ್ಲಿಸಿದ ಗಣ್ಯ ಮಹನೀಯರಿಗೆ ಸನ್ಮಾನ ಮತ್ತು ಗೌರವಿಸುವ ಕಾರ್ಯಕ್ರಮ ಸತತವಾಗಿ ಹಮ್ಮಿಕೊಂಡು ಬರಲಾಗುತ್ತಿದೆ ಎಂದರು.

# ಭಾರತದ ಜ್ಞಾನಪರಂಪರೆ ಜಗತ್ತಿಗೆ ದಾರಿ ದೀಪವಾಗಬೇಕು: ನ್ಯಾಯಮೂರ್ತಿ ವಿ.ಶ್ರೀಶಾನಂದ



**ಬೆಂಗಳೂರು ಜೂ.14:** ಒಂದೊಂದು ಕಲ್ಲಿನಲ್ಲು ನಮ್ಮ ನಾಡಿನ ಭವ್ಯ ಇತಿಹಾಸ ಅಡಗಿದ್ದು, ಭಾರತದ ಜ್ಞಾನ ಪರಂಪರೆ ಜಗತ್ತಿಗೆ ದಾರಿ ದೀಪವಾಗಬೇಕು ಎಂದು ಹೈಕೋರ್ಟ್ ನ್ಯಾಯಮೂರ್ತಿ ವಿ.ಶ್ರೀಶಾನಂದ ಹೇಳಿದ್ದಾರೆ. ದ್ವಿತೀಯ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದವರನ್ನು ಗೌರವಿಸಿ ಮಾತನಾಡಿದ ಅವರು, ಶಿಕ್ಷಣಕ್ಕೂ, ವ್ಯಕ್ತಿ ಅಕ್ಷರ ಕಲಿಯಲಿಯುವುದಕ್ಕೂ ವ್ಯತ್ಯಾಸವಿದೆ. ಅಕ್ಷರ ಕಲಿತವರೆಲ್ಲ ವಿದ್ಯಾವಂತರಲ್ಲ. ಜಗತ್ತಿನ ಹಲವು ದೇಶಗಳು ನಾಗರಿಕತೆಯನ್ನು ಮೈಗೂಡಿಸಿಕೊಳ್ಳದಿದ್ದಾಗ ನಮ್ಮ ದೇಶ ಶಿಕ್ಷಣ ಕೇಂದ್ರಗಳನ್ನು ಹೊಂದಿತ್ತು. ಇದಕ್ಕೆ ನಳಂದ ವಿಶ್ವವಿದ್ಯಾಲಯ ನಿದರ್ಶನ ಎಂದರು.

200 ವರ್ಷಗಳ ಬ್ರಿಟೀಷ್ ಆಳ್ವಿಕೆಯಲ್ಲಿ ನಾವು ಎಲ್ಲವನ್ನೂ ಕಳೆದುಕೊಂಡೆವು. ಆದರೆ ಭಾರತದ ಮೆದಳುಗಳಿಗೆ ಸಾವಿಲ್ಲ, ಅದು ಎಂದಿಗೂ ಸಾಯುವುದಿಲ್ಲ. ನಮ್ಮ ಜ್ಞಾನ ಪರಂಪರೆ ಮತ್ತೆ ವೈಭವತ್ತ ಸಾಗಬೇಕು ಎಂದರು.

# ಅಭಿವೃದ್ಧಿ ಹೆಸರಿನಲ್ಲಿ ರೈತರ ಭೂಮಿಯನ್ನು ಬಲವಂತವಾಗಿ ಕಬಳಿಸಬೇಡಿ: ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ

**ಬೆಂಗಳೂರು, ಜೂ.14:** ರಾಮನಗರದ ಬಿಡದಿ ಭಾಗದಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಬೃಹತ್ ಸಮಗ್ರ ಟೌನ್ಶಿಪ್ ಯೋಜನೆಗಾಗಿ ರೈತರ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮಕ್ಕೆ ಜೆಡಿಎಸ್ ನಾಯಕ ನಿಖಿಲ್ ಕುಮಾರ ಸ್ವಾಮಿ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಅಭಿವೃದ್ಧಿಯ ಹೆಸರಿನಲ್ಲಿ ಹಳ್ಳಿಗಳ ರೈತರ ಬದುಕಿನ ಆಧಾರ ವಾಗಿರುವ ಜಮೀನುಗಳನ್ನು ಬಲವಂತವಾಗಿ ಕಿತ್ತುಕೊಳ್ಳುವುದು ಸರಿಯಲ್ಲ ಎಂದು ಆಕ್ಷೇಪಿಸಿದ್ದಾರೆ. ಈ ಪ್ರಕ್ರಿಯೆ ಕೇವಲ ರಿಯಲ್ ಎಸ್ಟೇಟ್ ಲಾಬಿಗೆ ಅನುಕೂಲ ಮಾಡಿ ಕೊಡುವ ಪ್ರಯತ್ನವಾಗಿದ್ದು, ಸ್ಥಳೀಯ ಕೃಷಿಕರನ್ನು ಬೀದಿಗೆ ತಳ್ಳುವಂತಿದೆ ಎಂದು ಸರ್ಕಾ ರದ ನಿಲುವನ್ನು ಕಟುವಾಗಿ ಟೀಕಿಸಿದ್ದಾರೆ.

ಈ ಭಾಗದ ನೂರಾರು ರೈತ ಕುಟುಂಬಗಳು ತಮ್ಮ ಭೂಮಿಯನ್ನು ಉಳಿಸಿಕೊಳ್ಳಲು ಕಳೆದ ಹಲವು ದಿನಗಳಿಂದ ನಿರಂತರವಾಗಿ 450 ದಿನಗಳಿಂದ ನಡೆಸುತ್ತಿರುವ ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದಾರೆ. ನವ ಬೆಂಗಳೂರು ಹಾಗೂ ಕೈಗಾರಿಕಾ ಕಾರಿಡಾರ್ ನಿರ್ಮಿಸಲು ರಾಜ್ಯದಲ್ಲಿ ಸಾಕಷ್ಟು ಬಂಜರು ಅಥವಾ ಕೃಷಿಯೇ ತರ ಜಮೀನುಗಳು ಲಭ್ಯವಿದ್ದರೂ, ಕೇವಲ ಬಿಡದಿ ಸುತ್ತಮುತ್ತಲಿನ ನೀರಾವರಿ ಆಧಾರಿತ ತೋಟಗಾರಿಕಾ ಭೂಮಿಯನ್ನೇ ಗುರಿಯಾಗಿಸಿಕೊಂಡಿರುವುದು ಹಲವು ಅನುಮಾನ ಗಳಿಗೆ ಎಡೆ ಮಾಡಿಕೊಟ್ಟಿದೆ. ಭೂಮಾಲೀಕರ ಕನಿಷ್ಠ ಒಪ್ಪಿಗೆಯೂ ಇಲ್ಲದೆ ಏಕ ಪಕ್ಷೀಯವಾಗಿ ಅಂತಿಮ ಅಧಿಸೂಚನೆ ಹೊರಡಿಸಿರುವುದು ಪ್ರಜಾಪ್ರಭುತ್ವ ವಿರೋಧಿ ಧೋರಣೆಯಾಗಿದೆ



ಎಂದು ನಿಖಿಲ್ ದೂರಿದ್ದಾರೆ.ರೈತರ ಹಿತವನ್ನು ಬಲಿಗೊಟ್ಟು ನಡೆಸುವ ಯಾವುದೇ ಯೋಜನೆಯನ್ನು ಬಿಡದಿ ಭಾಗದಲ್ಲಿ ಅನುಷ್ಠಾನಗೊಳಿಸಲು ಬಿಡುವುದಿಲ್ಲ ಎಂದು ಎಚ್ಚರಿಸಿರುವ ನಿಖಿಲ್, ಬಾಧಿತ ಕೃಷಿಕರ ಪರವಾಗಿ ಕಾನೂನು ಹೋರಾಟ ರೂಪಿಸಲು ಸಜ್ಜಾಗಿದ್ದೇವೆ. ಈ ಹಿಂದೆ ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲೂ ಇಂತಹದ್ದೇ ಯೋಜನೆಗೆ ವಿರೋಧ ವ್ಯಕ್ತವಾದಾಗ ಜನಹಿತಕ್ಕಾಗಿ ಅದನ್ನು ಕೈಬಿಡಲಾಗಿತ್ತು ಎಂಬುದನ್ನು ನೆನಪಿಸಿದ್ದಾರೆ.

ಆದ್ದರಿಂದ ಪ್ರಸ್ತುತ ಸರ್ಕಾರವೂ ಸಹ ಹಠಮಾರಿ ಧೋರಣೆಯನ್ನು ಬಿಟ್ಟು ತಕ್ಷಣವೇ ಈ ವಿವಾದಿತ ಭೂಸ್ವಾಧೀನ ಪ್ರಕ್ರಿಯೆಯನ್ನು ಹಿಂಪಡೆಯಬೇಕು, ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರೈತರೊಂದಿಗೆ ಬೀದಿಗಿಳಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

# ಭವ್ಯ ಭವಿಷ್ಯ ರೂಪಿಸಿಕೊಳ್ಳಲು ಉತ್ತಮ ಕೇಳುಗರಾಗಿ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್ ಕರೆ

**ಬೆಂಗಳೂರು,ಜೂ.14:** ಮನುಷ್ಯರು ಕೇಳುವುದನ್ನು ಮರೆತಿರುವುದು ಅತ್ಯಂತ ದುಃಖಕರವಾಗಿದ್ದು, ಆಲಿಸುವುದು ನಿಜವಾದ ಕಲೆ. ಭವ್ಯ ಭವಿಷ್ಯಕ್ಕೆ ಮತ್ತು ಉತ್ತಮ ಬೆಳವಣಿಗೆ ಸಾಧಿಸಲು ಉತ್ತಮ ಕೇಳುಗರಾಗಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಜಸ್ಟೀಸ್ ಬಿ.ಎಸ್. ಪಾಟೀಲ್ ಕರೆ ನೀಡಿದ್ದಾರೆ.

ವೇಮನ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ 24ನೇ ಪದವಿ ಪ್ರದಾನ ಸಮಾರಂಭದಲ್ಲಿ ಪದವಿ ಪ್ರದಾನ ಮಾಡಿ ಮಾತನಾಡಿದ ಅವರು, ಹಲವಾರು ವಿಚಾರಗಳು ಮನಸ್ಸಿನಲ್ಲಿದ್ದರೂ ಮೌನವಾಗಿ ಆಲಿಸಬೇಕು. ಕೇಳುವುದರಿಂದ ಆಲೋಚನಾ ಶಕ್ತಿ ಬೆಳೆಯುತ್ತದೆ. ಮನೋ ವಿಕಾಸಕ್ಕೆ ಪೂರಕವಾಗಲಿದೆ. ಉತ್ಸಾಹಭರಿತವಾಗಿ



ಅಧ್ಯಯನ ಮಾಡಬೇಕು. ತಮ್ಮ ವೃತ್ತಿಯಲ್ಲಿ ನಾವೀನ್ಯತೆಯನ್ನು ಸಾಧಿಸುವ ಕ್ರಿಯಾಶೀಲತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ನಿಮ್ಮ ಭವಿಷ್ಯದ ವಿನ್ಯಾಸವನ್ನು ನೀವೇ ರೂಪಿಸಿಕೊಳ್ಳಬೇಕು. ಭವಿಷ್ಯದ ಬದುಕಿನ ಬಗ್ಗೆ ಸ್ಪಷ್ಟವಾದ ಚೌಕಟ್ಟು ರೂಪಿಸಿಕೊಂಡು ಅದರಂತೆ ಮುನ್ನಡೆಯಬೇಕು. ಇಲ್ಲವಾದಲ್ಲಿ ಹಾದಿ ತಪ್ಪುತ್ತೀರಿ. ಉತ್ಕೃಷ್ಟವಾದ ಸಾಧನೆ ಮಾಡುವ ಆಲೋಚನೆ ಪ್ರತಿಯೊಬ್ಬರಲ್ಲೂ ಇರಬೇಕು. ಸದಾ ಕಾಲ ಎಚ್ಚರಿಕೆಯಿಂದ ಅಧ್ಯಯನ ಮಾಡಬೇಕು. ವೇಮನ ರೆಡ್ಡಿ ಜನಸಂಘದ ಅಧ್ಯಕ್ಷ ಡಿ.ಎನ್. ಲಕ್ಷ್ಮಣ ರೆಡ್ಡಿ ಮಾತನಾಡಿ, ಪದವಿ ಪಡೆಯುವುದು ವಿದ್ಯಾರ್ಥಿಗಳ ಜೀವನದಲ್ಲಿ ಅತ್ಯಂತ ಅಮೂಲ್ಯವಾದ ಸಂದರ್ಭ. ಪದವಿ ನಿಮ್ಮ ಭವಿಷ್ಯಕ್ಕೆ ಬುನಾದಿಯಾಗಲಿ ಎಂದು ಹಾರೈಸಿದರು.

# 371(ಜೆ) ಸಮರ್ಪಕ ಅನುಷ್ಠಾನ ಇಲ್ಲ: ಧನರಾಜ್




**ಕಲಬುರಗಿ, ಜೂ. 14:** ಶೈಕ್ಷಣಿಕ, ಆರ್ಥಿಕ, ಉದ್ಯೋಗ ಸೇರಿ ಈ ಭಾಗದ ಅಭಿವೃದ್ಧಿಗೆ ಕಲ್ಯಾಣ ಕರ್ನಾಟಕಕ್ಕೆ 371(ಜೆ) ವಿಶೇಷ ಸ್ಥಾನಮಾನ ದೊರೆತಿದೆ. ಆದರೆ ರಾಜಕೀಯ ಇಚ್ಛಾಶಕ್ತಿ ಕೊರತೆಯಿಂದ ಸಮರ್ಪಕ ಅನುಷ್ಠಾನ ಆಗುತ್ತಿಲ್ಲ ಎಂದು ರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿ ಎ.ಧನರಾಜ ಕಳವಳ ವ್ಯಕ್ತಪಡಿಸಿದರು.

ನಗರದ ಹಮಾಲವಾಡಿ ಏರಿಯಾದಲ್ಲಿರುವ ಸಾವಿತ್ರಿಬಾಯಿ ಫುಲೆ ಹಾಗೂ ಫಾತಿಮಾ ಶೇಖ್ ಗ್ರಂಥಾಲಯದಲ್ಲಿ ಡಿವೈಎಫ್ಐ ಮತ್ತು ಎಸ್‌ಎಫ್ಐ ಯುವಜನ ಸಂಟನೆ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ 371(ಜೆ) ಹಾಗೂ ಎಸ್.ಐ.ಆರ್. ಕುರಿತು ಕಾರ್ಯಾಗಾರ 'ದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ, ಉದ್ಯೋಗ ಅಭಿವೃದ್ಧಿಗಾಗಿ ಸರ್ಕಾರ ಪ್ರತಿವರ್ಷ 5 ಸಾವಿರ ಕೋಟಿ ರೂ. ಅನುದಾನ ಬಿಡುಗಡೆ ಮಾಡುತ್ತಿದೆ. ಆದರೂ ಭಾಗದ ಅಭಿವೃದ್ಧಿ ಕಾಣುತ್ತಿಲ್ಲ. ಈ ಭಾಗದ ಸರ್ಕಾರಿ ಶಾಲೆಗಳಲ್ಲಿ 22 ಸಾವಿರ ಶಿಕರ ಹುದ್ದೆಗಳು ಖಾಲಿ ಇವೆ. ಶಿಕ್ಷಣ ಇಲಾಖೆ ಭರ್ತಿ ಮಾಡದೇ ಶಾಲಾ ಮಕ್ಕಳ ಶೈಕ್ಷಣಿಕ ವಲಯಕ್ಕೆ ಕೊಳ್ಳಿ ಇಡುತ್ತಿದೆ. ಆಡಳಿತ ಪದ ಬೇಜವಾಬ್ದಾರಿ ಎದ್ದು ಕಾಣುತ್ತಿದೆ ಎಂದು ದೂರಿದರು.

ಶಿಕ್ಷಣ ಇಲಾಖೆಯ ನಿರ್ಲಕ್ಷ್ಯದಿಂದಲೇ ನಗರದ ಪ್ರಥಮ ದರ್ಜೆ ಕಾಲೇಜಿನ ಮೇಲ್ಛಾವಣಿ ಕುಸಿದು ಬಿದ್ದಿದೆ. ತರಗತಿಯ ನಡೆಯುವಾಗಲೇ ಈ ದುರ್ಘಟನೆ ಸಂಭವಿಸಿದೆ. ಶಾಲಾ ಅಭಿವೃದ್ಧಿಗೆ ಬಳಕೆ ಮಾಡಬೇಕಾದ ಹಣ ಬೀದರ ಮತ್ತು ಕಲಬುರಗಿ ನಗರದ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಸುಮಾರು ತಲಾ 211 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಇದು ಕಲ್ಯಾಣ ಕರ್ನಾಟಕ ಭಾಗದ ದುರಂತ. ಇದರಿಂದ ಕೆಕೆಆರ್‌ಡಿಬಿಯ ಇಂತಹ ಕ್ರಮವನ್ನು ಯುವಕರು, ವಿದ್ಯಾರ್ಥಿಗಳು ಪ್ರಶ್ನೆ ಮಾಡಬೇಕಾಗಿದೆ ಎಂದು ಹೇಳಿದರು.

ಸಾಹಿತಿ ಡಾ.ಅರುಣ ಜೋಳದ ಕೂಡ್ಲಿಗಿ ಅವರು ಎಸ್.ಐ.ಆರ್ ಕುರಿತು ಮಾತನಾಡಿ, ಬೇಡವಾದ ಮತದಾರರನ್ನು ಮತದಾರರ ಪಟ್ಟಿಯಿಂದಲೇ ತೆಗೆಯುವುದಕ್ಕೆ ಈ ಪದ್ಧತಿ ತರಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ನೆಪದಲ್ಲಿ ಕೇಂದ್ರ ಚುನಾವಣಾ ಆಯೋಗ ಲಾಂತರ ಮತದಾರರನ್ನು ಪಟ್ಟಿಯಿಂದಲೇ ಹೊರ ಹಾಕುವುದಕ್ಕೆ ದೊಡ್ಡ ಮಟ್ಟದಲ್ಲಿ ರಾಜಕೀಯ ಷಡ್ಯಂತ್ರ ಮಾಡುತ್ತಿದೆ ಎಂದು ಆರೋಪಿಸಿದರು.

ಡಿವೈಎಫ್ಐ ರಾಜ್ಯಾಧ್ಯೆ ಲವಿತ್ರ ವಸದ ಅಧ್ಯೆತೆ ವಹಿಸಿದ್ದರು. ಚಿಂತಕ ಪ್ರೊ.ಆರ್.ಕೆ.ಹುಡಗಿ, ಎಸ್‌ಎಫ್ಐ ಜಿಲ್ಲಾಧ್ಯಕ್ಷ ಸರ್ವೇಶ ಮಾವಿನಕರ್, ಡಿವೈಎಫ್.ಐ ಜಿಲ್ಲಾ ಸಂಚಾಲಕ ಪ್ರಮೋದ ಪಂಚಾಳ ಇತರರಿದ್ದರು.

ಮಕ್ಕಳ ಶೈಕ್ಷಣಿಕ ಅಭಿವೃದ್ಧಿ ಬಳಕೆ ಮಾಡಬೇಕಾದ ಕೆಕೆಆರ್?ಡಿಬಿ ಅನುದಾನ ವಿಮಾನ ನಿಲ್ದಾಣಗಳಿಗೆ ನೀಡುತ್ತಿರುವುದು ಬೇಸರದ ಸಂಗತಿ. ಶಿಕ್ಷಕರ ಖಾಲಿ ಹುದ್ದೆ ಭರ್ತಿ ಸೇರಿ ರಾಜ್ಯ ಸರ್ಕಾರ ಶೈಕ್ಷಣಿಕ ಕ್ಷೇತ್ರವನ್ನು ಸಂಪೂರ್ಣ ಕಡೆಗಣಿಸಿದೆ.

**– ಎ.ಧನರಾಜ್, ರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿ, ಗಂಗಾವತಿ.**



ಚಿಕ್ಕಮಗಳೂರು ಬಳಿಯ ಕಡೂರು–ಮಂಗಳೂರು ಹೆದ್ದಾರಿಯಲ್ಲಿ ಕಾಫಿ ಸಾಗಿಸುತ್ತಿದ್ದ ಲಾರಿಯೊಂದು ಭಾನುವಾರ ಪಕ್ಕಕ್ಕೆ ಉರುಳಿದೆ, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

# ಬಸವಾದಿ ಶಿವಶರಣರ ಹಿಂದೂ ಸಮಾವೇಶ ತಡೆ ಅಸಾಧ್ಯ: ಗುಂಡುರೆಡ್ಡಿ ಕಮಲಾಪುರೆ

**ಬೀದರ್, ಜೂ. 14:** ಬಸವಾದಿ ಶಿವಶರಣರ ಹಿಂದೂ ಸಮಾವೇಶ ನಿಗದಿತ ದಿನದಂದೇ ಕನ್ನೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಯವರ ನೇತೃತ್ವದಲ್ಲೇ ನಡೆಯುತ್ತದೆ. ಅದನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ. ಜಿಲ್ಲಾಡಳಿತ ಮತ್ತು ಪೊಲೀಸರಿಗೆ ಕಾನೂನು ಸುವ್ಯವಸ್ಥೆ ಕಾಪಾಡುವುದಷ್ಟೇ ಅವರ ಕೆಲಸ. ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಸಭೆ ಸಮಾವೇಶಗಳನ್ನು ನಡೆಸುವ ಅಧಿಕರವಿದೆ. ಅದನ್ನು ನಿರಾಕರಿಸುವಂತಿಲ್ಲ. ನಮಗೂ ನ್ಯಾಯಾಲಯವಿದೆ. ಜಿಲ್ಲಾಡಳಿತ ತಡೆಯೊಡ್ಡಿದರೆ ನ್ಯಾಯಾಲಯದ ಅನುಮತಿ ಪಡೆಯುತ್ತೇವೆ. ಅಧಿಕಾರಿಗಳು ಸ್ವಂತ ನಿರ್ಣಯ ತೆಗೆದುಕೊಳ್ಳಬೇಕೇ ವಿನಹ ಯಾರದೋ ಒತ್ತಡಗಳಿಗೆ ಒಳಗಾಗಿ ಆದೇಶ ನೀಡುವಂತಿಲ್ಲ ಎಂದು ಸಮಾವೇಶ ಸಮಿತಿ ಕಾರ್ಯಾಧ್ಯಕ್ಷ ಗುಂಡು ರೆಡ್ಡಿ ಕಮಲಾಪುರೆ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೊಲೀಸ್ ವರದಿ ಆಧರಿಸಿ ತಹಶೀಲ್ದಾರರು ಸಮಾವೇಶಕ್ಕೆ ತಡೆ ನೀಡಿದ್ದರೂ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯುತ್ತೇವೆ. ಜಿಲ್ಲಾ ಸಚಿವ ಈಶ್ವರ ಖಂಡ್ರೆ ಅವರಿಗೆ ಭೇಟಿ ಆಗುತ್ತೇವೆ. ಸಾಕಷ್ಟು ವಿರೋಧವಿದ್ದರೂ ಮಾತೆ ಮಹಾದೇವಿ ಅವರು ಇಲ್ಲಿ ನಡೆಸಿದ್ದ ಕಲ್ಯಾಣ ಪರ್ವಕ್ಕೆ ಅನುಮತಿ ಸಿಕ್ಕಿತ್ತು. ಆದರೆ, ಈ ಕಾರ್ಯಕ್ರಮಕ್ಕೆ ಸ್ಥಳೀಯರ ಎಲ್ಲರ ಸಹಕಾರವಿದೆ. ಬಸವೇಶ್ವರ ದೇವಸ್ಥಾನದವರೇ ಅವರ ವ್ಯಾಪ್ತಿಯ ಅಕ್ಕಮಹಾದೇವಿ ಕಾಲೇಜಿನ ಆವರಣ ದಲ್ಲಿ ಸಮಾವೇಶ ನಡೆಸಲು ಈಗಾಗಲೇ ಅನುಮತಿ ನೀಡಿದ್ದಾರೆ ಎಂದರು.

ಬಸವಾದಿ ಶಿವಶರಣರ ಹಿಂದೂ ಸಮಾವೇಶದಿಂದ ಬಸವಾದಿ ಶಿವ ಶರಣರು ಎಂಬುದನ್ನು ತೆಗೆದರೆ ಕಾರ್ಯಕ್ರಮ ಮಾಡುವುದಕ್ಕೆ ಅಭ್ಯಂತರ ಇಲ್ಲ ಎಂದು ಕೆಲವರು ವಾದ ಮಾಡಿದ್ದಾರೆ. ಬಸವಣ್ಣನವರನ್ನು ಇವರೇನು ಗುತ್ತಿಗೆ ಪಡೆದಿದ್ದಾರೆಯೇ..? ಬಸವಾದಿ ಶಿವಶರಣರು ಎಲ್ಲ ಜಾತಿ, ಧರ್ಮದವರಿಗೂ ಬೇಕಾದವರು. ಆದ್ದರಿಂದ ಎಲ್ಲರೂ ಕೂಡಿಯೇ ಸಮಾರಂಭದ ಸಿದ್ಧತೆ ಕೈಗೊಳ್ಳುತ್ತಿದ್ದೇವೆ ಎಂದರು.



'ಈಗಾಗಲೇ ನಾಡಿನ ಅನೇಕ ಮಠಾಧೀಶರು ಕಾರ್ಯಕ್ರಮಕ್ಕೆ ಬರುವುದಕ್ಕೆ ಒಪ್ಪಿದ್ದಾರೆ. ಜಿಲ್ಲೆಯ ಕೆಲವರು ಮಾತ್ರ ವಿರೋಧಿಸುತ್ತಿದ್ದಾರೆ. ಎಲ್ಲ ಮಠಾಧೀಶರು ಕಾವಿಬಟ್ಟೆ ಹಾಕುತ್ತಾರೆ. ಪೂಜೆ ಮಾಡುತ್ತಾರೆ. ಅದು ಸನಾತನ ಸಂಸ್ಕೃತಿಯ ಪ್ರತೀಕ ಅಲ್ಲವೇ..? ಹಾಗೆ ನೋಡಿದರೆ, ಕನ್ನೇರಿ ಸ್ವಾಮೀಜಿಯವರು, ಬುದ್ಧ, ಬಸವ, ಅಂಬೇಡ್ಕರರ ತತ್ವದ ಪಾಲನೆ ಮಾಡುವವರಾಗಿದ್ದಾರೆ. ಅವರನ್ನು ವಿರೋಧಿಸುವುದು ಸರಿಯಲ್ಲ ಎಂದರು. ಬಿಜೆಪಿ ಮುಖಂಡ ದೀಪಕ ಗಾಯಕವಾಡ, ಸಂದೀಪ ಪಾಟೀಲ ಉಪಸ್ಥಿತರಿದ್ದರು.

# ಅಂದು ಪಾಳುಬಿದ್ದ ಬಯಲು ಈಗ ಹಸಿರಿನಿಂದ ಸಮೃದ್ಧ



**ಬೀದರ್, ಜೂ. 14:** ತಾಲ್ಲೂಕಿನ ಯದಲಾಪುರ ಸಮೀಪದಲ್ಲಿ ನಾಲ್ಕು ವರ್ಷಗಳ ಹಿಂದೆ ಪಾಳುಬಿದ್ದಿದ್ದ ಬಯಲು ಜಾಗವೀಗ ಹಚ್ಚ ಹಸಿರಿನಿಂದ ಕಂಗೊಳಿಸುತ್ತಿದೆ. ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನ ಗಳ ವಿಶ್ವವಿದ್ಯಾಲಯದ ಹಿಂಭಾಗದ 15 ಎಕರೆ ಜಾಗ ಪಾಳುಬಿದ್ದಿತ್ತು. ಈಗ ಅದು ಹಸಿರಿನ ಹೊದಿಕೆ ಹೊದ್ದುಕೊಂಡಿದ್ದು, ಈ ಹಿಂದೆ ಇದು ಬೆಂಗಾಡು ಪ್ರದೇಶವಾಗಿತ್ತೇ ಎಂದು ಆಶ್ಚರ್ಯಪಡುವಂತೆ ಬದಲಾಗಿದೆ.

ಬೀದರ್ ಜಿಲ್ಲಾ ಪಂಚಾಯಿತಿಯ ಸಾಮಾಜಿಕ ಅರಣ್ಯೀಕರಣ ವಿಭಾಗ ಬೀದರ್ ವಲಯವು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನರೇಗಾ) 2022ರಲ್ಲಿ ಮೂರು ಸಾವಿರ ಗುಂಡಿಗಳನ್ನು ತೋಡಿ, ಇಷ್ಟೇ ಸಂಖ್ಯೆಯ ಸಸಿಗಳನ್ನು ನೆಟ್ಟಿತ್ತು. ಸುಸ್ಥಿರ ಅರಣ್ಯೀಕರಣ ಯೋಜನೆಯಡಿ ವಿಶೇಷ ಮುತುವರ್ಜಿ ವಹಿಸಿ ಅವುಗಳಿಗೆ ನೀರುಣಿಸಿ ಬೆಳೆಸಿದ ಪರಿಣಾಮ ನಾಲ್ಕು ವರ್ಷಗಳಲ್ಲಿ ಸಸಿಗಳು ಬೆಳೆದು ದೊಡ್ಡದಾಗಿವೆ. ಉತ್ತಮ ಫಲಿತಾಂಶ ಬಂದದ್ದರಿಂದ ಕಳೆದ ವರ್ಷ ಪುನಃ ಒಂದು ಸಾವಿರ ಸಸಿಗಳನ್ನು ಇಲ್ಲಿ ನೆಡಲಾಗಿದೆ. ಅರಳಿ, ಬೇವು, ನೇರಳೆ, ಹುಣಸೆ, ಬಸರಿ, ಟೀಕ್ ಸೇರಿದಂತೆ ಹಲವು ಜಾತಿಯ ಸಸಿಗಳಿಂದ ತಂಗಾಳಿ ತೇಲಿ ಬರುತ್ತಿದೆ.

15 ಎಕರೆ ಸಂಪೂರ್ಣ ಪ್ರದೇಶ ಏನೂ ಬೆಳೆಯಲಾರದ ಸ್ಥಿತಿಯಲ್ಲಿತ್ತು. ಆದರೆ, ನರೇಗಾ ಅಡಿ ಕೆಲಸ ಕೈಗೆತ್ತಿಕೊಂಡು, ಸಸಿಗಳನ್ನು ಬೆಳೆಸಿ, ಜತನದಿಂದ ಪೋಷಿಸಿದ ಪರಿಣಾಮ ಉತ್ತಮ ಫಲಿತಾಂಶ ಬಂದಿದೆ. ನೆಲದಲ್ಲಿ ತೇವಾಂಶ ಕೂಡ ಸಾಕಷ್ಟು ಹೆಚ್ಚಾಗಿದೆ. ವಿವಿಧ ಬಗೆಯ ಪಕ್ಷಿಗಳಿಗೂ ಆಶ್ರಯ ತಾಣವಾಗಿದೆ' ಎನ್ನುತಾರೆ ಆರ್‌ಎಫ್ಒ ಶಿವಕುಮಾರ ರಾಠೋಡ್. ಶಿವಕುಮಾರ ಅವರು ಈ ಹಿಂದೆ ಬೀದರ್ ಅರಣ್ಯ ವಲಯದ ಆರ್‌ಎಫ್ಒ ಆಗಿದ್ದರು. ಇವರ ಅವಧಿಯಲ್ಲೇ ಯೋಜನೆ ಕಾರ್ಯಗೊಂಡಿತು. ಸದ್ಯ ಅವರು ಬಸವಕಲ್ಯಾಣದಲ್ಲಿ ಆರ್‌ಎಫ್ಒ ಆಗಿ ಕೆಲಸ ನಿರ್ವಹಿಸುತ್ತಿದ್ದಾರೆ. ನರೇಗಾ ಯೋಜನೆಯಡಿ ಇಡೀ ಪ್ರದೇಶದಲ್ಲಿ ಬದುಗಳನ್ನು ನಿರ್ಮಿಸುವ ಯೋಜನೆಯೂ ಹೊಂದಲಾಗಿದೆ ಎಂದು ಜಿ.ಪಂ ಸಿಇಒ ಡಾ.ಗಿರೀಶ್ ಬದೋಲೆ ತಿಳಿಸಿದ್ದಾರೆ.

# ಸ್ವಕ್ಷೇತ್ರ ಕೊರಟಗೆರೆಗೆ ಭೇಟಿನೀಡಿದ ಡಿಸಿಎಂ ಪರಂಗೆ ಅದ್ದೂರಿ ಸ್ವಾಗತ



**ತುಮಕೂರು, ಜೂ. 14:** ಉಪಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ಮೊದಲ ಬಾರಿಗೆ ತಮ್ಮ ಸ್ವಕ್ಷೇತ್ರ ತುಮಕೂರಿನ ಕೊರಟಗೆರೆಗೆ ಆಗಮಿಸಿದ ಡಾ. ಜಿ. ಪರಮೇಶ್ವರ ಅವರಿಗೆ ಕ್ಷೇತ್ರದ ಜನತೆ, ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಅದ್ದೂರಿ ಸ್ವಾಗತ ಕೋರಿದ್ದಾರೆ. ಅನಾರೋಗ್ಯದ ಸಮಸ್ಯೆ ಇದ್ದರೂ ಕ್ಷೇತ್ರದ ಜನರ ಮೇಲಿನ ಪ್ರೀತಿಗಾಗಿ ಡಾ.ಜಿ.ಪರಮೇಶ್ವರ್ ಅವರು ಇಂದು ಕೊರಟಗೆರೆ ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮಕ್ಕಾಗಿ ಕೊರಟಗೆರೆ ಬಸ್ ನಿಲ್ದಾಣಕ್ಕೆ ಆಗಮಿಸಿದ ಡಿಸಿಎಂ ಪರಮೇಶ್ವರ್ ಅವರನ್ನು ತೆರೆದ ವಾಹನದಲ್ಲಿ ಜೂನಿಯರ್ ಕಾಲೇಜು ಮೈದಾನದವರೆಗೂ ಮೆರವಣಿಗೆಯ ಮೂಲಕ ಕರೆತರಲಾಯಿತು. ಮೆರವಣಿಗೆಯ ಮಾರ್ಗದುದ್ದಕ್ಕೂ ಅಭಿಮಾನಿಗಳು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಕ್ರೇನ್ ಮುಖಾಂತರ ಬೃಹತ್ ಗಾತ್ರದ ಸೇಬಿನ ಹಾರ, ಮಿಠಾಯಿ ಹಾರ ಹಾಗೂ ವಿಶೇಷವಾಗಿ ಮೈಸೂರ್ ಪಾಕ್ನಿಂದ ಸಿದ್ಧಪಡಿಸಲಾಗಿದ್ದ ಬೃಹತ್ ಹಾರಗಳನ್ನು ಹಾಕುವ ಮೂಲಕ ಅಭಿಮಾನಿಗಳು ತಮ್ಮ ನಾಯಕನಿಗೆ ಗ್ರಾಂಡ್ ವೆಲ್ ಕಂ ಮಾಡಿದರು.ಸರ್ಕಾರಿ ಜೂನಿಯರ್ ಕಾಲೇಜು ಆವರಣದಲ್ಲಿ ನಡೆದ ಅಭಿನಂದನಾ ವೇದಿಕೆ ಕಾರ್ಯಕ್ರಮದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿದ್ದರು.

# ಪ್ಲಾಸ್ಟಿಕ್ ಬಳಕೆ ದುಷ್ಪರಿಣಾಮ ಜಾಗೃತಿ



ಕಲಬುರಗಿ ವಿಶ್ವ ಪರಿಸರ ದಿನದ ಅಂಗವಾಗಿ ಕಲಬುರಗಿಯ ಸಾರಥಿ ಚಾರಿಟೇಬಲ್ ಸೊಸೈಟಿ ಹಾಗೂ ಎಸಿಟಿ–ಎನ್‌ವಿ ಇಂಟರ್‌ನ್ಯಾಷನಲ್ ಶಾಲೆ ಸಹಯೋಗದಲ್ಲಿ ಸಸಿ ನೆಡುವ, ಪರಿಸರ ಜಾಗೃತಿ ಅಭಿಯಾನ ನಡೆಯಿತು.

**ಕಲಬುರಗಿ, ಜೂ. 14:** ವಿಶ್ವ ಪರಿಸರ ದಿನದ ಅಂಗವಾಗಿ ಕಲಬುರಗಿಯ ಸಾರಥಿ ಚಾರಿಟೇಬಲ್ ಸೊಸೈಟಿ ಹಾಗೂ ಎಸಿಟಿ–ಎನ್‌ವಿ ಇಂಟರ್‌ನ್ಯಾಷನಲ್ ಶಾಲೆ ಸಹಯೋಗ ದಲ್ಲಿ ಸಸಿ ನೆಡುವ, ಪರಿಸರ ಜಾಗೃತಿ ಅಭಿಯಾನ ನಡೆಯಿತು.

ಪರಿಸರ ಸಂರಕ್ಷಣೆ ಮತ್ತು ಹಸಿರು ಪರಿಸರ ನಿರ್ಮಾಣದ ಉದ್ದೇಶದಿಂದ ನಡೆದ ಈ ಕಾರ್ಯ ಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು, ಸಿಬ್ಬಂದಿ ಹಾಗೂ ಸಂಸ್ಥೆಯ ಸದಸ್ಯರು ಉತ್ಸಾಹದಿಂದ ಭಾಗವಹಿಸಿದ್ದರು.

ಶಾಲಾ ಆವರಣ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಡುವ ಮೂಲಕ ಪರಿಸರದ ಮಹತ್ವ ಸಾರಲಾಯಿತು.ವಿದ್ಯಾರ್ಥಿಗಳು ಸಮೀಪದ ಮನೆಗಳಿಗೆ ಭೇಟಿ ನೀಡಿ ಪ್ಲಾಸ್ಟಿಕ್ ಬಳಕೆಯಿಂದ ಉಂಟಾಗುವ ದುಷ್ಪರಿಣಾಮ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಬಟ್ಟೆ ಹಾಗೂ ಕಾಗದದ ಚೀಲಗಳಂತಹ ಪರಿಸರ ಸ್ನೇಹಿ ಪರ್ಯಾಯ ಬಳಸುವಂತೆ ಮನವಿ ಮಾಡಿ, ಪರಿಸರ ರಕ್ಷಣೆಗೆ ಪ್ರತಿ ಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.ಸಾರಥಿ ಚಾರಿಟೇಬಲ್ ಸೊಸೈಟಿ ಅಧ್ಯಕ್ಷ ರಾಮ್ ಶಾನಭೋಗ್, ಸದಸ್ಯರಾದ ಅಭಿಜಿತ್ ಪಡಶೆಟ್ಟಿ, ಜಗದೀಶ್ ಗಾಜರೆ, ಸೌಮ್ಯ ಗಾಜರೆ ಹಾಗೂ ಜಾಹ್ನವಿ ಶಾನಭೋಗ್ ಇದ್ದರು.

ಶಾಲೆಯ ಪ್ರಾಚಾರ್ಯ ಪಂಕಜ್ ದಾಸ್?, ವ್ಯವಸ್ಥಾಪನಾ ಸಮಿತಿ ಸದಸ್ಯ ಸುಹಾಸ್ ಖಣಗೆ, ಡಾ.ಗಿರೀಶ್ ಗಲಗಲಿ, ಟ್ರಸ್ಟಿ ತುಷಾರ್ ದೇಶಪಾಂಡೆ ಹಾಗೂ ಸಮೀರ್ ದೇಶಪಾಂಡೆ ಭಾಗವಹಿಸಿದ್ದರು. ಪರಿಸರ ಸಂರಕ್ಷಣೆ, ಹಸಿರು ವಾತಾವರಣ ನಿರ್ಮಾಣ ಹಾಗೂ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುವ ಅಗತ್ಯ ಒತ್ತಿ ಹೇಳಿದ್ದು, ಆರೋಗ್ಯಕರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ಇಂತಹ ಕಾರ್ಯಕ್ರಮಗಳು ಅತ್ಯಂತ ಅಗತ್ಯ ಎಂಬ ಅಭಿಪ್ರಾಯ ವ್ಯಕ್ತವಾಯಿತು.

# ಮಾಜಿ ಸಿಎಂ ಡಿವಿ ಕೃತಿ ನೀಡಿ ಡಾ. ಪೆರ್ಲ ಸನ್ಮಾನ




**ಕಲಬುರಗಿ, ಜೂ.14:** ಮಾಜಿ ಮುಖ್ಯಮಂತ್ರಿಗಳಾದ ಡಿ.ವಿ ಸದಾನಂದ ಗೌಡ ಅವರಿಗೆ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ. ಸದಾನಂದ ಪೆರ್ಲ ಕಲಬುರಗಿಯಲ್ಲಿ ಹಾರ್ದಿಕವಾಗಿ ಸನ್ಮಾನಿಸಿದರು.

ಜೂನ್ 13ರಂದು ಕಲಬುರಗಿಗೆ ಕಾರ್ಯಕ್ರಮ ನಿಮಿತ್ತ ಆಗಮಿಸಿದ ಸದಾನಂದ ಗೌಡ ಅವರಿಗೆ ಶಾಲು ಹಾಗೂ "ಸ್ವಾತಂತ್ರ್ಯದ ಅಮೃತ ಹೆಜ್ಜೆ ಗಳು"ಡಾ. ಸದಾನಂದ ಪೆರ್ಲ ಅವರ ಸಂಪಾದನಾ ಕೃತಿ ನೀಡಿ ಗೌರವಿಸಲಾಯಿತು. ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಡಾ. ಬಿ.ಜಿ.ಪಾಟೀಲ್ ಹೋಟೆಲ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ನರಸಿಂಹ ಮೆಂಡನ್ ಬಿಜೆಪಿ ಹಿರಿಯ ಮುಖಂಡರಾದ ಶರಣಪ್ಪ ತಳವಾರ್ ಇದ್ದರು.

# ಆನೆಗಳ ಉಪಟಳ: ರೈಲ್ವೇ ಬ್ಯಾರಿಕೇಡ್, ಸೋಲಾರ್ ವಿದ್ಯುತ್ ಬೇಲಿ ಅಳವಡಿಕೆಯಿಂದ ಪ್ರಯೋಜನವಾಗಿಲ್ಲ– ರೈತರ ಅಳಲು



**ಬೇಲೂರು, ಜೂ.14:** ಮಲೆನಾಡು ಭಾಗದಲ್ಲಿ ಕಾಡಾನೆಗಳ ಉಪಟಳಕ್ಕೆ ಮುಕ್ತಿ ಸಿಗುವ ಯಾವ ಲಕ್ಷಣಗಳೂ ಕಾಣುತ್ತಿಲ್ಲ. ಇದಕ್ಕೆ ಒಂದಷ್ಟು ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರೈತರು, ಅರಣ್ಯ ಇಲಾಖೆ ರೈಲ್ವೆ ಬ್ಯಾರಿಕೇಡ್ ಅಳವಡಿಕೆ, ತೋಟಗಳ ಸುತ್ತಲೂ ಸೋಲಾರ್ ವಿದ್ಯುತ್ ಬೇಲಿ ಅಳವಡಿಸಿದರೂ ಪ್ರಯೋಜನ ಇಲ್ಲ ಎನ್ನುವಂತಾಗಿದೆ.ಆನೆಗಳು ಸೋಲಾರ್ ಬೇಲಿಗಳ ಮೇಲೆ ಒಣಗಿದ ಮರಗಳನ್ನು ಉರುಳಿಸಿ ಬೇಲಿದಾಟಿ ತೋಟಕ್ಕೆ ಲಗ್ಗೆ ಇಡುವ ಚಾಣಾಕ್ಷತನ ತೋರುತ್ತಿವೆ.

ಕಾಫಿತೋಟಗಳಿಗೆ ಅಳವಡಿಸಿದ್ದ ಸೋಲಾರ್ ವಿದ್ಯುತ್ ತಂತಿ ಬೇಲಿ ಮೇಲೆ ಒಣಗಿದ ಗಿಡ ಮರಗಳನ್ನು ಹಾಕಿ ಬೇಲಿಯನ್ನು ನೆಲಕ್ಕುರುಳಿಸಿ ಒಂದು ತೋಟದಿಂದ ಮತ್ತೊಂದು ತೋಟಕ್ಕೆ, ಮುಖ್ಯ ರಸ್ತೆಗಳತ್ತ ಆನೆಗಳ ಹಿಂಡು ತೆರಳುತ್ತಿವೆ. ತಾಲೂಕಿನ ಅರೇಹಳ್ಳಿ ಹೋಬಳಿಯ ಗ್ರಾಮಗಳಲ್ಲಿ ಇದು ಸಾಮಾನ್ಯ ಎನ್ನುವಂತಾಗಿದ್ದು, ಕಾಡಾನೆಗಳ ಈ ನಡೆಯಿಂದ ರೈತರು, ಬೆಳೆಗಾರರು, ಕೂಲಿ ಕಾರ್ಮಿಕರು ಜೀವ ಕೈಲಿಡಿದು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ತಾಲೂಕಿನ ಮಲೆನಾಡು ಭಾಗದ ಸಾಕಷ್ಟು ಗ್ರಾಮಗಳಲ್ಲಿ ಕಳೆದ ಐದಾರು ವರ್ಷಗಳಿಂದೀಚೆಗೆ ಕಾಡಾನೆಗಳ ಉಪಟಳ ಹೆಚ್ಚುತ್ತಲೇ ಇದೆ. ಮೊದಲೆಲ್ಲ ಒಂದು ಎರಡು ಆನೆಗಳಿದ್ದವು. ಆದರೆ ಕಳೆದ ಎರಡು, ಮೂರು ವರ್ಷಗಳಿಂದೀಚೆಗೆ ಮೂರರಿಂದ ನಾಲ್ಕು ಗುಂಪುಗಳಲ್ಲಿ ಕಾಡಾನೆಗಳ ಹಿಂಡು ತಾಲೂಕಿನಲ್ಲಿ ಬೀಡು–ಬಿಟ್ಟು ಬೆಳೆ ನಾಶ ಪಡಿಸುತ್ತಿರುವುದರಿಂದ ರೈತರಿಗೆ ಅಪಾರ ನಷ್ಟವಾಗಿದೆ. ಕೆಲ ಕಾಡಾನೆಗಳು ಮನುಷ್ಯರ ಮೇಲೂ ದಾಳಿ ನಡೆಸಿ ಸಾಕಷ್ಟು ಪ್ರಾಣ ಹಾನಿ ಉಂಟು ಮಾಡಿರುವ ಘಟನೆಗಳು ಇವೆ. ಇದಲ್ಲದೇ ಹಗಲು–ರಾತ್ರಿ ಎನ್ನದೆ ಎಲ್ಲೆಂದರಲ್ಲಿ ಗಜಪಡೆ ಓಡಾಡಲಾರಂಭಿಸಿ ಜನರ ನಿದ್ದೆ ಕೆಡಿಸಿವೆ.

ಮೊದಲೆಲ್ಲ ಸಂಜೆಯಾಗುತಿದ್ದಂತೆಯೇ ಕಾಡು ಮತ್ತು ತೋಟಗಳಿಂದ ಹೊರ ಬರುತಿದ್ದ ಹಿಂಡು ಇತ್ತೀಚಿನ ದಿನಗಳಲ್ಲಿ ಹಗಲಿನಲ್ಲೇ ಜನರ ಮುಂದೆಯೇ ರಾಜಾರೋಷವಾಗಿ ಓಡಾಡುವುದಲ್ಲದೆ, ಒಂದು ತೋಟದಿಂದ ಮತ್ತೊಂದು ತೋಟಕ್ಕೆ ಲಗ್ಗೆ ಇಡುತ್ತಿವೆ, ಸರ್ಕಾರ ಕಾಡಾನೆಗಳಿಂದ ಬೆಳೆ ಹಾಗೂ ಮಾನವ–ಆನೆ ಸಂಘರ್ಷ ತಡೆಗಟ್ಟಲು ರೈತರು ಮತ್ತು ಬೆಳೆಗಾರರಿಗೆ ಸಬ್ಸಿಡಿ ಆಧಾರದಲ್ಲಿ ಸೋಲಾರ್ ವಿದ್ಯುತ್ ಬೇಲಿ ಅಳವಡಿಸಿಕೊಳ್ಳಲು ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ಮಲೆನಾಡು ಭಾಗದ ಅರೇಹಳ್ಳಿ, ಬಿಕ್ಕೋಡು ಹಾಗೂ ಕಸಬಾ ಬಿ ಹೋಬಳಿಗಳಲ್ಲಿ ರೈತರುತೋಟ, ಹೊಲ, ಗದ್ದೆಗಳಿಗೆ ಸೋಲಾರ್ ಬೇಲಿ ಅಳವಡಿಸಿಕೊಂಡು ಕೆಲ ತಿಂಗಳು ಕಾಡಾನೆಗಳ ಉಪಟಳದಿಂದ ದೂರವಿದ್ದರು. ಆದರೆ ಕಾಡಾನೆಗಳು ಮನುಷ್ಯರಿಗಿಂತ ಬುದ್ದಿವಂತರು ಎಂಬುದನ್ನು ಸಾಭೀತುಪಡಿಸಿವೆ. ಇತ್ತೀಚೆಗಷ್ಟೇ ಆನೆಯೊಂದು ಅರೇಹಳ್ಳಿ ಸಮೀಪದ ಹೊಸಮನೆ ಗ್ರಾಮದಲ್ಲಿ ಸೋಲಾರ್ ತಂತಿಬೇಲಿ ಮೇಲೆ ಕಾಫಿ ಹಾಗೂ ಇತರೆ ಗಿಡಗಳನ್ನು ಹಾಕಿ ಬೇಲಿ ದಾಟಿದ್ದಲ್ಲದೆ, ಪಕ್ಕದ ತೋಟದಲ್ಲಿದ್ದ ಮನುಷ್ಯರು ಮತ್ತು ನಾಯಿಯನ್ನು ಅಟ್ಟಾಡಿಸಿತ್ತು. ಈಗ ಇದೇ ಆನೆ ಲಿಂಗಾಪುರ–ಉದೇವಾರ–ಹುಲ್ಲೇಮಕ್ಕಿ–ಕಡೆಗರ್ಜೆ, ಗುಡ್ಡೇಟೆ ಎಸ್ಟೇಟ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮತ್ತೆ ಪ್ರತ್ಯಕ್ಷವಾಗಿದ್ದು, ರೈತರು, ಬೆಳೆಗಾರರು ಹಾಗೂ ಕೂಲಿ ಕಾರ್ಮಿಕರಲ್ಲಿ ಆತಂಕ ಮೂಡಿಸಿದೆ. ಪ್ರಾರಂಭದಲ್ಲಿ ಸೋಲಾರ್ ವಿದ್ಯುತ್ ಬೇಲಿಯನ್ನು ದಾಟಲು ಹಿಂದೇಟು ಹಾಕುತ್ತಿದ್ದ ಆನೆಗಳು ಈಗ ತಂತಿಯಲ್ಲಿ ವಿದ್ಯುತ್ ಇದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಿ ನಂತರ ಬೇಲಿ ದಾಟುತ್ತಿರುವುದು ರೈತರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ. ಇನ್ನಾದರೂ ಸರ್ಕಾರ, ಅರಣ್ಯ ಇಲಾಖೆ ಅಧಿಕಾರಿಗಳು ಕಾಡಾನೆಗಳನ್ನು ಶಾಶ್ವತವಾಗಿ ದೂರದ ಕಾಡಿಗಟ್ಟಲು ಮುಂದಾಗಬೇಕು ಎಂದು ಈ ಭಾಗದ ರೈತರು ಒತ್ತಾಯಿಸಿದ್ದಾರೆ.

# ಕೋಟೆ ಗೋಡೆ ಬಿರುಕು: ಗೋಡೆಯಲ್ಲಿರುವ ಏಕಶಿಲಾ ಶಾಸನ ಬೀಳುವ ಅಪಾಯ

**ರಾಯಚೂರು, ಜೂ. 14:** ಕೇಂದ್ರ ಬಸ್ ನಿಲ್ದಾಣ ಸಮೀಪ, ಇಂದಿರಾ ಕ್ಯಾಂಟೀನ್ ಮುಂಭಾಗ ದಲ್ಲಿರುವ ಕೋಟೆ ಗೋಡೆ ಬಿರುಕು ಬಿಟ್ಟಿದ್ದು, ಯಾವುದೇ ಸಂದರ್ಭದಲ್ಲಿ ಉರುಳುವ ಅಪಾಯ ಎದುರಾಗಿದೆ. ಕೋಟೆ ಗೋಡೆಯಲ್ಲಿ ಏಕಶಿಲಾ ಶಾಸನವೂ ಇದ್ದು ಈ ಅಪೂರ್ವವಾದ ಶಾಸನವೂ ಹಾಳಾಗುವ ಭೀತಿಯಿದೆ.

ಪಕ್ಕದಲ್ಲೇ ಪಾದಚಾರಿ ಮಾರ್ಗ ಇದೆ. ಇದರ ಮೇಲೆ ಬೈಕ್ ಮೆಕ್ಯಾನಿಕ್‌ಗಳು ಹಾಗೂ ಬೀದಿಬದಿ ವ್ಯಾಪಾರಿಗಳು ವ್ಯಾಪಾರ ನಡೆಸಿದ್ದಾರೆ. ಜೋರಾಗಿ ಮಳೆ ಅಬ್ಬರಿಸಿದರೆ ಕೋಟೆ ಗೋಡೆ ಕುಸಿದು ಬೀಳಲಿದೆ. ಕೋಟೆ ಗೋಡೆ ದುರಸ್ತಿ ಮಾಡುವಂತೆ ನಗರದ ಸಾಮಾಜಿಕ ಸಂಘಟನೆಗಳು ಜಿಲ್ಲಾಡಳಿತ ಕಚೇರಿ ಮೂಲಕ ಪುರಾತತ್ವ ಇಲಾಖೆಗೆ ಮನವಿ ಪತ್ರ ಸಲ್ಲಿಸಿವೆ. ಕಲಬುರಗಿಯಲ್ಲಿರುವ ರಾಜ್ಯ ಪುರಾತತ್ವ ಇಲಾಖೆ ಕಚೇರಿಗೂ ಮನವಿಪತ್ರ ಕಳಿಸಿವೆ. ಆದರೆ, ಅಧಿಕಾರಿಗಳಿಂದ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಬೀದಿ ವ್ಯಾಪಾರಿಗಳು ಹೇಳುತ್ತಾರೆ.

15 ವರ್ಷಗಳ ಹಿಂದೆ ರಾಯಚೂರಿನಲ್ಲಿ ಗುಬ್ಬೇರ ಬೆಟ್ಟದ ಮೇಲಿನ ಸ್ಮಾರಕ ಶಿಥಿಲಗೊಂಡು ಬಂಡೆಗಲ್ಲೊಂದು ಉರುಳಿ ಏಳು ಜನ ಸಾವಿಗೀಡಾಗಿದ್ದರು. ಅಂದು ಜಿಲ್ಲಾಧಿಕಾರಿಯಾಗಿದ್ದ ಜಿ.ಕುಮಾರ ನಾಯಕ ಅವರೇ ಸ್ಥಳಕ್ಕೆ ಹೋಗಿ ಭೇಟಿ ಕೊಟ್ಟಿದ್ದರು. ಈ ಘಟನೆಯನ್ನು ಜಿಲ್ಲೆಯ ಜನ ಇನ್ನೂ ಮರೆತಿಲ್ಲ.

ಜಿಲ್ಲಾಡಳಿತವೇ ಸ್ಮಾರಕ ರಕ್ಷಣಾ ಸಮಿತಿ ರಚಿಸಿದೆ. ಆದರೆ, ನಿಯಮಿತವಾಗಿ ಸಭೆಗಳನ್ನು ಕರೆಯುವುದಿಲ್ಲ. ಹೀಗಾಗಿ ಜನ ಸಾಮಾನ್ಯರ ಸಮಸ್ಯೆಗಳು ಜಿಲ್ಲಾಡಳಿತದ ಗಮನಕ್ಕೆ ಬರುತ್ತಿಲ್ಲ. ಪುರಾತತ್ವ ಇಲಾಖೆಯ ಕಚೇರಿಯಲ್ಲಿ ಅಧಿಕಾರಿಗಳೇ ಇಲ್ಲ. ಅಪರೂಪಕ್ಕೆ ಬಂದು ಹೋಗುವ ಅಧಿಕಾರಿ ಜನರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ' 'ಹಿಂದಿನ ನಗರಸಭೆ ಮೂಲಕ ರೂ.35 ಲಕ್ಷ ಕೊಟ್ಟು ಕೋಟೆ ಮೇಲೆ ಸೋಲಾರ್ ದೀಪಗಳನ್ನು ಅಳವಡಿಸಲಾಗಿತ್ತು. ಪುರಾತತ್ವ ಇಲಾಖೆಯ ಅಧಿಕಾರಿಗಳು ಕಾವಲು ಇಡದ ಕಾರಣ ಕಳ್ಳರು ಅದರ ಬ್ಯಾಟರಿಗಳನ್ನೇ ಕದ್ದೊಯ್ದರು. ನಂತರ ನಗರಸಭೆಯೇ ನೇರವಾಗಿ ವಿದ್ಯುತ್ ಸಂಪರ್ಕ ಒದಗಿಸಿತು



ಎಂದು ನಗರಸಭೆ ಮಾಜಿ ಸದಸ್ಯ ಜಯಣ್ಣ ಬೇಸರ ವ್ಯಕ್ತಪಡಿಸುತ್ತಾರೆ.

ನಗರದಲ್ಲಿರುವ ಸ್ಮಾರಕಗಳ ಅಭಿವೃದ್ಧಿಗೆ ಎಲ್ಲ ಬಗೆಯ ನೆರವು ನೀಡಲು ಕೆಲವು ಸಂಸ್ಥೆಗಳು ಆಸಕ್ತಿ ಹೊಂದಿವೆ. ಆದರೆ, ಸಾರ್ವಜನಿಕರ ಸಹಕಾರ ಪಡೆದು ಅಭಿವೃದ್ಧಿಗೆ ಅಧಿಕಾರಿಗಳು ಮುಂದಾಗುತ್ತಿಲ್ಲ ಎಂದು ಹೇಳುತ್ತಾರೆ0. ಇಂದಿರಾ ಕ್ಯಾಂಟೀನ್ ಬಳಿ ಕೋಟೆ ಗೋಡೆ ಬಿರುಕು ಬಿಟ್ಟಿರುವುದು ಇಲಾಖೆಯ ಗಮನಕ್ಕೆ ಇದೆ. ಕೋಟೆ ಪಕ್ಕದಲ್ಲಿ ಅಂಗಡಿ ಇಟ್ಟುಕೊಂಡಿರುವ ಮೆಕ್ಯಾನಿಕ್‌ಗೆ ಅಲ್ಲಿಂದ ಜಾಗ ಖಾಲಿ ಮಾಡುವಂತೆ ನೋಟಿಸ್ ಕೊಡಲಾಗಿದೆ ಎಂದು ರಾಜ್ಯ ಪುರಾತತ್ವ ಇಲಾಖೆಯ ಕ್ಯೂರೇಟರ್ ಶಿವಪ್ರಕಾಶ ತಿಳಿಸುತ್ತಾರೆ.

ರಾಯಚೂರಿನ ಐತಿಹಾಸಿಕ ಸ್ಮಾರಕ ಏಕ್ ಮೀನಾರ ಪಕ್ಕದಲ್ಲೇ ಬೋರ್‌ವೆಲ್ ಕೊರೆಯಿಸಿದರೂ ಅಧಿಕಾರಿಗಳು ಮೌನವಹಿಸಿದರು. ಏಕಶಿಲಾ ಶಾಸನದ ಮೇಲಿನ ಕೋಟೆ ಗೋಡೆ ಬೀಳುವ ಹಂತದಲ್ಲಿದ್ದರೂ ಅಧಿಕಾರಿಗಳು ಬಡಪಾಯಿಗೆ ನೋಟಿಸ್ ಕೊಟ್ಟು ಹೊಣೆಗಾರಿಕೆ ಯಿಂದ ತಪ್ಪಿಸಿಕೊ ಳ್ಳುವ ಪ್ರಯತ್ನಕ್ಕೆ ಸಾಮಾಜಿಕ ಸಂಘಟನೆಗಳ ಮುಖಂಡರು ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ.

# ಕತಾರ್ ಮಧ್ಯವರ್ತಿಗಳು ಟೆಹ್ರಾನ್‌ಗೆ ಆಗಮಿಸುತ್ತಿದ್ದಂತೆ ಶಾಂತಿ ಒಪ್ಪಂದಕ್ಕೆ ಇರಾನ್ ಸಹಿ: ಟ್ರಂಪ್

**ವಾಷಿಂಗ್ಟನ್, ಜೂನ್ 14:** ಇರಾನ್ ಜೊತೆಗಿನ ಶಾಂತಿ ಒಪ್ಪಂದಕ್ಕಾಗಿ ಹೊಸ ಚೌಕಟ್ಟಿಗೆ ಸಹಿ ಹಾಕುವ ಯೋಜನೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾನುವಾರ ದೃಢಪಡಿಸಿದ್ದಾರೆ, ಇದು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಸಂಭಾವ್ಯ ಪ್ರಮುಖ ಪ್ರಗತಿಯಾಗಿದೆ ಎಂದು ಬಣ್ಣಿಸಿದ್ದಾರೆ. ಒಪ್ಪಂದಕ್ಕೆ ಭಾನುವಾರ "ಸಹಿ ಹಾಕಲು ನಿರ್ಧರಿಸಲಾಗಿದೆ" ಎಂದು ಟ್ರಂಪ್ ಹೇಳಿದರು ಮತ್ತು "ಎಲ್ಲವೂ ಶಾಂತವಾದಾಗ, ನಾವು ಹೋಗಿ ಪ್ರಬಲವಾದ, ಮುಳುಗಿದ ಗ್ರಾನೈಟ್ ಪರ್ವತಗಳ ಅಡಿಯಲ್ಲಿ ಆಳವಾಗಿ ಪರಮಾಣು ಧೂಳನ್ನು ಹೂತುಹಾಕುತ್ತೇವೆ" ಎಂದು ಹೇಳಿದರು. ಇರಾನ್ ತನ್ನ ಪರಮಾಣು ಕಾರ್ಯಕ್ರಮವನ್ನು ಅಭಿವೃದ್ಧಿಪಡಿಸಲು ದಶಕಗಳನ್ನು ಕಳೆದಿದೆ ಆದರೆ ಅದು ಕೇವಲ ಶಾಂತಿಯುತ ಇಂಧನ ಉದ್ದೇಶಗಳಿಗಾಗಿ ಮಾತ್ರ ಎಂದು ಅದು ನಿರಂತರವಾಗಿ ಹೇಳುತ್ತಿದೆ. ಹೆಚ್ಚುತ್ತಿರುವ ದೇಶೀಯ ಇಂಧನ ಬೇಡಿಕೆಯನ್ನು ಪೂರೈಸಲು ಮತ್ತು ತೈಲ ಬಳಕೆಯನ್ನು ಕಡಿಮೆ ಮಾಡಲು ಹೆಚ್ಚುವರಿ ಪರಮಾಣು ವಿದ್ಯುತ್ ಸ್ಥಾವರಗಳನ್ನು ನಿರ್ಮಿಸುವ ಯೋಜನೆಗಳನ್ನು ದೇಶವು ರೂಪಿಸಿದೆ, ಇದು ಹೆಚ್ಚಿನ ಕಚ್ಚಾ ರಫ್ತುಗಳಿಗೆ ಅವಕಾಶ ನೀಡುತ್ತದೆ.

ಪರಮಾಣು ವಿದ್ಯುತ್ ಸ್ಥಾವರಗಳು ಯುರೇನಿಯಂ ಅನ್ನು ಇಂಧನವಾಗಿ ಅವಲಂಬಿಸಿವೆ. ವಿಶ್ವಸಂಸ್ಥೆಯ ಪರಮಾಣು ಕಾವಲು ಸಂಸ್ಥೆಯಾದ ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ ಪ್ರಕಾರ, ಇರಾನ್ ಯುರೇನಿಯಂ ಪುಷ್ಟೀಕರಣ ಸಾಮರ್ಥ್ಯಗಳನ್ನು ಹೊಂದಿದ್ದು, ಇದು ಪರಮಾಣು-ಶಸ್ತ್ರಾಸ್ತ್ರೇತರ ರಾಜ್ಯಗಳಲ್ಲಿ ಅಸಾಮಾನ್ಯವಾಗಿದೆ, ಇದು ಅದರ ಕಾರ್ಯಕ್ರಮದ ಸ್ವರೂಪದ ಬಗ್ಗೆ ಅಂತರರಾಷ್ಟ್ರೀಯ ಕಳವಳವನ್ನು ಹುಟ್ಟುಹಾಕುತ್ತದೆ. ಸಮಾನಾಂತರ ರಾಜತಾಂತ್ರಿಕ ಬೆಳವಣಿಗೆಯಲ್ಲಿ, ಅಮೆರಿಕದೊಂದಿಗೆ ಸಮನ್ವಯದಿಂದ ಕೆಲಸ ಮಾಡುತ್ತಿರುವ ಕತಾರಿ ಸಮಾಲೋಚಕರು ಒಪ್ಪಂದವನ್ನು ಅಂತಿಮಗೊಳಿಸಲು ಸಹಾಯ ಮಾಡಲು ಭಾನುವಾರ ಬೆಳಗ್ಗೆ ಟೆಹ್ರಾನ್‌ಗೆ ಆಗಮಿಸಿದ್ದಾರೆ ಎಂದು ವರದಿಯಾಗಿದೆ ಎಂದು ಈ ವಿಷಯದ ಬಗ್ಗೆ ತಿಳಿದಿರುವ ಮೂಲಗಳು ತಿಳಿಸಿವೆ. ನಿಯೋಗವು ಇರಾನಿನ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದೆ ಎಂದು ಅರೆ-ಅಧಿಕೃತ ತಸ್ನಿಮ್ ಸುದ್ದಿ ಸಂಸ್ಥೆ



ವರದಿ ಮಾಡಿದೆ. ಪ್ರಸ್ತಾವಿತ ಒಪ್ಪಂದದ ನಿಯಮ ಮತ್ತು ಸಮಯದ ಕುರಿತು ವಾಷಿಂಗ್ಟನ್ ಮತ್ತು ಟೆಹ್ರಾನ್‌ನಿಂದ ಭಿನ್ನ ಹೇಳಿಕೆಗಳ ನಡುವೆ ಇತ್ತೀಚಿನ ಸುತ್ತಿನ ಚರ್ಚೆಗಳು ನಡೆದಿವೆ. ಭಾನುವಾರದಂದು ತಿಳುವಳಿಕೆ ಪತ್ರಕ್ಕೆ ಸಹಿ ಹಾಕಬಹುದು ಎಂದು ಅಮೆರಿಕ ಸೂಚಿಸಿದ್ದರೂ, ಇರಾನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಆ ಕಾಲಮಿತಿಯನ್ನು ತಿರಸ್ಕರಿಸಿ, ಅಧ್ಯಕ್ಷ ಟ್ರಂಪ್ ಅವರ ಘೋಷಣೆಯನ್ನು ಹಿಂದಕ್ಕೆ ತಳ್ಳಿದೆ. "ಒಪ್ಪಂದಕ್ಕೆ ನಾಳೆ ಸಹಿ ಹಾಕಲು ನಿರ್ಧರಿಸಲಾಗಿದೆ" ಎಂದು ಟ್ರಂಪ್ ಶನಿವಾರ ಮಧ್ಯಾಹ್ನ ಟ್ರೂತ್ ಸೋಶಿಯಲ್‌ನಲ್ಲಿ ಬರೆದಿದ್ದಾರೆ, "ಇರಾನ್ನೊಂದಿಗಿನ ನಮ್ಮ ಸಂಬಂಧವು ಹಿಂದಿನ ಆಡಳಿತಗಳು ಹೊಂದಿದ್ದಕ್ಕಿಂತ ಹೆಚ್ಚು ವಿಭಿನ್ನ ಮತ್ತು ಉತ್ತಮವಾಗಿದೆ" ಎಂದು ಹೇಳಿದರು. ಫಲಿತಾಂಶದ ಬಗ್ಗೆ ಅವರು ಎಚ್ಚರಿಕೆಯ ಆಶಾವಾದವನ್ನು ವ್ಯಕ್ತಪಡಿಸಿದರು, "ಈ ಪ್ರಕ್ರಿಯೆಯು ತ್ವರಿತವಾಗಿ, ಸುಲಭವಾಗಿ ಮತ್ತು ಸರಾಗವಾಗಿ ಕೆಲಸ ಮಾಡುತ್ತದೆ ಎಂದು ಆಶಿಸುತ್ತೇವೆ" ಎಂದು ಹೇಳಿದರು, ಆದರೆ "ಅದು ಆಗದಿದ್ದರೆ, ನಮಗೆ ಅಂತಿಮ ಪರ್ಯಾಯವಿದೆ, ಆಶಾದಾಯಕವಾಗಿ ಮತ್ತೆ ಎಂದಿಗೂ ಬಳಸಲಾಗುವುದಿಲ್ಲ" ಎಂದು ಎಚ್ಚರಿಸಿದರು. ಕೆಲವು ಮಧ್ಯವರ್ತಿಗಳಿಂದ ಆಶಾವಾದದ ಹೊರತಾಗಿಯೂ, ಇರಾನ್ನ ಇಸ್ಲಾಮಿಕ್ ಕ್ರಾಂತಿಕಾರಿ ಕಾವಲು ಪಡೆ ಅಧಿಕಾರಿಗಳು ಸನ್ನಿಹಿತ ಸಹಿ ಹಾಕುವಿಕೆಯ ಹಕ್ಕುಗಳನ್ನು ತಿರಸ್ಕರಿಸಿದ್ದಾರೆ, ಇದು ಪ್ರಕ್ರಿಯೆಗೆ ಮತ್ತಷ್ಟು ಅನಿಶ್ಚಿತತೆಯನ್ನು ಸೇರಿಸಿದೆ. ಇತ್ತೀಚಿನ ವಾರಗಳಲ್ಲಿ ಪ್ರಗತಿ ವರದಿಯಾಗಿದ್ದರೂ, ಯಾವುದೇ ಅಂತಿಮ ಬದ್ಧತೆಯನ್ನು ಮಾಡುವ ಮೊದಲು ಎರಡೂ ಕಡೆಯವರು ಪ್ರಸ್ತಾವನೆಯ ರಾಜಕೀಯ, ಕಾನೂನು ಮತ್ತು ತಾಂತ್ರಿಕ ಅಂಶಗಳನ್ನು ಪರಿಶೀಲಿಸುತ್ತಲೇ ಇದ್ದಾರೆ.

**ಕೆಲವು ಮಧ್ಯವರ್ತಿಗಳಿಂದ ಆಶಾವಾದದ ಹೊರತಾಗಿಯೂ, ಇರಾನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಅಧಿಕಾರಿಗಳು ಸನ್ನಿಹಿತ ಸಹಿ ಹಾಕುವಿಕೆಯ ಹಕ್ಕುಗಳನ್ನು ತಿರಸ್ಕರಿಸಿದ್ದಾರೆ, ಇದು ಪ್ರಕ್ರಿಯೆಗೆ ಮತ್ತಷ್ಟು ಅನಿಶ್ಚಿತತೆಯನ್ನು ಸೇರಿಸಿದೆ. ಇರಾನಿನ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಅವರು ಸಹಿ ಹಾಕುವಿಕೆಯು "ನಾಳೆ ಆಗುವುದಿಲ್ಲ" ಎಂದು ಹೇಳಿದರು, ಆದರೂ ಮುಂಬರುವ ದಿನಗಳಲ್ಲಿ ಅದು ಸಂಭವಿಸುವ ಸಾಧ್ಯತೆಯನ್ನು ಅವರು ತಳ್ಳಿಹಾಕಲಿಲ್ಲ.**

## ಇರಾನ್ ಜೊತೆ ವಿಶಾಲ ಒಪ್ಪಂದ ಸಾಧಿಸಲು ಪ್ರಯತ್ನ

**ವಾಷಿಂಗ್ಟನ್, ಜೂ.14:** ಬೈರುತ್‌ನ ದಕ್ಷಿಣ ಉಪನಗರಗಳಲ್ಲಿ ಇಸ್ರೇಲ್ ನಡೆಸಿದ ವಾಯುದಾಳಿಯ ನಂತರ, ಭಾನುವಾರ "ಎಲ್ಲಾ ಕಡೆಯವರು ಹಿಂದೆ ಸರಿಯಬೇಕು" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಇರಾನ್‌ಜೊತೆ ವಿಶಾಲ ಒಪ್ಪಂದವನ್ನು ಸಾಧಿಸುವ ಪ್ರಯತ್ನಗಳಿಗೆ ಹೊಸ ಹಿಂಸಾಚಾರವು ಅಪಾಯವನ್ನುಂಟು ಮಾಡಬಹುದು ಎಂದು ಎಚ್ಚರಿಸಿದ್ದಾರೆ. ದಹಿಯೆಹ್ ಜಿಲ್ಲೆಯ ಹೆಜ್ಬೊಲ್ಲಾ ಕಮಾಂಡ್ ಕೇಂದ್ರವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ ಎಂದು ಇಸ್ರೇಲಿ ಸೇನೆ ತಿಳಿಸಿದೆ. ಟ್ರೂತ್ ಸೋಷಿಯಲ್‌ನಲ್ಲಿನ ಪೋಸ್ಟ್‌ನಲ್ಲಿ, ಟೆಹ್ರಾನ್ನೊಂದಿಗಿನ ಮಾತುಕತೆಗಳಲ್ಲಿ ಪ್ರಗತಿಯನ್ನು ಗಮನಿಸಿದರೆ ದಾಳಿ ನಡೆಯಬಾರದಿತ್ತು ಎಂದು ಟ್ರಂಪ್ ಹೇಳಿದ್ದಾರೆ. "ಇಂದು ಬೆಳಿಗ್ಗೆ ಬೈರುತ್ ಮೇಲೆ ದಾಳಿ ನಡೆಯಬಾರದಿತ್ತು, ವಿಶೇಷವಾಗಿ ನಾವು ಇರಾನ್ನೊಂದಿಗೆ ಶಾಂತಿ ಒಪ್ಪಂದಕ್ಕೆ ಹತ್ತಿರದಲ್ಲಿರುವ ವಿಶೇಷ ದಿನದಂದು" ಎಂದು ಅವರು ಬರೆದಿದ್ದಾರೆ. ಇಸ್ರೇಲ್ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಒಪ್ಪಿಕೊಂಡರೂ, ಇಸ್ಲಾಮಿಸ್ಟ್ ಗುಂಪಿನ ದಾಳಿಯು ವ್ಯಾಪ್ತಿಯಲ್ಲಿ ಬಹಳ ಸೀಮಿತವಾಗಿದೆ ಎಂದು ಟ್ರಂಪ್ ಹೇಳಿದರು. "ಬೆದರಿಕೆಗಳ ವಿರುದ್ಧ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಇಸ್ರೇಲ್ ಹೊಂದಿದೆ, ಆದರೆ ಅದು ಪ್ರತಿಕ್ರಿಯಿಸಿದ ದಾಳಿ ತುಂಬಾ ಚಿಕ್ಕದಾಗಿದೆ ಮತ್ತು ಅರ್ಥಹೀನವಾಗಿತ್ತು. ಯಾರೂ ಗಾಯಗೊಂಡಿಲ್ಲ, ಗಾಯಗೊಂಡಿಲ್ಲ ಅಥವಾ ಕೊಲ್ಲಲ್ಪಟ್ಟಿಲ್ಲ, ಮತ್ತು ಈ ಪ್ರಮುಖ ಪ್ರಕ್ರಿಯೆಯನ್ನು ಅಡ್ಡಿಪಡಿಸಬಾರದು" ಎಂದು ಅವರು ಹೇಳಿದರು. ಇರಾನ್ನೊಂದಿಗಿನ ಪ್ರಗತಿಯು ಹತ್ತಿರದಲ್ಲಿದೆ ಎಂದು ಟ್ರಂಪ್ ಮತ್ತೊಮ್ಮೆ ವಿಶ್ವಾಸ ವ್ಯಕ್ತಪಡಿಸಿದರು.

"ಲೆಬನಾನ್ ಸೇರಿದಂತೆ ಈ ಪ್ರದೇಶಕ್ಕೆ ಶಾಂತಿಯನ್ನು ತರುವ ಒಪ್ಪಂದಕ್ಕೆ ನಾವು ತುಂಬಾ ಹತ್ತಿರದಲ್ಲಿದ್ದೇವೆ" ಎಂದು ಅವರು ಹೇಳಿದರು. ಎಲ್ಲಾ ಪಕ್ಷಗಳಿಂದ ದಾಳಿಗಳನ್ನು ಕೊನೆಗೊಳಿಸಲು ಅವರು ಕರೆ ನೀಡಿದರು. "ಲೆಬನಾನ್ನಲ್ಲಿ ಎಲ್ಲಿಯೂ ಇಸ್ರೇಲ್‌ನಿಂದ ಇನ್ನು ಮುಂದೆ ದಾಳಿಗಳು ನಡೆಯಬಾರದು, ಆದರೆ ಇಸ್ರೇಲ್ ವಿರುದ್ಧ ಹಿಜ್ಬುಲ್ಲಾ ಸೇರಿದಂತೆ ಯಾವುದೇ ಇತರ ಪಕ್ಷದಿಂದ ಇನ್ನು ಮುಂದೆ ದಾಳಿಗಳು ನಡೆಯಬಾರದು" ಎಂದು ಟ್ರಂಪ್ ಬರೆದಿದ್ದಾರೆ. "ಇದು ದೀರ್ಘ ಮತ್ತು ಸುಂದರವಾದ ಶಾಂತಿಯ ಆರಂಭವಾಗಬಹುದು – ಅದನ್ನು ನಾವು ಹಾಳು ಮಾಡಬಾರದು." ಇಸ್ರೇಲಿ ಮುಷ್ಕರಕ್ಕೆ ಇರಾನ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿತು, ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಈ ದಾಳಿಯು ಮಾತುಕತೆಗಳ ಸಮಯದಲ್ಲಿ ಮಾಡಿದ ಬದ್ಧತೆಗಳನ್ನು ಪೂರೈಸುವ ವಾಷಿಂಗ್ಟನ್ನ ಸಾಮರ್ಥ್ಯದ ಬಗ್ಗೆ ಹೊಸ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಹೇಳಿದರು. "ಅಮೆರಿಕವು ತನ್ನ ಬದ್ಧತೆಗಳನ್ನು ಪೂರೈಸುವ ಇಚ್ಛಾಶಕ್ತಿ ಅಥವಾ ಹಾಗೆ ಮಾಡುವ ಸಾಮರ್ಥ್ಯದ ಕೊರತೆಯನ್ನು ಹೊಂದಿದೆ" ಎಂದು ಗಾಲಿಬಾಫ್ ಸಾಮಾಜಿಕ ಮಾಧ್ಯಮದಲ್ಲಿ ಬರೆದಿದ್ದಾರೆ. ಇತ್ತೀಚಿನ ಬೆಳವಣಿಗೆಗಳು ಟೆಹ್ರಾನ್ ಮತ್ತು ವಾಷಿಂಗ್ಟನ್ ನಡುವಿನ ವಿಶಾಲ ಒಪ್ಪಂದವನ್ನು ತಲುಪುವ ಗುರಿಯನ್ನು ಹೊಂದಿರುವ ಅಂತಿಮ ಹಂತದ ಮಾತುಕತೆಗಳಿಗೆ ಬೆದರಿಕೆ ಹಾಕಬಹುದು ಎಂದು ಅವರು ಎಚ್ಚರಿಸಿದರು.

ಹಿಜ್ಬುಲ್ಲಾದಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ. ಬೈರುತ್‌ನಲ್ಲಿ ಇದೇ ರೀತಿಯ ಇಸ್ರೇಲಿ ದಾಳಿಯು ಇಸ್ರೇಲ್ ಮೇಲೆ ಇರಾನಿನ ಕ್ಷಿಪಣಿ ದಾಳಿಗೆ ಕಾರಣವಾದ ಕೆಲವೇ ದಿನಗಳ ನಂತರ, ಇರಾನ್ನಲ್ಲಿರುವ ಗುರಿಗಳ ವಿರುದ್ಧ ಇಸ್ರೇಲ್ ಪ್ರತೀಕಾರ ತೀರಿಸಿಕೊಂಡಿತು. ಅಂತರರಾಷ್ಟ್ರೀಯ ಒತ್ತಡದ ಅಡಿಯಲ್ಲಿ ಆ ಮುಖಾಮುಖಿಯನ್ನು ತ್ವರಿತವಾಗಿ ನಿಯಂತ್ರಿಸಲಾಯಿತು. ಇರಾನ್ನಿಂದ ಸಂಭವನೀಯ ಪ್ರತಿಕ್ರಿಯೆಗೆ ತಾನು ಸಿದ್ಧನಾಗಿರುವುದಾಗಿ ಇಸ್ರೇಲ್ ಸೇನೆ ಭಾನುವಾರ ತಿಳಿಸಿದೆ.

## ಶಾಂತಿ ಒಪ್ಪಂದದ ವಿರುದ್ಧ ರ್ಯಾಲಿ: ಅರಘ್ಚಿಗೆ ಸಾವು ಎಂದು ಘೋಷಣೆ



ಟೆಹ್ರಾನ್, ಜೂನ್ 14: ಈಶಾನ್ಯ ಇರಾನ್ ನಗರವಾದ ಮಷಾದ್‌ನಲ್ಲಿರುವ ವಿದೇಶಾಂಗ ಸಚಿವಾಲಯದ ಕಚೇರಿಯ ಹೊರಗೆ ಡಜನ್‌ಗಟ್ಟಲೆ ಪ್ರತಿಭಟನಾಕಾರರು ಜಮಾಯಿಸಿ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ವಿರುದ್ಧ ಪ್ರತಿಭಟಿಸಿದರು. ಅಮೆರಿಕ ಜೊತೆಗಿನ ಸಂಭಾವ್ಯ ಒಪ್ಪಂದದ ಕುರಿತು ನಡೆಯುತ್ತಿರುವ ಮಾತುಕತೆಗಳು ಒಂದು ತೀರ್ಮಾನಕ್ಕೆ ಹತ್ತಿರವಾಗುತ್ತಿರುವಂತೆ ತೋರುತ್ತಿದೆ. ಇರಾನ್‌ನಅರೆ-ಅಧಿಕೃತ ಐಆರ್‌ಜಿಸಿ ಬೆಂಬಲಿತ ಫಾರ್ಸ್ ಸುದ್ದಿ ಸಂಸ್ಥೆ ಪ್ರಕಟಿಸಿದ ದೃಶ್ಯಗಳಲ್ಲಿ ಕಪ್ಪು ಚಾಡರ್ಗಳನ್ನು ಧರಿಸಿದ ಮಹಿಳೆಯರು ಅರಘ್ಚಿ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸಚಿವಾಲಯದ ಕಟ್ಟಡದ ಹೊರಗೆ ಕೆಂಪು ಮತ್ತು ಕಪ್ಪು ಧ್ವಜಗಳನ್ನು ಬೀಸುತ್ತಾ "ಅಗೌರವಯುತ ಅರಘ್ಚಿಗೆ ಸಾವು" ಎಂದು ಘೋಷಣೆಗಳನ್ನು ಕೂಗುತ್ತಿರುವುದನ್ನು ತೋರಿಸಿದೆ. ಪಾಕಿಸ್ತಾನ-ಈಜಿಪ್ಟ್ ಮಧ್ಯಸ್ಥಿಕೆಯಲ್ಲಿ ವಾಷಿಂಗ್ಟನ್ ಜೊತೆಗಿನ ಪ್ರಸ್ತಾವಿತ ಶಾಂತಿ ಒಪ್ಪಂದಕ್ಕೆ ದೇಶದೊಳಗಿನ ಕಠಿಣ ಬಣಗಳಿಂದ ಹೆಚ್ಚುತ್ತಿರುವ ವಿರೋಧದ ನಡುವೆ ಶನಿವಾರ ಪ್ರತಿಭಟನೆ ನಡೆಯಿತು. ಈ ಒಪ್ಪಂದವು ಟೆಹ್ರಾನ್ ಕಾರ್ಯತಂತ್ರದ ಸ್ಥಾನಕ್ಕೆ ಹಾನಿಕಾರಕವಾಗಿದೆ ಮತ್ತು ವಿಶ್ವದ ಪ್ರಮುಖ ಇಂಧನ ಹಡಗು ಮಾರ್ಗಗಳಲ್ಲಿ ಒಂದಾದ ಹಾರ್ಮುಜ್ ಜಲಸಂಧಿಯ ಮೇಲಿನ ಅದರ ಹತೋಟಿಯನ್ನು ಕಡಿಮೆ ಮಾಡುತ್ತದೆ ಎಂದು ವಿಮರ್ಶಕರು ವಾದಿಸುತ್ತಾರೆ. ಹೆಚ್ಚುವರಿಯಾಗಿ, ಕೆಲವು ತೀವ್ರಗಾಮಿಗಳು ಮಾತುಕತೆಯ ಸಮಯದಲ್ಲಿ ಇರಾನಿನ ಸಮಾಲೋಚಕರು ಅತಿಯಾದ ರಿಯಾಯಿತಿಗಳನ್ನು ನೀಡಿದ್ದಾರೆ ಎಂದು ಆರೋಪಿಸಿದ್ದಾರೆ, ಇದು ಅಮೆರಿಕ ಮತ್ತು ಇಸ್ರೇಲ್ಗೆ ಹೆಚ್ಚು ಅನುಕೂಲಕರವಾಗಿದೆ, ಇದು ಶರಣಾಗತಿಗೆ ಹೋಲುತ್ತದೆ. ಅರಾಘ್ಚಿ ರಾಜ್ಯ ಮಾಧ್ಯಮಕ್ಕೆ ನೀಡಿದ ದೂರದರ್ಶನದ ಸಂದರ್ಶನದಲ್ಲಿ ಮಾತುಕತೆಗಳ ಬಗ್ಗೆ ಚರ್ಚಿಸಿದ ಒಂದು ದಿನದ ನಂತರ ಈ ಪ್ರದರ್ಶನಗಳು ಬಂದವು. ಟಿವಿ ಕಾರ್ಯಕ್ರಮದಲ್ಲಿ, ಚರ್ಚೆಯಲ್ಲಿರುವ ಒಪ್ಪಂದವು ಇರಾನ್ ಬಂದರುಗಳ ಮೇಲಿನ ಯುಎಸ್ ನೌಕಾ ದಿಗ್ಬಂಧನವನ್ನು ತೆಗೆದುಹಾಕಲು ಕಾರಣವಾಗುತ್ತದೆ ಎಂದು ಅರಾಘ್ಚಿ ಹೇಳಿದರು, ಇರಾನ್ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಯನ್ನು ನಿರ್ಬಂಧಿಸಲು ಮುಂದಾದ ನಂತರ ವಾಷಿಂಗ್ಟನ್ ವಿಧಿಸಿತು, ಆದರೆ ಇರಾನ್ ಪ್ರತಿಯಾಗಿ ಪ್ರಮುಖ ಜಲಸಂಧಿಯ ಮೇಲಿನ ತನ್ನ ದಿಗ್ಬಂಧನವನ್ನು ತೆಗೆದುಹಾಕುತ್ತದೆ, ಆದರೂ ಸಮುದ್ರ ಸಂಚಾರವು ಶೀಘ್ರದಲ್ಲೇ ಯುದ್ಧಪೂರ್ವ ಮಟ್ಟಕ್ಕೆ ಪುನರಾರಂಭಗೊಳ್ಳುತ್ತದೆ ಎಂದು ಅದು ನಿರಾಕರಿಸಿತು. "ಹಾರ್ಮುಜ್ ಜಲಸಂಧಿಯ ಆಡಳಿತವು ಇನ್ನು ಮುಂದೆ ಮೊದಲಿನಂತೆಯೇ ಇರುವುದಿಲ್ಲ" ಎಂದು ಅರಘ್ಚಿ ಹೇಳಿದರು, ಜಲಮಾರ್ಗವನ್ನು ಇರಾನ್ನ ಪ್ರಮುಖ ತಡೆಗಟ್ಟುವ ಸಾಧನಗಳಲ್ಲಿ ಒಂದೆಂದು ವಿವರಿಸಿದರು. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪಾಕಿಸ್ತಾನಿ ಅಧಿಕಾರಿಗಳು ಯುದ್ಧವನ್ನು ಕೊನೆಗೊಳಿಸುವ ಒಪ್ಪಂದಕ್ಕೆ ಭಾನುವಾರದ ಮುಂಚೆಯೇ ಸಹಿ ಹಾಕಬಹುದು ಎಂದು ಸೂಚಿಸಿದರು, ಇದು ಪ್ರಸ್ತುತ ಸ್ಥಗಿತಗೊಂಡ ಸ್ಥಿತಿಯಲ್ಲಿದೆ. ಆದಾಗ್ಯೂ, ಇರಾನಿನ ಅಧಿಕಾರಿಗಳು ಹೆಚ್ಚು ಎಚ್ಚರಿಕೆಯ ವಿಧಾನವನ್ನು ತೆಗೆದುಕೊಂಡಿದ್ದಾರೆ ಮತ್ತು ಪ್ರಸ್ತುತ ಚರ್ಚೆಗಳು ಮುಂದುವರೆದಿವೆ ಮತ್ತು ಯಾವುದೇ ಅಂತಿಮ ಒಪ್ಪಂದವನ್ನು ಇನ್ನೂ ಅನುಮೋದಿಸಲಾಗಿಲ್ಲ ಮತ್ತು ಭಾನುವಾರದಂದು ಹಸಿರು ನಿಶಾನೆ ತೋರಿಸಲಾಗುವುದಿಲ್ಲ ಎಂದು ಹೇಳಿದ್ದಾರೆ.

ಇದಲ್ಲದೆ, ಟೆಹ್ರಾನ್ ಯುಎಸ್ ಜೊತೆಗಿನ ಸಂಭಾವ್ಯ ತಿಳುವಳಿಕೆ ಒಪ್ಪಂದದ ಕುರಿತು ಇನ್ನೂ ಅಂತಿಮ ನಿರ್ಧಾರವನ್ನು ತಲುಪಿಲ್ಲ, ಅದರ ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕ ಅಂಶಗಳು ಪ್ರಸ್ತುತ ಪರಿಶೀಲನೆಯಲ್ಲಿವೆ.

## ಮುಂಬರುವ ಅಮೆರಿಕ-ಇರಾನ್ ಒಪ್ಪಂದದ ನಿಯಮಗಳ ಬಗ್ಗೆ ಇಸ್ರೇಲ್ ಅತೃಪ್ತಿ: ವರದಿ

**ಟೆಲ್ ಅವಿವ್, ಜೂನ್ 14:** ಇಸ್ರೇಲ್ ಅಧಿಕಾರಿಗಳು ಯೋಜಿತ ಅಮೆರಿಕ-ಇರಾನ್ ಒಪ್ಪಂದದ ನಿಯಮಗಳ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿದ್ದಾರೆ ಎಂದು ಹಿರಿಯ ಇಸ್ರೇಲಿ ಅಧಿಕಾರಿಯೊಬ್ಬರು ವೈನೆಟ್ ಸುದ್ದಿ ಪೋರ್ಟಲ್‌ನಲ್ಲಿ ಭಾನುವಾರ ವರದಿ ಮಾಡಿದ್ದಾರೆ.

ಒಪ್ಪಂದದ ಸಮಯದ ಬಗ್ಗೆ ನಿರಂತರ ಅನಿಶ್ಚಿತತೆಯ ಮಧ್ಯೆ ವರದಿ ಬಂದಿದೆ, ಇರಾನ್ ಒಪ್ಪಂದಕ್ಕೆ ಭಾನುವಾರ ಸಹಿ ಹಾಕಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒತ್ತಾಯಿಸಿದ್ದಾರೆ. ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಅವರ ಹೇಳಿಕೆಗಳನ್ನು ಅನುಸರಿಸಿ ಅವರ ಹೇಳಿಕೆ ಬಂದಿದ್ದು, ಅವರು ಸಹಿ ಆ ಸಮಯದೊಳಗೆ ನಡೆಯುತ್ತದೆ ಎಂದು ವಿವಾದಿಸಿದರು, ಮುಂಬರುವ ದಿನಗಳಲ್ಲಿ ಅದು ಸಂಭವಿಸಬಹುದು ಎಂದು ಹೇಳಿದರು. ಅಮೆರಿಕ ಮತ್ತು ಇರಾನ್ ನಡುವಿನ ಶಾಂತಿ ಒಪ್ಪಂದದ ಅಂತಿಮ ಅಂಶಗಳನ್ನು ಇಸ್ರೇಲ್ ಸೇರಿದಂತೆ ಎಲ್ಲಾ ಭಾಗಿಯಾಗಿರುವ ಪಕ್ಷಗಳು ಒಪ್ಪಿಕೊಂಡಿವೆ ಎಂದು ಟ್ರಂಪ್ ಈ ಹಿಂದೆ ಹೇಳಿದ್ದರು. ಒಪ್ಪಂದಕ್ಕೆ ಭಾನುವಾರ ಸಹಿ ಹಾಕುವ ನಿರೀಕ್ಷೆಯಿದೆ ಎಂದು ಅವರು ಶನಿವಾರ ಪುನರುಚ್ಚರಿಸಿದರು. ಆದಾಗ್ಯೂ, ವೈನೆಟ್ ಉಲ್ಲೇಖಿಸಿದ ಇಸ್ರೇಲಿ ಅಧಿಕಾರಿ ಉದಯೋನ್ಮುಖ ಚೌಕಟ್ಟಿನ ಬಗ್ಗೆ ಕಳವಳ



ವ್ಯಕ್ತಪಡಿಸಿದರು. "(ಘೋಷಿತ ತಿಳುವಳಿಕೆಯ ಜ್ಞಾಪಕ ಪತ್ರದೊಂದಿಗೆ) ಯಾರೂ ಸಂತೋಷವಾಗಿಲ್ಲ. ಇದು ನಮಗೆ ಕೆಟ್ಟದು ಮತ್ತು ಇಸ್ರೇಲಿ ಹಿತಾಸಕ್ತಿಗಳಿಗೆ ಹಾನಿ ಮಾಡುತ್ತದೆ ಎಂದು ನಾವು ಅರ್ಥಮಾಡಿಕೊಂಡಿದ್ದೇವೆ" ಎಂದು ಮೂಲಗಳು ತಿಳಿಸಿವೆ. ಮಾತುಕತೆ ಪ್ರಕ್ರಿಯೆಯಲ್ಲಿ ತನ್ನ ನಿಲುವು ಸಮರ್ಪಕವಾಗಿ ಪ್ರತಿಫಲಿಸಿಲ್ಲ ಮತ್ತು ಮಾತುಕತೆಯ ಫಲಿತಾಂಶದ ಮೇಲೆ ಅದು ಸೀಮಿತ ಪ್ರಭಾವ ಬೀರಿದೆ ಎಂದು ಇಸ್ರೇಲ್ ಭಾವಿಸುತ್ತದೆ ಎಂದು ಅಧಿಕಾರಿ ಹೇಳಿದ್ದಾರೆ. ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುವುದನ್ನು ತಡೆಯುವ ಗುರಿಯನ್ನು ಈ ಒಪ್ಪಂದವು ಪ್ರಾಥಮಿಕವಾಗಿ ಹೊಂದಿದೆ ಎಂದು ವಾಷಿಂಗ್ಟನ್ ವಿವರಿಸಿದ್ದರೂ, ಅಪಾಯಗಳು ಮತ್ತಷ್ಟು ವಿಸ್ತರಿಸುತ್ತವೆ ಎಂದು ಇಸ್ರೇಲಿ ಅಧಿಕಾರಿಗಳು ವಾದಿಸುತ್ತಾರೆ ಎಂದು ವರದಿಯಾಗಿದೆ. ಈ ಕಳವಳಗಳಲ್ಲಿ ಇರಾನ್‌ನ ನಿಖರ-ನಿರ್ದೇಶಿತ ಕ್ಷಿಪಣಿ ವ್ಯವಸ್ಥೆಗಳ ಅಭಿವೃದ್ಧಿ, ಲೆಬನಾನ್ ಮತ್ತು ಯೆಮೆನ್ ನ ಮಿತ್ರ ಗುಂಪುಗಳಿಗೆ ಅದರ ಬೆಂಬಲ ಮತ್ತು ಇಸ್ರೇಲ್ ತನ್ನ ಭದ್ರತೆಗೆ ವಿಶಾಲವಾದ ದೀರ್ಘಕಾಲೀನ ಬೆದರಿಕೆಗಳೆಂದು ಪರಿಗಣಿಸುವ ಅಂಶಗಳು ಸೇರಿವೆ. ವರದಿಯಾದ ಅತೃಪ್ತಿಯು ರಾಜತಾಂತ್ರಿಕ ಆವೇಗ ಮುಂದುವರಿದಿದ್ದರೂ ಸಹ, ಪ್ರಸ್ತಾವಿತ ಒಪ್ಪಂದದ ಸುತ್ತಲಿನ ವ್ಯಾಪಕ ಪ್ರಾದೇಶಿಕ ಸೂಕ್ಷ್ಮತೆಗಳನ್ನು ಒತ್ತಿಹೇಳುತ್ತದೆ. ವರದಿಯ ಪ್ರಕಾರ, ಉದಯೋನ್ಮುಖ ಚೌಕಟ್ಟು ಇರಾನ್ನಿಂದ ನಿರ್ಣಾಯಕ ಕಾರ್ಯತಂತ್ರದ ಬೆದರಿಕೆಗಳನ್ನು ಪರಿಗಣಿಸುವದನ್ನು ಸಂಪೂರ್ಣವಾಗಿ ಪರಿಹರಿಸದಿರಬಹುದು ಎಂಬ ಕಳವಳವನ್ನು ಇಸ್ರೇಲ್ ಹೊಂದಿದೆ. ಈ ಆಕ್ಷೇಪಣೆಗಳ ಹೊರತಾಗಿಯೂ, ಅಮೆರಿಕ ಪ್ರಸ್ತಾವಿತ ಇತ್ಯರ್ಥವನ್ನು ಮುಂದುವರೆಸಿದೆ, ಇದು ಈ ಪ್ರದೇಶದಲ್ಲಿ ಉಲ್ಬಣಗೊಳ್ಳುವಿಕೆ ಮತ್ತು ಪರಮಾಣು ನಿಯಂತ್ರಣದತ್ತ ಪ್ರಮುಖ ಹೆಜ್ಜೆಯಾಗಿ ಪ್ರಸ್ತುತಪಡಿಸಿದೆ. ಪರಮಾಣು ಸಮಸ್ಯೆಯು ಕೇಂದ್ರೀಯ ಅಂಟಿಕೊಳ್ಳುವ ಅಂಶವಾಗಿ ಉಳಿದಿದೆ, ಏಕೆಂದರೆ ಇರಾನ್ ಪುಷ್ಟೀಕರಣ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಲ್ಲಿಸುವ ಬೇಡಿಕೆಗಳನ್ನು ದೀರ್ಘಕಾಲದಿಂದ ವಿರೋಧಿಸಿದೆ.

## ಆರ್ಚರಿ ವಿಶ್ವಕಪ್: ಭಾರತಕ್ಕೆ ಚಿನ್ನ, ಧೀರಜ್ ಬೊಮ್ಮದೇವರ ಸಾಧನೆ

**ಅಂಟಲ್ಯ (ಟರ್ಕಿಯೆ), ಜೂ.14:** ಭಾರತದ ಧೀರಜ್ ಬೊಮ್ಮದೇವರ ಪುರುಷರ ವೈಯಕ್ತಿಕ ರಿಕರ್ವ್ ಚಿನ್ನದ ಪದಕವನ್ನು ಗೆದ್ದರು ಮತ್ತು ಭಾನುವಾರ ಇಲ್ಲಿ ನಡೆದ ಬಿಲ್ಲುಗಾರಿಕೆ ವಿಶ್ವಕಪ್ 3 ರಲ್ಲಿ 17 ವರ್ಷದ ಕುಂಕುಮ್ ಮೊಹೂದ್ ಅವರೊಂದಿಗೆ ಮಿಶ್ರ ತಂಡ ಪ್ರಶಸ್ತಿಯನ್ನು ಗೆದ್ದರು. ಪುರುಷರ ವೈಯಕ್ತಿಕ ಫೈನಲ್‌ನಲ್ಲಿ ಧೀರಜ್ ಬೊಮ್ಮದೇವರ ಅವರು ಕೊರಿಯಾ ಗಣರಾಜ್ಯದ ಲೀ ವೂ-ಸಿಯೋಕ್ ಅವರನ್ನು 7-3 ಅಂತರದಿಂದ ಸೋಲಿಸಿ ಅಗ್ರಸ್ಥಾನ ಪಡೆದರು. ಸೆಮಿಫೈನಲ್‌ನಲ್ಲಿ, ಭಾರತೀಯ ಬಿಲ್ಲುಗಾರ 3-1 ಅಂತರದಿಂದ ಚೇತರಿಸಿಕೊಂಡು ಜರ್ಮನಿಯ ಮೊರಿಟ್ಜ್ ವೈಸರ್ ಅವರನ್ನು 6-4 ಅಂತರದಿಂದ ಸೋಲಿಸಿದರು. ಇದು ಬಿಲ್ಲುಗಾರಿಕೆ ವಿಶ್ವಕಪ್ನಲ್ಲಿ ಧೀರಜ್ ಅವರ ಮೊದಲ ವೈಯಕ್ತಿಕ ಚಿನ್ನದ ಪದಕ ಮತ್ತು ಒಟ್ಟಾರೆಯಾಗಿ ನಾಲ್ಕನೇ ಪದಕವಾಗಿತ್ತು.



ಹಿಂದಿನ ಮೂರು ಕಂಚಿನ ಪದಕಗಳಾಗಿದ್ದವು. ವಾಸ್ತವವಾಗಿ, 2021 ರಲ್ಲಿ ಅತನುದಾಸ್ ಜಯಗಳಿಸಿದ ನಂತರ ಆರ್ಚರಿ ವಿಶ್ವಕಪ್‌ನಲ್ಲಿ ಭಾರತಕ್ಕೆ ದೊರೆತ ಮೊದಲ ಪುರುಷರ ವೈಯಕ್ತಿಕ ರಿಕರ್ವ್ ಚಿನ್ನದ ಪದಕ ಇದಾಗಿದೆ. ಆರ್ಚರಿ ವಿಶ್ವಕಪ್ ಹಂತದಲ್ಲಿ ವೈಯಕ್ತಿಕ ರಿಕರ್ವ್ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಪೋಡಿಯಂ ಅನ್ನು ಅಗ್ರಸ್ಥಾನಕ್ಕೇರಿಸಿದ ಏಕೈಕ ಭಾರತೀಯ ಜಯಂತ ತಾಲೂಕ್ದಾರ್. ದಿನದ ಆರಂಭದಲ್ಲಿ, ಮೂರನೇ ಶ್ರೇಯಾಂಕಿತರಾದ ಧೀರಜ್ ಮತ್ತು ಕುಂಕುಮ್, ದಕ್ಷಿಣ ಕೊರಿಯಾದ ಅಗ್ರ ಶ್ರೇಯಾಂಕಿತ ತಂಡವಾದ ಓಹ್ ಯೆಜಿನ್ ಮತ್ತು ಕಿಮ್ ಜೆ-ಡಿಯೋಕ್ ಅವರನ್ನು ಫೈನಲ್ನಲ್ಲಿ 5-1 ಅಂತರದಿಂದ ಸೋಲಿಸಿ ರಿಕರ್ವ್ ಮಿಶ್ರ ತಂಡ ಚಿನ್ನ ಗೆದ್ದರು.

ಪುರುಷರ ವೈಯಕ್ತಿಕ ಸ್ಪರ್ಧೆಯಲ್ಲಿ, ಕುಶಾಲ್ ದಲಾಲ್ ಮತ್ತು ಗಣೇಶ್ ಮೂರನೇ ಸುತ್ತಿನಲ್ಲಿ ನಿರ್ಗಮಿಸಿದರು, ಆದರೆ ಜ್ಯೋತಿ ವೆನ್ನಮ್ ಮತ್ತು ಪರ್ನೀತ್ ಕೌರ್ ಮಹಿಳೆಯರ ವೈಯಕ್ತಿಕ ಸ್ಪರ್ಧೆಯಲ್ಲಿ ಅದೇ ಅದೃಷ್ಟವನ್ನು ಅನುಭವಿಸಿದರು. ಮೆಕ್ಸಿಕೋದ ಪ್ಯೂಬ್ಲಾದಲ್ಲಿ ನಡೆದ ಮೊದಲ ಲೆಗ್ನಲ್ಲಿ ಮಧುರಾ ಧಮನ್ಗೋಂಕರ್, ಪ್ರಗತಿ ಮತ್ತು ಜ್ಯೋತಿ ಸುರೇಖಾ ವೆನ್ನಮ್ ಮಹಿಳೆಯರ ಸಂಯುಕ್ತ ಚಿನ್ನದ ಪದಕವನ್ನು ಗೆದ್ದು ಭಾರತದ ಏಕೈಕ ಪೋಡಿಯಂ ಫಿನಿಶ್ ಅನ್ನು ಸಾಧಿಸಿದರು. ಶಾಂಘೈನಲ್ಲಿ ನಡೆದ ಎರಡನೇ ಬಿಲ್ಲುಗಾರಿಕೆ ವಿಶ್ವಕಪ್‌ನಲ್ಲಿ ಭಾರತೀಯ ಬಿಲ್ಲುಗಾರರು ಎರಡು ಪದಕಗಳನ್ನು ಗೆದ್ದಿದ್ದರು, ಮಹಿಳೆಯರ ರಿಕರ್ವ್ ತಂಡ ಚಿನ್ನ ಗೆದ್ದರೆ ಮತ್ತು ಪುರುಷರ ಕಾಂಪೌಂಡ್ನಲ್ಲಿ ಸಾಹಿಲ್ ಜಾಧವ್ ವೈಯಕ್ತಿಕ ಕಂಚಿನ ಪದಕ ಗೆದ್ದರು.

## ಕಾಮನ್ವೆಲ್ತ್ ಕ್ರೀಡಾಕೂಟಕ್ಕೆ ನೀರಜ್ ಚೋಪ್ರಾ ತಾತ್ಕಾಲಿಕ ಆಯ್ಕೆ

**ನವದೆಹಲಿ, ಜೂನ್ 14:** ಭಾರತದ ಜಾವೆಲಿನ್ ಥ್ರೋ ಪಟು ನೀರಜ್ ಚೋಪ್ರಾ ಅವರನ್ನು ಜುಲೈ 23 ರಿಂದ ಆಗಸ್ಟ್ 2 ರವರೆಗೆ ಸ್ಕಾಟ್ಲೆಂಡ್ನ ಗ್ಲಾಸ್ಗೋದಲ್ಲಿ ನಡೆಯಲಿರುವ 2026 ರ ಕಾಮನ್ವೆಲ್ತ್ ಕ್ರೀಡಾಕೂಟಕ್ಕಾಗಿ ಭಾರತದ 32 ಸದಸ್ಯರ ಅಥ್ಲೆಟಿಕ್ಸ್ ತಂಡದಲ್ಲಿ ತಾತ್ಕಾಲಿಕವಾಗಿ ಸೇರಿಸಿಕೊಳ್ಳಲಾಗಿದೆ. ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ನೀರಜ್ ಬೆನ್ನುನೋವಿನಿಂದ ಚೇತರಿಸಿಕೊಳ್ಳುತ್ತಿರುವುದರಿಂದ 2026 ರ ಅಥ್ಲೆಟಿಕ್ಸ್ ಋತುವನ್ನು ಇನ್ನೂ



ಪ್ರಾರಂಭಿಸಿಲ್ಲವಾದರೂ, ಅಥ್ಲೆಟಿಕ್ಸ್ ಫೆಡರೇಶನ್ ಆಫ್ ಇಂಡಿಯಾ (ಎಎಫ್ಐ) ಅವರನ್ನು ಗ್ಲಾಸ್ಗೋ 2026 ರ 32 ಸದಸ್ಯರ ತಂಡದಲ್ಲಿ ತಾತ್ಕಾಲಿಕವಾಗಿ ಸೇರಿಸಿದೆ.

ಆದಾಗ್ಯೂ, 28 ವರ್ಷದ ಭಾರತೀಯ ಅಥ್ಲೀಟ್ ಅಂತಿಮ ತಂಡದಲ್ಲಿ ಸ್ಥಾನ ಪಡೆಯಲು ಮುಂದಿನ ದಿನಗಳಲ್ಲಿ ಸಿಡಬ್ಲ್ಯೂಜಿ ಅರ್ಹತಾ ಮಾನದಂಡ 82.61 ಮೀ ತಲುಪಬೇಕಾಗಿದೆ. "ನೀರಜ್ ಚೋಪ್ರಾ ಚೇತರಿಸಿಕೊಂಡಿದ್ದಾರೆ ಮತ್ತು ಮುಂದಿನ ಕೆಲವು ದಿನಗಳಲ್ಲಿ ಸ್ಪರ್ಧಿಸಲು ಸಿದ್ಧರಾಗಿದ್ದಾರೆ. ಅವರನ್ನು ಸೇರಿಸಲು ಅವರು ನಮ್ಮನ್ನು ಕೇಳಿಕೊಂಡರು. ಈ ತಿಂಗಳು ಅವರು ಕೆಲವು ಪಂದ್ಯಗಳಲ್ಲಿ ಆಡುತ್ತಾರೆ ಎಂದು ನಾವು ನಿರೀಕ್ಷಿಸುತ್ತೇವೆ" ಎಂದು ಎಎಫ್ಐ ಆಯ್ಕೆ ಸಮಿತಿಯ ಅಧ್ಯಕ್ಷ ಅಡಿಲ್ಲೆ ಸುಮರಿವಾಲ್ಲಾ ಹೇಳಿದರು. "ಅವರ ಚೇತರಿಕೆ ಚೆನ್ನಾಗಿ ನಡೆಯುತ್ತಿದೆ ಮತ್ತು ಮುಂದಿನ ಹತ್ತು ದಿನಗಳಲ್ಲಿ ಅವರು ಸ್ಪರ್ಧೆಗೆ ಸಿದ್ಧರಾಗುತ್ತಾರೆ ಆದರೆ ಅವರು ಅರ್ಹತೆ ಪಡೆಯಬೇಕಾಗುತ್ತದೆ." 2018 ರ ಕಾಮನ್ವೆಲ್ತ್ ಕ್ರೀಡಾಕೂಟ ಚಾಂಪಿಯನ್ ನೀರಜ್ ಚೋಪ್ರಾ ಕಳೆದ ವರ್ಷ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡಿದ್ದರು.

## ಪಾಕಿಸ್ತಾನ ವಿರುದ್ಧ ಗೆದ್ದ ಭಾರತದ ವನಿತೆಯರು

**ಲಂಡನ್, ಜೂ.14:** ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಮಹಿಳಾ ಟಿ20 ವಿಶ್ವಕಪ್ ಪಂದ್ಯದಲ್ಲಿ ಭಾರತ ಮಹಿಳಾ ತಂಡವು ಪಾಕಿಸ್ತಾನವನ್ನು 64 ರನ್‌ಗಳಿಂದ ಭರ್ಜರಿಯಾಗಿ ಸೋಲಿಸಿತು. ಸ್ಮೃತಿ ಮಂಧಾನ ಅವರ ಅರ್ಧಶತಕದ ನೆರವಿನಿಂದ ಭಾರತ 170 ರನ್ ಗಳಿಸಿತು. ಈ ಗೆಲುವಿನೊಂದಿಗೆ

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಮಹಿಳಾ ಟಿ20 ವಿಶ್ವಕಪ್ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಹಾಗೂ ಪಾಕಿಸ್ತಾನದ ಮಹಿಳಾ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ನಿರೀಕ್ಷೆಯಂತೆಯೇ ಪಾಕಿಸ್ತಾನವನ್ನು ಸೋಲಿಸಿದ ಭಾರತ ವನಿತಾ ಪಡೆ, ಟಿ20 ವಿಶ್ವಕಪ್‌ನಲ್ಲಿ ಗೆಲುವಿನ ಶುಭಾರಂಭ ಮಾಡಿದೆ.

ಇದರ ಜೊತೆಗೆ ಪಾಕಿಸ್ತಾನದ ವಿರುದ್ಧ ತನ್ನ ಪಾರುಪತ್ಯವನ್ನು ಮುಂದುವರೆಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ, ಸ್ಮೃತಿ ಮಂಧಾನ ಅವರ ಅರ್ಧಶತಕದ ನೆರವಿನಿಂದ 170 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಪಾಕಿಸ್ತಾನ ದೀಪ್ತಿ ಶರ್ಮಾ ಅವರ ಸ್ಪಿನ್ ಮ್ಯಾಜಿಕ್ ಮುಂದೆ ಪೂರ್ಣ 20 ಓವರ್?ಗಳನ್ನು



ಆಡಲು ಸಾಧ್ಯವಾಗದೆ 106 ರನ್?ಗಳಿಗೆ ಆಲೌಟ್ ಆಗುವ ಮೂಲಕ 64 ರನ್‌ಗಳ ಹೀನಾಯ ಸೋಲು ಕಂಡಿತು.

### ಪಾಕ್ ವಿರುದ್ಧ ಮತ್ತೆ ಅಬ್ಬರಿಸಿದ ಸ್ಮೃತಿ

ನಾಲ್ಕು ವರ್ಷಗಳ ಹಿಂದೆ ಅಂದರೆ, 2022 ರ ಕಾಮನ್‌ವೆಲ್ತ್ ಕ್ರೀಡಾಕೂಟದ ಸಮಯದಲ್ಲಿ ಭಾರತ ಮತ್ತು ಪಾಕಿಸ್ತಾನ ಎಡ್ಜ್‌ಬಾಸ್ಟನ್‌ನಲ್ಲಿ ಮುಖಾಮುಖಿಯಾಗಿದ್ದವು. ಆ ಪಂದ್ಯದಲ್ಲಿ ಭಾರತ, ಪಾಕಿಸ್ತಾನವನ್ನು ಇದೇ ರೀತಿ ಏಕಪಕ್ಷೀಯವಾಗಿ ಸೋಲಿಸಿತ್ತು. ಆ ಪಂದ್ಯದಲ್ಲೂ ಅಗ್ರ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಈ ಬಾರಿಯೂ ಕಥೆ ಭಿನ್ನವಾಗಿರಲಿಲ್ಲ. ಈ ಟಿ20 ವಿಶ್ವಕಪ್ ಪಂದ್ಯದಲ್ಲಿ, ಭಾರತ ಮೊದಲು ಬ್ಯಾಟ್ ಮಾಡಿ 170 ರನ್‌ಗಳ ಬೃಹತ್ ಮೊತ್ತವನ್ನು ಗಳಿಸಿತು. ತಂಡದ ಪರ ಮಂಧಾನ 68 ರನ್ ಗಳಿಸಿದರು, ಇದು ಪಾಕಿಸ್ತಾನ ವಿರುದ್ಧ ಅವರ ಅತ್ಯಧಿಕ ಸ್ಕೋರ್. ರೀಚಾ ಘೋಷ್ ಕೂಡ ಸ್ಫೋಟಕ 34 ರನ್‌ಗಳ ಇನ್ನಿಂಗ್ಸ್ ಆಡಿದರು.

### 5 ವಿಕೆಟ್‌ಗಳ ಪಡೆದ ದೀಪ್ತಿ

ಇದಕ್ಕೆ ಪ್ರತಿಕ್ರಿಯೆಯಾಗಿ ಈ ಗುರಿ ಬೆನ್ನಟ್ಟಿದ ಪಾಕಿಸ್ತಾನಕ್ಕೆ ಆರಂಭಿಕ ಆಟಗಾರ್ತಿಯರು ಉತ್ತಮ ಆರಂಭವನ್ನು ನೀಡಿದರು. ಪವರ್‌ಪ್ಲೇನಲ್ಲಿ ಕೇವಲ ಒಂದು ವಿಕೆಟ್ ನಷ್ಟಕ್ಕೆ 50 ರನ್ ಕಲೆಹಾಕಿದರು. ಆದಾಗ್ಯೂ, ಅನುಭವಿ ಸ್ಪಿನ್ನರ್ ದೀಪ್ತಿ ಶರ್ಮಾ ದಾಳಿಗಿಳಿದ ಕೂಡಲೇ ಪಾಕಿಸ್ತಾನದ ಪೆವಿಲಿಯನ್ ಪರೇಡ್ ಶುರುವಾಯಿತು.

ಇತ್ತ ಶ್ರೀಚರಣಿ ಮತ್ತು ಶಫಾಲಿ ವರ್ಮಾ ಕೂಡ ಪಾಕಿಸ್ತಾನಕ್ಕೆ ಹೊಡೆತ ನೀಡಿದರು, ಶಫಾಲಿ ಪಾಕಿಸ್ತಾನದ ನಾಯಕಿ ಫಾತಿಮಾ ಸನಾ ಅವರನ್ನು ಶೂನ್ಯಕ್ಕೆ ಔಟ್ ಮಾಡುವ ಮೂಲಕ ಅತಿದೊಡ್ಡ ವಿಕೆಟ್ ಪಡೆದರು. ನಂತರ, 17 ನೇ ಓವರ್‌ನಲ್ಲಿ, ದೀಪ್ತಿ ಮೂರು ವಿಕೆಟ್‌ಗಳನ್ನು ಕಬಳಿಸಿ ಪಾಕಿಸ್ತಾನವನ್ನು 106 ರನ್‌ಗಳಿಗೆ ಆಲೌಟ್ ಮಾಡುವಲ್ಲಿ ಯಶಸ್ವಿಯಾದರು.